ಸಂಪುಟ: 14 Volume ಸಂಚಿಕೆ: 102 Issue ಪುಟಗಳು 08 Pages ಭಾನುವಾರ 26 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕಲಿಕೆ ವಿಷಯ ಬರೀ ತಿಳುವಳಿಕೆಯ ಮಟ್ಟದಲ್ಲಿ ಉಳಿಯದೆ ಹೆಚ್ಚು ಅರ್ಥಪೂರ್ಣ ಮಾಡಬಲ್ಲ ಮನುಷ್ಯನೊಬ್ಬ ಬೇಕು. ಆತನೇ ಕೋಚ್ ಅಥವಾ ಗುರು.

–ಪಿ. ಲಂಕೇಶ್



ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆಯಲ್ಲಿ ಇಂದು ಆಯೋಜಿಸಿದ್ದ ವಿಧಾನಸಭೆಯ ಮಾಜಿ ಸಭಾಧ್ಯಕ್ಷರಾದ ದಿವಂಗತ ಕೆ.ಆರ್.ಪೇಟೆ ಕೃಷ್ಣಾ ಅವರ ಹುಟ್ಟುಹಬ್ಬ, ಸಾಧಕರಿಗೆ ಕೃಷ್ಣಾ ಪುರಸ್ಕಾರ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಿದರು. ಮಾಜಿ ಸಚಿವರಾದ ನಾರಾಯಣಗೌಡ, ಚೆಲುವರಾಯಸ್ವಾಮಿ, ಶ್ರೀಮತಿ ಇಂದಿರಮ್ಮ ಕೃಷ್ಣಾ ಅವರು ಉಪಸ್ಥಿತರಿದ್ದರು.

## ಗ್ರಾ.ಪಂ. ವ್ಯಾಪ್ತಿಯಲ್ಲಿ ಫಲವೃಕ್ಷೋದ್ಯಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸರ್ಕಾರಿ ಜಮೀನಿನಲ್ಲಿ "ಫಲವೃಕ್ಷೋದ್ಯಾನ" ಅಭಿವೃದ್ಧಿಪಡಿಸಿ ಇದನ್ನು ವಾರ್ಷಿಕ ಆಧಾರದ ಮೇಲೆ ಪಾರದರ್ಶಕವಾಗಿ ಹರಾಜು ಮೂಲಕ ಅದೇ ಗ್ರಾಮದ ಯುವಜನರಿಗೆ ಗುತ್ತಿಗೆ ನೀಡುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.



ಪ್ರತಿ ಗ್ರಾಮದಲ್ಲಿ ಈ ರೀತಿಯ ಫಲವೃಕ್ಷೋದ್ಯಾನ ಅಭಿವೃದ್ಧಿಪಡಿಸುವುದರಿಂದ ಗ್ರಾಮದಲ್ಲಿನ ಹಸಿರು ಹೊದಿಕೆಯೂ ಹೆಚ್ಚುತ್ತದೆ. ನಿರುದ್ಯೋಗಿ, ಭೂರಹಿತ ಯುವಜನರಿಗೆ ಉದ್ಯೋಗವೂ ಲಭಿಸುತ್ತದೆ ಜೊತೆಗೆ ಗ್ರಾಮ ಪಂಚಾಯತಿ ಮತ್ತು ಕಂದಾಯ ಇಲಾಖೆಗೆ ಆದಾಯವೂ ಬರುತ್ತದೆ ಎಂದು ಇಲಾಖೆಯ ಕಾರ್ಯದರ್ಶಿಯವರಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ ತಿಳಿಸಿದ್ದಾರೆ. ಪಂಚಾಯತಿ ವ್ಯಾಪ್ತಿಯ ಕಂದಾಯ ಇಲಾಖೆಗೆ ಸೇರಿದ ಸರ್ಕಾರಿ ಭೂಮಿಯಲ್ಲಿ ತೋಟಗಾರಿಕೆ ಬೆಳೆಗಳಾದ ಮಾವು, ಸಪೋಟ, ಬೆಟ್ಟನೆಲ್ಲಿಕಾಯಿ, ತೆಂಗು, ಹೈಬ್ರೀಡ್ ನೇರಳೆ, ಹುಣಸೆ ಇತ್ಯಾದಿ ಬೆಳೆಸಿದರೆ ಅದರಿಂದ ಪಂಚಾಯತಿಗಳಿಗೆ ಮತ್ತು ಕಂದಾಯ ಇಲಾಖೆಗೆ ಆದಾಯ ಬರುತ್ತದೆ. ಸರ್ಕಾರಿ ಭೂಮಿ ಒತ್ತುವರಿಯ ನಿಲ್ಲುತ್ತದೆ. ತೋಟಗಾರಿಕೆ ಬೆಳೆಯ ಈ ವೃಕ್ಷಗಳನ್ನು ಯಾವಾಗ ಬೇಕಾದರೂ ತೆರವು ಮಾಡಿ ಸರ್ಕಾರದ ಯೋಜನೆಗಳಿಗೆ ಭೂ ಬಳಕೆ ಮಾಡಲೂ ಅವಕಾಶ ಇರುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಕಂದಾಯ ಇಲಾಖೆಗೆ ಸೇರಿದ ಸರ್ಕಾರಿ ಜಮೀನುಗಳಲ್ಲಿ ವಿಬಿಜಿ ರಾಮ್ ಜಿ ಸಹಯೋಗದಲ್ಲಿ ಈ ರೀತಿ ಫಲವೃಕ್ಷೋದ್ಯಾನ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಕ್ರಿಯಾಯೋಜನೆ ರೂಪಿಸುವಂತೆ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

## ವಿದ್ಯಾರ್ಥಿಗಳ ಬೃಹತ್ ಹೋರಾಟದ ಫಲ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ದೇಶಾದ್ಯಂತ ವಿದ್ಯಾರ್ಥಿ ಮತ್ತು ಯುವಜನರು ನಡೆಸಿದ ನಿರಂತರ ಹಾಗೂ ಉಗ್ರ ಹೋರಾಟಕ್ಕೆ ಮಣಿದು, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಈ ಬೆಳವಣಿಗೆಯನ್ನು ಸಿಪಿಐ(ಎಂಎಲ್) ರೆಡ್ ಸ್ಟಾರ್ ಕರ್ನಾಟಕ ರಾಜ್ಯ ಸಮಿತಿಯು ಸ್ವಾಗತಿಸಿದ್ದು, ಇದು ಸರ್ಕಾರದ ದಮನಕಾರಿ ನೀತಿಗಳ ವಿರುದ್ಧ ಜನಶಕ್ತಿಯ ಸಿಕ್ಕ ಐತಿಹಾಸಿಕ ಗೆಲುವು ಎಂದು ಬಣ್ಣಿಸಿದೆ.





ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗಿರುವ ಪ್ರಶ್ನೆಗಳ ವಿರುದ್ಧ ದೆಹಲಿಯ ಜಂತರ್ ಮಂತರ್ ಸೇರಿದಂತೆ ದೇಶದ ವಿವಿಧೆಡೆ ಧ್ವನಿ ಎತ್ತಿದ್ದ ಯುವಜನರ ಮೇಲೆ ಕೇಂದ್ರ ಸರ್ಕಾರವು ಪೊಲೀಸ್ ಲಾಠಿಚಾರ್ಜ್, ದಮನ ಹಾಗೂ ಬಂಧನಗಳ ಮಾರ್ಗವನ್ನು ಅನುಸರಿಸಿತ್ತು. ಹೋರಾಟವನ್ನು ಹತ್ತಿಕ್ಕಲು ನಡೆಸಿದ ಈ ಯತ್ನಗಳ ವಿರುದ್ಧ ವಿದ್ಯಾರ್ಥಿಗಳು ಎದೆಗುಂದದೆ, ಸಾವು–ನೋವುಗಳ ನಡುವೆಯೂ ತಮ್ಮ ಹೋರಾಟವನ್ನು ಮುಂದುವರಿಸಿದ್ದರು. ಕೊನೆಗೂ ಈ ಬೃಹತ್ ಜನಪರ ಹೋರಾಟದ ತೀವ್ರ ಒತ್ತಡಕ್ಕೆ ಮಣಿದು ಕೇಂದ್ರ ಸರ್ಕಾರವು ಮಂಡಿಯೂರಬೇಕಾಯಿತು ಎಂದು ಸಿಪಿಐ(ಎಂಎಲ್) ರೆಡ್ ಸ್ಟಾರ್ ರಾಜ್ಯ ಕಾರ್ಯದರ್ಶಿ ಎಂ. ಗಂಗಾಧರ್ ಅವರು ಪತ್ರಿಕ ಪ್ರಕಟಣೆಗೆ ತಿಳಿಸಿದರು.

# ಸಂಪುಟ ವಿಸ್ತರಣೆ ಶೀಘ್ರ

### ಮುಂದಿನ ವಾರ ಉಳಿದ ಪ್ರಕ್ರಿಯೆ: ಮುಖ್ಯಮಂತ್ರಿ | ಯಾರಿಗೆ ಯಾವ ಖಾತೆ ಸಸ್ಪೆನ್ಸ್ | ರಾಜಕೀಯ ಚುರುಕು

• ಮಲ್ಲಮ್ಮ ನುಡಿ ವಾರ್ತೆ ಚಿತ್ರದುರ್ಗ

ಮುಂದಿನ ವಾರ ಸಚಿವ ಸಂಪುಟ ವಿಸ್ತರಣೆ ಆಗಬಹುದು. ಆಗ ಎಲ್ಲಾ ಮಂತ್ರಿಗಳು ಕೈ ಜೋಡಿಸಿ ಕೆಲಸ ಮಾಡಬೇಕಾಗುತ್ತದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಕಟಿಸಿದ್ದಾರೆ. ಇಲ್ಲಿ ನಡೆದ ದ ಬೆಂಗಳೂರು ಪ್ರಾದೇಶಿಕ ವಿಭಾಗ ಮಟ್ಟದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಸಭೆಯ ಬಳಿಕ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್, ಒಟ್ಟಾಗಿ ಇಡೀ ರಾಜ್ಯದ ಬರ ಪರಿಸ್ಥಿತಿಯನ್ನು ಅವಲೋಕಿಸಬೇಕು. ಹಳ್ಳಿಗಳಲ್ಲಿ ರೈತರ ಬದುಕಿಗೆ ತೊಂದರೆ ಆಗದಂತೆ ಎಚ್ಚರ ವಹಿಸಬೇಕು. ಇದೇ ನಮ್ಮ ಮುಂದಿರುವ ಹೊಣೆಗಾರಿಕೆ ಎಂದು ತಿಳಿಸಿದ್ದಾರೆ.

**ಕುಡಿಯುವ ನೀರು ಪೂರೈಕೆ:** ಜಿಲ್ಲಾಡಳಿತವು ಗ್ರಾಮೀಣ ಭಾಗದ ಪ್ರತಿ ವಿಧಾನಸಭೆ ಕ್ಷೇತ್ರದಲ್ಲಿ ಕುಡಿಯುವ ನೀರು ಪೂರೈಕೆಗೆ 1 ಕೋಟಿವರೆಗೆ ಖರ್ಚು ಮಾಡಬಹುದು ಎಂದು ಬೆಳಗಾವಿ ಸಭೆಯಲ್ಲಿ ತೀರ್ಮಾನ ಮಾಡಲಾಗಿತ್ತು. ಈ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಸಲ್ಲದು ಎಂದಿದ್ದಾರೆ.

**ಪ್ರತಿ ಮಾಹಿತಿ ದಾಖಲು:** ಹೊಸದಾಗಿ ಬೋರ್ ವೆಲ್ ಕೊರೆದರೆ, ದುರಸ್ತಿಗೊಳಿಸಿದರೆ ಪ್ರತಿಯೊಂದರ ಮಾಹಿತಿ ದಾಖಲಿಸಬೇಕು. ಹೊಸ ಬೋರ್ ವೆಲ್ ಕೊರೆದರೆ ಜಿಪಿಎಸ್ ಮಾಹಿತಿ ದಾಖಲಿಸಬೇಕು. ವಿದ್ಯುತ್ ಸಂಪರ್ಕ ಸೇರಿದಂತೆ ಪ್ರತಿ ತೀರ್ಮಾನದ ಬಗ್ಗೆಯೂ ಮಾಹಿತಿಗಳು ಪಾರದರ್ಶಕವಾಗಿರಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.



### ಸಮಸ್ಯೆ ಬಗ್ಗೆ ಯೋಚನೆ

ಪ್ರಜಾಸೇವಾ ಇಲಾಖೆ ಸ್ಥಾಪನೆ ಹೊಸ ಆಲೋಚನೆ. ಶಾಸಕರು, ಅಧಿಕಾರಿಗಳು ಈ ಇಲಾಖೆ ಮೂಲಕ ಜನರ ಮಧ್ಯೆ ಸರ್ಕಾರ ಇರುವಂತೆ ನೋಡಿಕೊಳ್ಳಬೇಕು. ಜನರ ಸಮಸ್ಯೆಗಳನ್ನು ಗಮನಿಸಿ ಬಗೆಹರಿಸಬೇಕು. ಮೊದಲನೇ, 3ನೇ ಶನಿವಾರ ಪ್ರತಿ ವಿಧಾನಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಮಂತ್ರಿ ಜನರ ಸಮಸ್ಯೆ ಆಲಿಸಬೇಕು, ಬಗೆಹರಿಸಬೇಕು ಎಂದು ಸೂಚಿಸಿದ್ದಾರೆ.

### ನೀರು ನೆಚ್ಚಿಕೊಳ್ಳಬೇಡಿ

ಜನ ಹಾಗೂ ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರಿಗೆ ಹಾಗೂ ಪಶುಗಳಿಗೆ ಮೇವಿಗೆ ಕೊರತೆ ಆಗಲೇಬಾರದು. ಆರ್‌ಓ ಪ್ಲಾಂಟ್‌ಗಳ ದುರಸ್ತಿ ಬಗ್ಗೆ ಗಮನ ಹರಿಸಬೇಕು. ಯಾವುದೇ ಕಾರಣಕ್ಕೂ ಮುಂದಿನ ಮಳೆ, ಅಣೆಕಟ್ಟು ನೀರು ನೆಚ್ಚಿಕೊಂಡು ಬೆಳೆ ಹಾಕಬೇಡಿ. ಹಾಕಿದರೆ ನಷ್ಟಕ್ಕೆ ನೀವೇ ಹೊಣೆ.ಬೆಳೆ ವಿಮೆ ಬಗ್ಗೆ ಅಧಿಕಾರಿಗಳು ಕೆಲಸ ಮಾಡಬೇಕು ಎಂದಿದ್ದಾರೆ ಸಿಎಂ.

### ಎಲ್‌ನೀನೊ ಪರಿಣಾಮ..!

ಆಲಮಟ್ಟಿ ಹೊರತಾಗಿ ಬೇರೆ ಯಾವ ಜಲಾಶಯದಲ್ಲೂ ನೀರಿನ ಪರಿಸ್ಥಿತಿ ಉತ್ತಮವಾಗಿಲ್ಲ. ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಲು ಸಾಧ್ಯವಿಲ್ಲ ಎಂದು ಸಮಿತಿ ಮುಂದೆ ಹೇಳಲಾಗಿದೆ. ಅವರಿಗೂ ಪರಿಸ್ಥಿತಿಯ ಬಗ್ಗೆ ಅರಿವಿದೆ. ಪ್ರಧಾನಿ ಅವರು ಎಲ್‌ನೀನೊ ಪರಿಣಾಮದ ಬಗ್ಗೆ ಮಾತನಾಡಿದ್ದು, ಈ ಎಚ್ಚರಿಕೆಯನ್ನು ನಾವು ಕಡೆಗಣಿಸಬಾರದು ಎಂದು ಹೇಳಿದ್ದಾರೆ.

### ಗ್ರಾಮೀಣ ಶಾಲೆ ಪ್ರಗತಿ

ವಿಬಿಜಿ ರಾಮ್ ಜಿ ಹೆಸರು ಬದಲಾವಣೆ ನಮ್ಮ ಮುಂದಿದೆ. ಹೊಸ ರೂಪ ನೀಡಲು ಸಿದ್ಧ. ಇದಕ್ಕೂ ರೂಪುರೇಷೆ ತಯಾರಿದೆ. ಇದ–ಕ್ಕೆ ರಾಜ್ಯ ಸರ್ಕಾರವೇ ಶೇ40 ರಷ್ಟು ಹಣ ನೀಡಬೇಕಾಗಿದೆ. ಸಿಎಸ್‌ಆರ್ ಅನುದಾನ ಬಳಕೆ ಬಗ್ಗೆ, ಗ್ರಾಮೀಣ ಭಾಗದ ಶಾಲೆಗಳ ಅಭಿವೃದ್ಧಿ ಬಗ್ಗೆ ಸೂಕ್ತ ಗಮನ ಹರಿಸಬೇಕು. ಗೃಹಲಕ್ಷ್ಮೀ ಹಣ ಒಂದಷ್ಟು ನಕಲಿ ಖಾತೆಗಳಿಗೆ ಹೋಗಿದೆ.

## ಮಳೆಗಾಗಿ ಧ್ಯಾನ ಮಾಡಿ ಪ್ರಾರ್ಥನೆ



**ಗಂಗಾವತಿ:** ದೇಶದ ಬೆನ್ನೆಲುಬಾದ ರೈತರು ಉತ್ತಮ ಮಳೆಯ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ, ರೈತರ ಬದುಕು ಹಸನಾಗಲಿ ಹಾಗೂ ಜಲಾಶಯಗಳು ತುಂಬಿ ಸಮೃದ್ಧ ಬೆಳೆ ಬೆಳೆಯಲಿ ಎಂಬ ಆಶಯದಿಂದ ಗಂಗಾವತಿಯ ಲಿಟಲ್ ಹಾರ್ಟ್ಸ್ ಸ್ಕೂಲ್ ಹಾಗೂ ಶ್ರೀರಾಮನಗರದ ಸ್ವಾಮಿ ವಿವೇಕಾನಂದ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳು ವಿಶೇಷವಾಗಿ ಸೋಲ್ ಸಿಂಕ್ ಧ್ಯಾನ ಮಾಡಿ ದೇವರಲ್ಲಿ ಪ್ರಾರ್ಥಿಸಿದರು.ಆಷಾಢ ಏಕಾದಶಿಯ ಶುಭ ಸಂದರ್ಭದಲ್ಲಿ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಒಟ್ಟಾಗಿ ಧ್ಯಾನದಲ್ಲಿ ಭಾಗವಹಿಸಿ, ರಾಜ್ಯದಲ್ಲಿ ಉತ್ತಮ ಮಳೆಯಾಗಿ ಡ್ಯಾಂಗಳು ತುಂಬಿ, ರೈತರಿಗೆ ಅನುಕೂಲವಾಗಲಿ ಹಾಗೂ ಸಮೃದ್ಧ ಬೆಳೆ ಬರಲಿ ಎಂದು ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ರೈತರ ಕಲ್ಯಾಣಕ್ಕಾಗಿ ಕೈಜೋಡಿಸುವ ಸಂದೇಶವನ್ನು ಸಾರಿದರು.

## 29ಕ್ಕೆ ಅದ್ದೂರಿ ಪತ್ರಿಕಾ ದಿನಾಚರಣೆ



**ಔರಾದ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಔರಾದ್ ಘಟಕದ ವತಿಯಿಂದ ಜುಲೈ 29ರಂದು ಬೆಳಿಗ್ಗೆ 10:30ಕ್ಕೆ ತಾಲೂಕು ಪಂಚಾಯತ್ ಸಭಾಂಗಣದಲ್ಲಿ 'ಪತ್ರಿಕಾ ದಿನಾಚರಣೆ'ಯನ್ನು ಅರ್ಥಪೂರ್ಣವಾಗಿ ಆಯೋಜಿಸಲಾಗಿದೆ ಎಂದು ತಾಲೂಕು ಅಧ್ಯಕ್ಷ ಶಿವಾನಂದ ಮೊಕ್ತೆದಾರ್ ತಿಳಿಸಿದ್ದಾರೆ. ಪತ್ರಿಕಾರಂಗದ ಮಹತ್ವ ಮತ್ತು ಪ್ರಸ್ತುತ ಸವಾಲುಗಳ ಕುರಿತು ಬೆಳಕು ಚೆಲ್ಲುವ ಈ ಕಾರ್ಯಕ್ರಮಕ್ಕೆ ತಾಲೂಕು ಆಡಳಿತ ಹಾಗೂ ಸಂಘ ಸಂಸ್ಥೆಗಳು ಸಾಕ್ಷಿಯಾಗಲಿವೆ.

## ದೇವಾಲಯದಲ್ಲಿ ದೇವಿ ಒಡವೆ ಕಳವು..!

• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಇಲ್ಲಿನ ಮೇಗಳಪೇಟೆ ದುರ್ಗಮ್ಮ ದೇವಿ ದೇವಲಯದಲ್ಲಿ ದೇವಿ ಒಡವೆ ಕಳ್ಳತನವಾದ ಘಟನೆ ಜರುಗಿದೆ.

ಪಟ್ಟಣದ ಹೊರವಲಯದಲ್ಲಿರುವ ದುರ್ಗಾದೇವಿ ದೇವಸ್ಥಾನದಲ್ಲಿ ದುರ್ಗಾದೇವಿಯ ಮೈ ಮೇಲೆ ಇರುವ ಮೂಗಿನ ನತ್ತು, ತಾಳಿ ಹಾಗೂ ಕಾಣಿಕೆ ಪೆಟ್ಟಿಗೆ ಕಳ್ಳತನವಾಗಿದೆ. ಮೇಗಳಪೇಟೆ ವಾರ್ಡಿನ ಜನರು ನೀಡಿರುವ ಮಾಹಿತಿ ಮೇರೆಗೆ ಸ್ಥಳೀಯ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.





## ರಾಜಿನಾಮೆ: ಪ್ರಜಾಸತ್ತಾತ್ಮಕ ಜಯಕ್ಕೆ ಸಾಕ್ಷಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯು ದೇಶದ ಯುವಜನರು ಜಾಗೃತರಾಗಿ, ಜವಾಬ್ದಾರಿಯುತವಾಗಿ ಪ್ರಶ್ನಿಸಿದಾಗ ದೊರಕುವ ನೈಜ ಪ್ರಜಾಸತ್ತಾತ್ಮಕ ಜಯಕ್ಕೆ ಸಾಕ್ಷಿಯಾಗಿದೆ ಎಂದು ಸಚಿವ ರಾಮಲಿಂಗಾ ರೆಡ್ಡಿ ಪ್ರತಿಕ್ರಿಯಿಸಿದ್ದಾರೆ.



ಅನ್ಯಾಯದ ವಿರುದ್ಧ ಧ್ವನಿ ಎತ್ತಿ, ಈ ಸುದೀರ್ಘ ಹೋರಾಟವನ್ನು ಯಶಸ್ವಿಗೊಳಿಸಿದ ಪ್ರತಿಯೊಬ್ಬ ವಿದ್ಯಾರ್ಥಿ, ಹೋರಾಟಗಾರರು ಹಾಗೂ ಯುವಮಿತ್ರರಿಗೂ ನನ್ನ ಹೃದಯಪೂರ್ವಕ ಅಭಿನಂದನೆಗಳು ಎಂದು ತಿಳಿಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಜನಪ್ರತಿನಿಧಿಗಳು ಯಾವಾಗಲೂ ಜನತಾ ಜನಾರ್ದನನ ಮತ್ತು ಯುವಜನರ ಧ್ವನಿಗೆ ತಲೆಬಾಗಬೇಕು ಎಂಬುದಕ್ಕೆ ಇದು ಪ್ರತ್ಯಕ್ಷ ನಿದರ್ಶನ. ಯುವಜನರ ಭವಿಷ್ಯ, ಹಕ್ಕುಗಳು ಮತ್ತು ಶೈಕ್ಷಣಿಕ ಪಾರದರ್ಶಕತೆಯ ರಕ್ಷಣೆಗೆ ನಮ್ಮ ಬೆಂಬಲ ಯಾವಾಗಲೂ ಇರುತ್ತದೆ ಎಂದಿದ್ದಾರೆ.

# ಕಾಕ್ರೋಚ್‌ನ NEET ಪ್ರತಿಭಟನಾ ಕಿಡಿಗೆ ಪ್ರಧಾನ ವಿಕೆಟ್

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ

NEET ಹಗರಣಕ್ಕೆ ಸಂಬಂಧಿಸಿ ಪ್ರತಿಭಟನೆ ಬಳಿಕ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆಯನ್ನು ಸಲ್ಲಿಸಿದ್ದಾರೆ.

ತಮ್ಮ ರಾಜೀನಾಮೆ ಪತ್ರವನ್ನು ಪ್ರಧಾನಿ ಮೋದಿ ಅವರಿಗೆ ಕಳುಹಿಸಿದ್ದಾರೆ. ಕಾಕ್ರೋಚ್ ಜನತಾ ಪಕ್ಷಮತ್ತು ಕೇಂದ್ರದ ನಡುವಿನ ಮೂರನೇ ಸುತ್ತಿನ ಮಾತುಕತೆಗೆ ಕೆಲವೇ ಗಂಟೆಗಳ ಮೊದಲು ಅವರು ತಮ್ಮ ಎಕ್ಸ್ ಖಾತೆಯಲ್ಲಿ ಈ ಸುದೀರ್ಘ ಪ್ರತಿಭಟನೆ: ವಿಚಾರವನ್ನು ಘೋಷಿಸಿದ್ದಾರೆ. ಪರೀಕ್ಷಾ ಅಕ್ರಮ ಹಾಗೂ ನೀಟ್ (NEET) ಪ್ರಶ್ನೆಪತ್ರಿಕೆ ಸೋರಿಕೆಯನ್ನು ಖಂಡಿಸಿ, ದೆಹಲಿಯಲ್ಲಿ ತಮ್ಮ ರಾಜೀನಾಮೆಗೆ ಆಗ್ರಹಿಸಿ ವಿದ್ಯಾರ್ಥಿಗಳು ನಡೆಸುತ್ತಿದ್ದ ತಿಂಗಳ ಸುದೀರ್ಘ ಬೃಹತ್ ಪ್ರತಿಭಟನೆಯ ಬೆನ್ನಲ್ಲೇ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

**ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ**

**ರಾಜಕೀಯ ಕುತೂಹಲ:** ನೀಟ್ ಅಕ್ರಮಕ್ಕೆ ಸಂಬಂಧಿಸಿ ಶಿಕ್ಷಣ ಸಚಿವರಾಗಿದ್ದ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ದೆಹಲಿಯ ಜಂತರ್ ಮಂತರ್‌ನಲ್ಲಿ ಒಂದು ತಿಂಗಳಿಗೂ ಹೆಚ್ಚು ಕಾಲ ಬೀಡುಬಿಟ್ಟಿದ್ದ ಕಾಕ್ರೋಚ್ ಜನತಾ ಪಾರ್ಟಿಯ ನೇತೃತ್ವದ ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು. ಇದೀಗ ಈಡೇರಿದ್ದು ಮುಂದಿನ ರಾಜಕೀಯ ಬೆಳವಣಿಗೆಗಳು ತೀವ್ರ ಕುತೂಹಲಕ್ಕೆ ಕಾರಣವಾಗಿವೆ.

ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಸುದ್ದಿ ಬಂದ ಕ್ಷಣ ಜಂತರ್ ಮಂತರ್‌ನಲ್ಲಿರುವ ಪ್ರತಿಭಟನಾ ಸ್ಥಳವು ಸಂಭ್ರಮಾಚರಣೆ ನಡೆಸಲಾಗಿದೆ.

### ಕಾಕ್ರೋಚ್ ಪ್ರಮುಖ ಡಿಮ್ಯಾಂಡ್?

- ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳ ವಿರುದ್ಧ ಯಾವುದೇ ರೀತಿಯ ಕಾನೂನು ಕ್ರಮ ಕೈಗೊಳ್ಳಬಾರದು
- ನೀಟ್ ಪೇಪರ್ ಲೀಕ್ನಿಂದಾಗಿ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ಒದಗಿಸುವುದು.
- ಒಂದು ತಿಂಗಳಿನಿಂದ ದೆಹಲಿಯ ಜಂತರ್ ಮಂತರ್‌ನಲ್ಲಿ ಬೀಡುಬಿಟ್ಟಿದ್ದ ಪ್ರತಿಭಟನಾಕಾರರ ಮುಖ್ಯ ಬೇಡಿಕೆ ಪ್ರಧಾನ್ ಅವರ ರಾಜೀನಾಮೆ
- ಪ್ರಧಾನ್ ಅವರ ರಾಜೀನಾಮೆ ವಿಚಾರವಾಗಿಯೇ 'ಸಿಜೆಪಿ' ಮತ್ತು ಕೇಂದ್ರ ಸರ್ಕಾರದ ನಡುವಿನ ಮಾತುಕತೆ ತಡೆಹಿಡಿಯಲ್ಪಟ್ಟಿತ್ತು.

### ವಿದ್ಯಾರ್ಥಿ ಶಕ್ತಿ ಚಿರಾಯು: ಅಭಿಜೀತ್ ದಿಪ್ಕೆ

ರಾಜೀನಾಮೆ ಸುದ್ದಿಗೆ ಪ್ರತಿಕ್ರಿಯಿಸಿದ ಸಿಜೆಪಿ, ವಿದ್ಯಾರ್ಥಿ ಶಕ್ತಿ ಚಿರಾಯುವಾಗಲಿ" ಎಂದು ಪೋಸ್ಟ್ ಮಾಡಿದೆ. ನಾವು ಅಂದುಕೊಂಡಿದ್ದನ್ನು ಸಾಧಿಸಿದೆವೆ? ಎಂದು ಸಿಜೆಪಿ ಸಂಸ್ಥಾಪಕ ಅಭಿಜೀತ್ ದಿಪ್ಕೆ, ಜಂತರ್ ಮಂತರ್ ವೇದಿಕೆಯಿಂದ ಪ್ರಧಾನ್ ಅವರ ರಾಜೀನಾಮೆ ಸುದ್ದಿಯನ್ನು ಪ್ರಕಟಿಸಿದ್ದಾರೆ. ಈ ಸರ್ಕಾರದಲ್ಲಿ ಯಾರೂ ರಾಜೀನಾಮೆ ನೀಡುವುದಿಲ್ಲ ಎಂದು ಅವರು ಹೇಳುತ್ತಿದ್ದರು. ಆದರೆ ನಾವು ಅದನ್ನು ಮಾಡಿದ್ದೇವೆ ಎಂದಿದ್ದಾರೆ.





### ಧರ್ಮೇಂದ್ರ ಪ್ರಧಾನ್ ಪೋಸ್ಟ್..!

ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿ, ಈ ದೇಶದ ಯುವಕರ ಆಕಾಂಕ್ಷೆಗಳು, ಭಾವನೆಗಳು ಮತ್ತು ಸರಿಯಾದ ನಿರೀಕ್ಷೆಗಳ ಬಗ್ಗೆ ನನಗೆ ಆಳವಾದ ಗೌರವವಿದೆ. ಭಾರತದ ಯುವ ಪೀಳಿಗೆಯ ಕನಸುಗಳನ್ನು ನನಸಾಗಿಸುವುದು ನಮ್ಮ ರಾಜಕೀಯ ಮತ್ತು ಸಾಮಾಜಿಕ ಜೀವನದ ನೈತಿಕ ಸಂಕಲ್ಪವಾಗಿದೆ ಎಂದು ತಿಳಿಸಿದ್ದಾರೆ.

## ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ಬಳಕೆ: ಗೃಹ ಸಚಿವ ಅಮಿತ್ ಶಾ ನೇರ ಹೊಣೆ: ರಾಹುಲ್ ಗಾಂಧಿ ಆರೋಪ!

## ತಂದೆ-ತಾಯಿ ಹಾಗೂ ಹಿರಿಯ ಜೀವಿಗಳನ್ನು ಗೌರವಿಸಿ

ಮನುಷ್ಯನು ಜೀವನದಲ್ಲಿ ಎಷ್ಟೇ ಎತ್ತರಕ್ಕೆ ಬೆಳೆದರೂ, ಎಷ್ಟೇ ಹೆಸರು-ಹಣ ಗಳಿಸಿದರೂ, ತನ್ನ ತಂದೆ-ತಾಯಿಯ ಋಣವನ್ನು ಎಂದಿಗೂ ತೀರಿಸಲಾಗುವುದಿಲ್ಲ. ತಮ್ಮ ಮಕ್ಕಳ ನಗುವಿಗಾಗಿ ತಮ್ಮ ಕಣ್ಣೀರನ್ನು ಮರೆಮಾಚಿದವರು ಅವರು. ಮಕ್ಕಳ ಭವಿಷ್ಯಕ್ಕಾಗಿ ತಮ್ಮ ಕನಸುಗಳನ್ನು ಬದಿಗೊತ್ತಿ, ಹಗಲು-ರಾತ್ರಿ ಶ್ರಮಿಸಿದವರು ಅವರೇ. ಅವರ ತ್ಯಾಗಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ದುರದೃಷ್ಟವಶಾತ್, ಇಂದಿನ ಸಮಾಜದಲ್ಲಿ ಕೆಲವರು ತಮ್ಮ ಬದುಕಿನ ಓಟದಲ್ಲಿ ತಂದೆ-ತಾಯಿ ಹಾಗೂ ಹಿರಿಯರನ್ನು ಮರೆತುಬಿಡುತ್ತಿದ್ದಾರೆ. ಒಂದು ಕಾಲದಲ್ಲಿ ಮಕ್ಕಳ ಕೈ ಹಿಡಿದು ನಡೆಯಲು ಕಲಿಸಿದ ಅದೇ ಕೈಗಳು ಇಂದು ಆಸರೆಯ ನಿರೀಕ್ಷೆಯಲ್ಲಿ ನಡುಗುತ್ತಿವೆ. ಒಂದು ಕಾಲದಲ್ಲಿ ಮಕ್ಕಳ ಕಣ್ಣೀರನ್ನು ಒರೆಸಿದ ಕಣ್ಣುಗಳು ಇಂದು ತಮ್ಮ ಮಕ್ಕಳ ಪ್ರೀತಿಯ ಎರಡು ಮಾತಿಗಾಗಿ ಕಾದು ಕುಳಿತಿವೆ. ಇದು ಯಾವುದೇ ಸಂಸ್ಕೃತಿಯ ಸಮಾಜಕ್ಕೆ ಶೋಭೆ ತರುವ ಸಂಗತಿಯಲ್ಲ.

ಹಿರಿಯರು ಮನೆಯ ಭಾರವಲ್ಲ; ಅವರು ಮನೆಯ ಬೆಳಕು. ಅವರ ಅನುಭವವು ಒಂದು ಗ್ರಂಥಾಲಯದಷ್ಟೇ ಅಮೂಲ್ಯ. ಅವರ ಆಶೀರ್ವಾದವು ಯಾವುದೇ ಸಂಪತ್ತಿಗಿಂತ ದೊಡ್ಡದು. ಅವರ ಮುಖದಲ್ಲಿ ಮೂಡುವ ಒಂದು ನಗು, ಅವರ ಮನಸ್ಸಿಗೆ ಸಿಗುವ ನೆಮ್ಮದಿ. ಅದೇ ನಮ್ಮ ಜೀವನದ ನಿಜವಾದ ಯಶಸ್ಸು.

ವೃದ್ಧಾಪ್ಯವೆಂದರೆ ದೌರ್ಬಲ್ಯವಲ್ಲ; ಅದು ಬದುಕಿನ ಅನುಭವಗಳ ಶಿಖರ. ಇಂದು ನಾವು ಯುವಕರಾಗಿದ್ದೇವೆ, ನಾಳೆ ನಾವು ಸಹ ಹಿರಿಯರಾಗುತ್ತೇವೆ. ನಾವು ನಮ್ಮ ತಂದೆ-ತಾಯಿಯನ್ನು ಹೇಗೆ ನೋಡಿಕೊಳ್ಳುತ್ತೇವೆಯೋ, ಮುಂದಿನ ಪೀಳಿಗೆ ನಮ್ಮನ್ನು ಹಾಗೆಯೇ ನೋಡಿಕೊಳ್ಳುತ್ತದೆ ಎಂಬುದನ್ನು ಮರೆಯಬಾರದು.

ಆದ್ದರಿಂದ ಇಂದೇ ಒಂದು ಸಂಕಲ್ಪ ಮಾಡೋಣ. ನಮ್ಮ ತಂದೆ-ತಾಯಿಗೆ ಪ್ರತಿದಿನ ಪ್ರೀತಿಯ ಎರಡು ಮಾತು ಆಡೋಣ. ಹಿರಿಯರಿಗೆ ಗೌರವ ಕೊಡೋಣ. ಅವರ ಆರೋಗ್ಯ, ಸಂತೋಷ ಮತ್ತು ನೆಮ್ಮದಿಯ ಬಗ್ಗೆ ಕಾಳಜಿ ವಹಿಸೋಣ. ಅವರ ಆಶೀರ್ವಾದವೇ ನಮ್ಮ ಜೀವನದ ನಿಜವಾದ ಶ್ರೀಮಂತಿಕೆ.

ತಂದೆ-ತಾಯಿಯನ್ನು ಗೌರವಿಸುವ ಮನೆಯಲ್ಲಿ ದೇವರು ನೆಲೆಸಿರುತ್ತಾನೆ. ಹಿರಿಯರ ಆಶೀರ್ವಾದವಿರುವ ಕುಟುಂಬದಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿ ಸದಾ ನೆಲೆಸಿರುತ್ತದೆ. ಅವರನ್ನು ಪ್ರೀತಿಸೋಣ, ಗೌರವಿಸೋಣ, ಅವರ ಬದುಕಿನ ಸಂಧ್ಯಾಕಾಲವನ್ನು ಸಂತೋಷದಿಂದ ತುಂಬಿಸೋಣ. ಇದೇ ನಿಜವಾದ ಮಾನವೀಯತೆ, ಇದೇ ನಮ್ಮ ಸಂಸ್ಕೃತಿಯ ಶ್ರೇಷ್ಠ ಮೌಲ್ಯ.

## ಅಂಚೆ ಕಚೇರಿಯಲ್ಲಿ ನೆಟ್ವರ್ಕ್ ಸಮಸ್ಯೆ: ಸಾರ್ವಜನಿಕರ ಪರದಾಟ



**ಅಂಕೋಲಾ:** ತಾಲೂಕಿನ ಗಡಿ ಪ್ರದೇಶವಾದ ಅಚವೆ ಗ್ರಾಮದ ಅಂಚೆ ಕಚೇರಿಯಲ್ಲಿ ನೆಟ್ವರ್ಕ್ ಸಮಸ್ಯೆಯಿಂದ ಅಂಚೆ ಇಲಾಖೆ ಐಪಿಪಿಬಿ ಖಾತೆಯಿಂದ ಫಲಾನುಭವಿಗಳು ಹಣ ತೆಗೆಯಲು ಕಳೆದ ನಾಲ್ಕು ತಿಂಗಳಿಂದ ಸಮಸ್ಯೆ ಉಂಟಾಗಿದೆ. ಈ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಬೇಕೆಂದು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಬಾಲಚಂದ್ರ ಶೆಟ್ಟಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಚವೆ ಅಂಚೆ ಕಚೇರಿಯಲ್ಲಿ ಕಳೆದ ನಾಲ್ಕು ತಿಂಗಳಿಂದ ವಿಕಲ ಚೇತನರು, ವಿಧವೆಯರು, ವೃದ್ದರು ಸೇರಿದಂತೆ ಸುಮಾರು 60 ಜನರ ಪಿಂಚಣಿ ಹಾಗೂ 25 ಕ್ಕೂ ಹೆಚ್ಚು ಗೃಹ ಲಕ್ಷ್ಮೀ ಯೋಜನೆಯ ಹಣವನ್ನು ಪಡೆಯಲು ಫಲಾನುಭವಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಮಾರ್ಚ್ ಒಂದನೇ ವಾರದವರೆಗೆ ಅಂಚೆ ಕಚೇರಿಯಲ್ಲಿ ಬಿಎಸ್‌ಎನ್‌ಎಲ್ ಸೀಮ್ ಇದ್ದ ಕಾರಣ ಅಚವೆ ಅಂಚೆ ಕಚೇರಿಗೆ ಬಂದಾಗ ಹಣ ಸಿಗುತ್ತಿತ್ತು. ಆದರೆ ಕಳೆದ ನಾಲ್ಕು ತಿಂಗಳಿಂದ ಐಪಿಪಿಬಿ ಯಲ್ಲಿ ಓಟಿಪಿ ಬದಲಾವಣೆಯಾದ ಕಾರಣ ಫಲಾನುಭವಿಗಳಿಗೆ ಅಂಚೆಯಲ್ಲಿ ಹಣ ಸಿಗುತ್ತಿಲ್ಲ.

ಅಚವೆ ಗ್ರಾಮ ಪಂಚಾಯಿತಿ ಗುಡ್ಡಗಾಡು ಪ್ರದೇಶದಿಂದ ಕುಡಿರುವುದರಿಂದ ಪಂಚಾಯಿತಿ ವ್ಯಾಪ್ತಿಗೆ ಬರುವ ಮಾಣಿಗದ್ದೆ, ವಾಡಗಾರ, ಅಂಗಡಿಬೈಲ್, ಕೇಶೋಳ್ಳಿ, ಕುಂಟಗಣಿ ಪ್ರದೇಶದಿಂದ ಹಣ ಪಡೆಯಲು ಬಾಡಿಗೆ ಬೈಕ್ ನಲ್ಲಿ ಅಂಚೆ ಕಚೇರಿಗೆ ಬಂದು ಹಣ ಸಿಗದೇ ನೋವಿನಿಂದ ಹಿಂತಿರುಗುತ್ತಿದ್ದಾರೆ. ಈ ಕುರಿತು ಸಂಬಂಧಪಟ್ಟ ಹಿರಿಯ ಅಧಿಕಾರಿಗಳಿಗೆ ಸಂಪರ್ಕಿಸಿದರೆ ಸದ್ಯಕ್ಕೆ ಬಿಎಸ್‌ಎನ್‌ಎಲ್ ಟೆಂಡರ್ ಇರದೇ ಇರುವುದರಿಂದ ಬೇರೆ ಸೀಮ್ ಲಭ್ಯ ಇದೆ ಎಂದು ಹೇಳುತ್ತಾರೆ. ಆದರೆ ಅಚವೆಯಲ್ಲಿ ಬಿಎಸ್‌ಎನ್‌ಎಲ್ ನೆಟ್ವರ್ಕ್ ಬಿಟ್ಟರೆ ಬೇರೆ ಯಾವುದೇ ಸಿಮ್ ನ ನೆಟ್ವರ್ಕ್ ಇಲ್ಲಿ ಬರುತ್ತಿಲ್ಲ.

ಇಲ್ಲದಿದ್ದರೆ ಹಣ ಪಡೆಯಲು ಅಚವೆಯಿಂದ 18 ಕಿ.ಮೀ ದೂರದ ಗುಂಡಬಾಳದ ಅಂಚೆ ಕಚೇರಿಗೆ ಹೋಗಲು ತಿಳಿಸುತ್ತಾರೆ. ಇದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದ್ದು ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳು ಗಮನಹರಿಸಿ ಸಮಸ್ಯೆ ಬಗೆಹರಿಸಬೇಕೆಂದು ಆಗ್ರಹಿಸಿದ್ದಾರೆ.

# ಸಂಘಟನ್ ಸೃಜನ ಅಭಿಯಾನದ ಕುರಿತು ಮಾಹಿತಿ ಕಾರ್ಯಾಗಾರ

• **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**

ಕಾಂಗ್ರೆಸ್ ಪಕ್ಷದ ನೂತನ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭಗೊಂಡಿದ್ದು, ಪಕ್ಷದ ಯುವಕರು, ಮಹಿಳೆಯರು, ಹಿರಿಯ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಂದ ಅಭಿಪ್ರಾಯ ಸಂಗ್ರಹಿಸಿ ವರದಿ ಸಿದ್ಧಪಡಿಸಿ ಕಾಂಗ್ರೆಸ್ ಹೈಕಮಾಂಡ್‌ಗೆ ಸಲ್ಲಿಸಲಾಗುವುದು ಎಂದು ಎಐಸಿಸಿ ರಾಜ್ಯ ಉಸ್ತುವಾರಿ ಪಾಲಕ್ ವರ್ಮ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶನಿವಾರ 'ಸಂಘಟನ್ ಸೃಜನ ಅಭಿಯಾನ'ದ ಕುರಿತು ಮಾಹಿತಿ ನೀಡಲು ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ಪ್ರಮುಖ ಪಾತ್ರವಹಿಸಿದೆ. ಇದೀಗ ರಾಹುಲ್ ಗಾಂಧಿ ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ 'ಸಂಘಟನ್ ಸೃಜನ ಅಭಿಯಾನ' ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ನೂತನ ಅಧ್ಯಕ್ಷರನ್ನು ನೇಮಕ ಮಾಡುವ ಪ್ರಕ್ರಿಯೆ ನಡೆಯುತ್ತಿದೆ ಎಂದರು.

ಜಿಲ್ಲಾವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ಪಕ್ಷದ ಪ್ರಮುಖ ಮುಖಂಡರ ಅಭಿಪ್ರಾಯಗಳನ್ನು ಸಂಗ್ರಹಿಸಲಾಗುವುದು. ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಿ, ಅವುಗಳನ್ನು ಪರಿಶೀಲಿಸಿ ಸಿದ್ಧಪಡಿಸಿದ ವರದಿಯನ್ನು ಎಐಸಿಸಿಗೆ




ಸಲ್ಲಿಸಲಾಗುವುದು. ಪಕ್ಷಕ್ಕೆ ಸಮರ್ಥ ನಾಯಕತ್ವ ರೂಪಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಕಳೆದ ಚುನಾವಣೆಯಲ್ಲಿ ಪರಾಜಿತರಾದ ಅಭ್ಯರ್ಥಿಗಳು, ಪಕ್ಷದ ಹಿರಿಯ ಮುಖಂಡರು, ಹಾಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಕಾರ್ಯಕರ್ತರಿಂದ ಅಭಿಪ್ರಾಯ ಪಡೆಯಲಾಗುತ್ತಿದೆ. ಒಟ್ಟಾರೆ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯಲಿದ್ದು, ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರಿಗೆ ಅವಕಾಶ ಕಲ್ಪಿಸಲಾಗುವುದು

ಎಐಸಿಸಿ ನಿಯೋಜಿಸಿರುವ ವೀಕ್ಷಕರು, ಸಿಡಬ್ಲ್ಯುಸಿ ಸದಸ್ಯರು, ಬೇರೆ ರಾಜ್ಯಗಳ ಸಂಸದರು, ಶಾಸಕರು ಹಾಗೂ ಇತರ ಪ್ರಮುಖ ನಾಯಕರು ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ ಏಳು ದಿನಗಳ ಕಾಲ ಸ್ಥಳದಲ್ಲಿದ್ದು, ಪಕ್ಷದ ಕಾರ್ಯಕರ್ತರು, ಎನ್‌ಜಿಒಗಳು ಹಾಗೂ ವಿವಿಧ ಕ್ಷೇತ್ರಗಳ ಜನರಿಂದಲೂ ಅಭಿಪ್ರಾಯ ಸಂಗ್ರಹಿಸಲಿದ್ದಾರೆ. ಈ ಅಭಿಪ್ರಾಯಗಳ ಆಧಾರದ ಮೇಲೆ ಜಿಲ್ಲಾ ಅಧ್ಯಕ್ಷರ ಆಯ್ಕೆ ನಡೆಯಲಿದೆ ಎಂದು ಪಾಲಕ್ ವರ್ಮ ತಿಳಿಸಿದರು.

ಹಿಂದೆ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಕುರಿತು ತಳಮಟ್ಟದಲ್ಲಿ ಸಾಕಷ್ಟು ಅಸಮಾಧಾನ ವ್ಯಕ್ತವಾಗುತ್ತಿತ್ತು. ಆದ್ದರಿಂದ ಈ ಬಾರಿ ತಳಮಟ್ಟದಿಂದಲೇ ಅಭಿಪ್ರಾಯ ಸಂಗ್ರಹಿಸಿ, ರಾಷ್ಟ್ರೀಯ ಅಧ್ಯಕ್ಷರು, ಕೇಂದ್ರದ ನಾಯಕರು, ರಾಜ್ಯದ ಪಕ್ಷದ ಮುಖಂಡರು ಹಾಗೂ ಸ್ಥಳೀಯ ಮುಖಂಡರ ಅಭಿಪ್ರಾಯಗಳನ್ನು ಪರಿಗಣಿಸಿ ಆಯ್ಕೆ ಮಾಡಲಾಗುತ್ತಿದೆ ಎಂದರು.

ದೇಶದ ವಿವಿಧ ರಾಜ್ಯಗಳ 1,054 ಜಿಲ್ಲೆಗಳ ಪೈಕಿ 762 ಜಿಲ್ಲೆಗಳಿಗೆ ಈಗಾಗಲೇ ಈ ಕಾರ್ಯಕ್ರಮದ ಮೂಲಕ ಜಿಲ್ಲಾ ಅಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ. ಇದೀಗ ಕರ್ನಾಟಕದಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು, ಇದರ ನಂತರ ಕೇರಳ, ಪಶ್ಚಿಮ ಬಂಗಾಳ ಹಾಗೂ ಉತ್ತರ ಪ್ರದೇಶದಲ್ಲಿಯೂ ಅಭಿಯಾನ ಆರಂಭವಾಗಲಿದೆ ಎಂದು ಹೇಳಿದರು. ನೂತನ ಜಿಲ್ಲಾ ಅಧ್ಯಕ್ಷರ ಆಯ್ಕೆ ಬಳಿಕ ವಿಶೇಷ ಸಮಿತಿಯೊಂದನ್ನು ರಚಿಸಲಾಗುವುದು. ನೂತನ ಅಧ್ಯಕ್ಷರು ಪಕ್ಷದ ಸಂಘಟನೆ ಹಾಗೂ ಅಭಿವೃದ್ಧಿಗೆ ಹೇಗೆ ಶ್ರಮಿಸುತ್ತಿದ್ದಾರೆ ಎಂಬುದನ್ನು ಸಮಿತಿ ಪರಿಶೀಲಿಸಲಿದೆ. ಅಧ್ಯಕ್ಷರ ಕಾರ್ಯವೈಖರಿ ಕುರಿತು ಹೈಕಮಾಂಡ್‌ಗೆ ವರದಿ ಸಲ್ಲಿಸಲಾಗುವುದು. ಸಮರ್ಥವಾಗಿ ಕಾರ್ಯನಿರ್ವಹಿಸದಿದ್ದರೆ ಬದಲಾವಣೆ ಮಾಡುವ ಅಧಿಕಾರವೂ ಹೈಕಮಾಂಡ್‌ಗೆ ಇರಲಿದೆ ಎಂದು ಪಾಲಕ್ ವರ್ಮ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಬೀಜ ನಿಗಮದ ಅಧ್ಯಕ್ಷ ನಂದಿ ಆಂಜಿನಪ್ಪ, ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಯಲುವಳ್ಳಿ ರಮೇಶ್, ಮಾಜಿ ಸಚಿವ ಎನ್.ಎಚ್. ಶಿವಶಂಕರರೆಡ್ಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೇಶವರೆಡ್ಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕುಬೇರ್ ಅಚ್ಚು, ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ, ಸಹನಾ ರಾಜೀವ್ ಗೌಡ, ಗಂಗರೇಕಾಲುವೆ ನಾರಾಯಣಸ್ವಾಮಿ, ರಕ್ಷಾ ರಾಮಯ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುಂಗಾರು ಮಳೆ ಕೊರತೆ: ಬೆಳೆ ವೀಕ್ಷಿಸಿದ ಜಿಲ್ಲಾಧಿಕಾರಿ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಮುಂಗಾರು ಮಳೆ ಕೊರತೆ ಹಿನ್ನೆಲೆಯಲ್ಲಿ ಬಳ್ಳಾರಿ ತಾಲೂಕಿನ ಹಲಕುಂದಿ, ಮಿಂಚೇರಿ ಹಾಗೂ ಸಂಜೀರಾಯನಕೋಟೆ ಗ್ರಾಮಗಳ ಕೃಷಿ ಜಮೀನುಗಳಿಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಶುಕ್ರವಾರ ಭೇಟಿ ನೀಡಿ, ಬೆಳೆಗಳ ಪರಿಸ್ಥಿತಿಯನ್ನು ವೀಕ್ಷಿಸಿದರು.

ಜಮೀನಿನಲ್ಲಿ ಬಿತ್ತನೆಯಾಗಿರುವ ತೊಗರಿ, ಹತ್ತಿ, ಸಜ್ಜೆ ಮತ್ತು ಸೂರ್ಯಕಾಂತಿ ಬೆಳೆಗಳನ್ನು ಪರಿಶೀಲಿಸಿ, ರೈತರಿಂದ ಮಾಹಿತಿ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲಕುಂದಿ, ಮಿಂಚೇರಿ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಳೆದ 25 ದಿನಗಳಿಂದ ಹನಿಯೂ ಮಳೆಯಾಗಿಲ್ಲ. ಶೇ.80 ರಷ್ಟು ಕೃಷಿ ಭೂಮಿಯಲ್ಲಿ ಬಿತ್ತನೆಯಾಗಿರುವ ತೊಗರಿ, ಸೂರ್ಯಕಾಂತಿ ಹಾಗೂ ಹತ್ತಿ ಬೆಳೆಗಳು ತೇವಾಂಶ ಅಭಾವದಿಂದ ಬಳಲುತ್ತಿವೆ. ಶೇ.100 ರಷ್ಟು ಬೆಳೆಯಬೇಕಿದ್ದ ಜಾಗದಲ್ಲಿ ಕೇವಲ ಶೇ.30 ರಷ್ಟು ಮಾತ್ರ ಬೆಳೆದಿದೆ ಎಂದು ತಿಳಿಸಿದರು.



ಎಲ್ ನಿನೋ ಪರಿಣಾಮದಿಂದ ಜಲಾನಯನ ಪ್ರದೇಶಗಳಲ್ಲಿ ನಿರೀಕ್ಷಿತ ಮಳೆಯಾಗಿಲ್ಲ. ಕಳೆದ ವರ್ಷ ಇದೇ ಅವಧಿಯಲ್ಲಿ ತುಂಗಭದ್ರಾ ಜಲಾಶಯದಲ್ಲಿ 80 ಟಿಎಂಸಿಗೂ ಹೆಚ್ಚು ನೀರಿತ್ತು. ಆದರೆ ಪ್ರಸ್ತುತ ಕೇವಲ 28 ಟಿಎಂಸಿ ನೀರು ಮಾತ್ರ ಸಂಗ್ರಹವಿದೆ. ಕಾಲುವೆಗೆ ನೀರು ಬಿಡುಗಡೆಯಾಗದ ಕಾರಣ ಸಿರುಗುಪ್ಪ, ಕಂಪ್ಲಿ ಮತ್ತು ಬಳ್ಳಾರಿ ಭಾಗದಲ್ಲಿ ಭತ್ತದ ಬಿತ್ತನೆ ಸಾಧ್ಯವಾಗಿಲ್ಲ. ಹೀಗಾಗಿ ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕು ಹಾಗೂ ಪರ್ಯಾಯ ಬೆಳೆಗಳಿಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಮುಖ್ಯಮಂತ್ರಿಗಳ ಆದೇಶದಂತೆ ತಾಲೂಕು ಮಟ್ಟದ ಅಧಿಕಾರಿಗಳ ತಂಡ ಕ್ಷೇತ್ರ ಭೇಟಿ ಪರಿಶೀಲನೆ ನಡೆಸುತ್ತಿದ್ದು, ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಲಾಗುವುದು. ಕೇಂದ್ರದ ಡ್ರಾಟ್ ಮಾನಿಟರಿಂಗ್ ಸೆಲ್ ಮೂಲಕ ಹವಾಮಾನ ದತ್ತಾಂಶ ಹಾಗೂ ಒಣ ಹವೆ ಆಧಾರದ ಮೇಲೆ ಡ್ರಾಟ್ ಟ್ರಿಗರ್ ನಿಯಮಾವಳಿಗಳಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಬಳ್ಳಾರಿ ತಾಲೂಕಿನ ಹಲಕುಂದಿ ಗ್ರಾಮದಲ್ಲಿ ಸ್ಪಾಂಜ್ ಐರನ್ ಕಾರ್ಖಾನೆ ಧೂಳಿನಿಂದ ಬೆಳೆ ನಷ್ಟ ಮತ್ತು ಸಾರ್ವಜನಿಕರ ಉಸಿರಾಟದ ತೊಂದರೆ ಕುರಿತು ಸ್ಪಂದಿಸಿದ ಜಿಲ್ಲಾಧಿಕಾರಿ, ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಅವರು ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದ್ದಾರೆ. ತನಿಖಾ ವರದಿ ಬಂದ ತಕ್ಷಣ ಕಾನೂನು ಹಾಗೂ ನ್ಯಾಯಾಲಯದ ವ್ಯಾಪ್ತಿಯಲ್ಲಿ ರೈತರ ಹಿತರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಂ.ಸೋಮಸುಂದರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ್, ಉಪ ನಿರ್ದೇಶಕ ಎಸ್.ಎನ್.ಮಂಜುನಾಥ್, ಬಳ್ಳಾರಿ ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ, ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ರೈತರು ಹಾಗೂ ಇತರರಿದ್ದರು.

# ಆಷಾಡ ಏಕಾದಶ: ಮಕ್ಕಳು ವಿಠ್ಠಲ-ರುಕ್ಮಿಣಿ ಛದ್ಮವೇಷ

• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

ತಾಲೂಕಿನ ತೋರಣಾ ಗ್ರಾಮದ ಸ್ವಾಮಿ ವಿವೇಕಾನಂದ ಪಬ್ಲಿಕ್ ಶಾಲೆಯ ಆವರಣದಲ್ಲಿ ಶನಿವಾರ ಸಂಸ್ಥೆಯ ಅಧ್ಯಕ್ಷ ಬಾಲಾಜಿ ಫಿರಂಗೆ ಅವರು ಭಗವಾನ್ ಪರಮಾತ್ಮ ವಿಠ್ಠಲ ರುಕ್ಮಿಣಿ ಭಾವಚಿತ್ರಕ್ಕೆ ಪುಷ್ಪ ಹಾರ ಹಾಕಿ ಗೌರವ ಸಲ್ಲಿಸಿ ಮಾತನಾಡಿ, ನಮ್ಮ ದೇಶದಲ್ಲಿ ಏಕಾದಶಿ ಮತ್ತು ಉಪವಾಸ ಪರ್ಯಾಯ ವಾಚಕಗಳಾಗಿದೆ. ನಮ್ಮ ಧರ್ಮ ಶಾಸ್ತ್ರಗಳಲ್ಲಿ ಅನೇಕ ರೀತಿಯ ಉಪವಾಸ ವ್ರತಗಳಿದ್ದು, ಎಲ್ಲವುಗಳಿಗೂ ತನ್ನದೇ ಆದ ಮಹತ್ವವಿದೆ. ಪಾಲಿಸುವ ಶ್ರದ್ಧೆಯ ಬಳಗವಿದೆ. ಈ ವ್ರತವು ಭಾರತದಾದ್ಯಂತ ಎಲ್ಲಾ ವೈಷ್ಣವ ಮತ್ತು ಭಾಗವತ್ ಸಂಪ್ರದಾಯದ ಅನುಯಾಯಿಗಳಿಗೆ ಅವುಗಳನ್ನು ನಿತ್ಯ ವ್ರತವಾಗಿದೆ.

ಅಂತಃಕರಣ ಶುದ್ಧಿ, ಬಹಿರಂಗಶುದ್ಧಿ, ಆರೋಗ್ಯ ಭಾಗ್ಯ ಸಕಲ ದೋಷಗಳ ಪರಿಹಾರ ಈ ಫಲವಾಗಿದೆ.




ವ್ರತಾಚರಣೆಯ ವಿಠ್ಠಲ ನಾಮಸ್ಮರಣೆಯಿಂದ ಹೃದಯ ಅಪಘಾತ ಮಧುಮೇಹ, ಬಿಪಿ ಇಂತಹ ರೋಗನಿವಾರಣೆ ಮಾಡುವಂತ ಅಗಾಧ ಶಕ್ತಿ ಹೊಂದಿದೆ ಎಂದು ಹೇಳಿದರು


ಶಾಲೆ ಮುದ್ದು ಮಕ್ಕಳು ವಿಠಲ- ರುಕ್ಷೀಣಿ ಛದ್ಮ ವೇಷಭೂಷಣ ಧರಿಸಿ ಮೆರವಣಿಗೆ ನಡೆಯಿತು.

ಶಾಲೆ ಅಧ್ಯಕ್ಷ ಬಾಲಾಜಿ ಆರ್ ಫಿರಂಗೆ ಮೆರವಣಿಗೆಗೆ ಚಾಲನೆ ನೀಡಿದರು.

ವಿದ್ಯಾರ್ಥಿಗಳು ವಿಠ್ಠಲ ರುಕ್ಮಿಣಿ ಮಾತೇಯ ವೇಷ ಧರಿಸಿ ವಿಠ್ಠಲ ವಿಠ್ಠಲ ವಿಠ್ಠಲಾ ಹರಿ ಓಂ ವಿಠ್ಠಲ ಎಂಬ ಹಾಡಿನ ಮೇಲೆ ನೃತ್ಯ ಮಾಡಿದರು. ಮಕ್ಕಳು ತಲೆಯ ಮೇಲೆ ತುಳಸಿ ವೃಂದಾವನ ಹೊತ್ತು ಭಜನೆ ಮಾಡಿದರು ಟಾಳ, ಮೃದಂಗ ವೀಣೆ ಬಾರಿಸುತ್ತಾ ಜಯ ಜಯ ರಾಮ, ಕೃಷ್ಣ ಹರಿ ದೇವರ ನಾಮ ಸ್ಮರಣೆ ಮಾಡುತ್ತಾ ಕುಣಿದು ಕುಪ್ಪಳಿಸಿ ಜ್ಞಾನದೇವ್ ತುಕಾರಾಂ ಸ್ಮರಿಸುತ್ತ ಭಜನೆ ಮಾಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು ಬಾಲಾಜಿ, ಸರೋಜಾ ಬಿರಾದಾರ, ಅನುರಾಧಾ ಬಿರಾದಾರ, ಪ್ರಭಾವತಿ, ಸೃಷ್ಟಿ, ರಾಜೇಶ್ವರಿ ಹಾಗೂ ವಿದ್ಯಾರ್ಥಿಗಳು ಇದ್ದರು.

# ಮೈದುಂಬಿಕೊಂಡ ಹೊಸದೇವತಾ ಫಾಲ್ಸ್







• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಮಳೆ ಚೆನ್ನಾಗಿ ಆಗುತ್ತಿರುವುದರಿಂದ ಇಲ್ಲಿಯ ಹಲವು ಜಲಪಾತಗಳು ತನ್ನ ವೈಭವವನ್ನು ಹೆಚ್ಚಿಸಿಕೊಂಡಿದ್ದು, ಅದರಲ್ಲಿ ವಾಸರಕುದ್ರಿಗೆ ಪಂಚಾಯಿತಿ ವ್ಯಾಪ್ತಿಗೆ ಬರುವ ಹೊಸದೇವತಾ ಫಾಲ್ಸ್, ಬೆಳಸೆ ಗ್ರಾ.ಪಂ. ವ್ಯಾಪ್ತಿಗೆ ಬರುವ ತಳಗದ್ದೆಯ ದೊಣ್ಣೆಫಾಲ್ಸ್ ಕೂಡ ಒಂದಾಗಿದೆ. ಇಲ್ಲಿಗೆ ಪ್ರತಿದಿನ ಹಲವರು ಭೇಟಿ ನೀಡುತ್ತಿದ್ದು, ಇದರ ಸೌಂದರ್ಯಕ್ಕೆ ಮಾರುಹೋಗುತ್ತಿದ್ದಾರೆ.

ಹೊಸದೇವತಾ ದೇವಸ್ಥಾನದ ಪಕ್ಕದಲ್ಲಿಯೇ ಈ ನೀರು ಹರಿಯುತ್ತಿರುವುದರಿಂದಾಗಿ ಹಾಗೇ ಅಷ್ಟೇನು ಅಪಾಯ ಇಲ್ಲದಿರುವುದರಿಂದ ಪ್ರವಾಸಿಗರು ಅಲ್ಲಿಗೆ ತೆರಳಿ ಈಜು ಹಾಗೂ ಫೋಟೋಗಳನ್ನು ಕ್ಲಿಕ್ಕಿಸಿಕೊಳ್ಳುತ್ತಿದ್ದಾರೆ. ಅದರಂತೆ ತಳಗದ್ದೆಯ ದೊಣ್ಣೆಫಾಲ್ಸ್ ಕೂಡ ಮನಮೋಹಕವಾಗಿದ್ದು ಇಲ್ಲಿಯೂ ಕೂಡ ಅಪಾಯಕಾರಿಯಲ್ಲದಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಾರೆ. ಹಾಗೇ ಶನಿವಾರ ಮತ್ತು ಭಾನುವಾರ ರಜೆ ಇರುವುದರಿಂದ ಇಲ್ಲಿಗೆ ಪ್ರವಾಸಿಗರ ಸಂಖ್ಯೆ ಕೂಡ ಅಧಿಕವಾಗುತ್ತದೆ.

ವಿಶೇಷವಾಗಿ ಅಂಕೋಲಾದ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಇಲ್ಲಿಗೆ ತೆರಳಿ ಇಲ್ಲಿಯ ಸೌಂದರ್ಯದ ಜತೆಗೆ ಜನರು ಬೆರೆಯುತ್ತಾರೆ. ನೋಡಲು ಕೂಡ ಸುಂದರವಾಗಿ ನೀರು ಬೀಳುತ್ತಿರುವುದು ಜತೆಗೆ ಕೆಳಗಡೆ ಈಜಾಡುವ ಕೊಳದಂತೆ ಇರುವುದರಿಂದ ಇದು ಪ್ರವಾಸಿಗರಿಗೆ ಕೈಬೀಸಿ ಕರೆದಂತಿದೆ. ಈ ಹಿನ್ನೆಲೆಯಲ್ಲಿ ಇದೇ ಮಾರ್ಗವಾಗಿ ಚಲಿಸುವ ಇತರೆ ಪ್ರವಾಸಿಗರು ಇಲ್ಲಿಗೆ ಭೇಟಿ ನೀಡಿ ತೆರಳುತ್ತಿದ್ದಾರೆ.

ವಿಭೂತಿ ಫಾಲ್ಸ್: ಮುಖ್ಯವಾಗಿ ತಾಲೂಕಿಗೆ ಒಂದು ಕೀರ್ತಿ ತಂದ ಜಲಪಾತವೆಂದರೆ ಅದು ವಿಭೂತಿಫಾಲ್ಸ್. ಅತಿ ಎತ್ತರದಿಂದ ನೀರು ಹರಿಯುವುದರಿಂದ ಸಹಜವಾಗಿಯೇ ಪ್ರವಾಸಿಗರನ್ನು ಇಲ್ಲಿಗೆ ಸೆಳೆಯುತ್ತದೆ. ಈಜಾಡಲು ಹೇಳಿ ಮಾಡಿಸಿದ ಜಾಗದಂತಿದ್ದರೂ ಇದು ಅಪಾಯಕಾರಿ ಸ್ಥಳ ಆಗಿರುವುದರಿಂದ ಅರಣ್ಯ ಇಲಾಖೆಯವರು ಅಧಿಕ ಮಳೆಯಾದರೆ ಇಲ್ಲಿಗೆ ಬರುವ ರಸ್ತೆಯನ್ನು ಬಂದ್ ಮಾಡುತ್ತಾರೆ.

ಗೋಕರ್ಣದಿಂದ ಅಚವೆ ಮೂಲಕ ಶಿರಸಿಗೆ ತೆರಳುವವರಿಗೆ ಹಾಗೇ ಯಲ್ಲಾಪುರದಿಂದ ಗೋಕರ್ಣಕ್ಕೆ ಬರುವ ಪ್ರವಾಸಿಗರಿಗೂ ಕೂಡ ವಿಭೂತಿ ಫಾಲ್ಸ್ ಸಮೀಪದ ದಾರಿಯಾಗಿದೆ. ಇಲ್ಲಿಗೆ ಸ್ಥಳೀಯರ ಜತೆಗೆ ಹೊರಗಿನ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಮಳೆಗಾಲದಲ್ಲಿ ಫಾಲ್ಸ್‌ಗೆ ತೆರಳಲು ಕಷ್ಟಕರವಾಗಿದೆ. ಹಾಗೇಯೇ ಇಲ್ಲಿ ಸಾಹಸ ಮಾಡಲು ಹೋಗಿ ಕೆಲವರು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ. ಹೀಗಾಗಿ ಇದು ಅಪಾಯಕಾರಿ ಜಲಪಾತವು ಎಂದು ಕರೆಯಿಸಿಕೊಳ್ಳುತ್ತದೆ.

**:CITATION:**

**IN THE COURT OF THE I ADDL. CIVIL JUDGE AND JMFC., AT HUMNABAD.**

CRL. MISC. No.4255/2026.

**Petitioners :**

1. Bismilla Bee W/o Late. Mainoddin, Age: 56-year, Occu: House hold.
2. Siraj S/o Late. Mainoddin, Age: 29-year, Occu: Agriculture.

Both R/o Manna E Khelli. Tq. Chitguppa. Dist. Bidar.

**Respondent:**

**The Registrar of Birth and Death through The Tahasildar Chitguppa.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Husband of petitioner No.1 and Father of petitioner No.2. Deceased by namely LATE. MAINODDIN S/O USMAN SHA, he has died on 09.07.2021 at Manna E Khelli. Tq. Chitguppa. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 29.09.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22-07-2026.

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

**:CITATION:**

**IN THE COURT OF THE PRL. CIVIL JUDGE AND JMFC. AT HUMNABAD.**

CRL. MISC. No.4263/2026.

**Petitioners:**

**Mairunisa Begum W/o Sayyad Sha, Age: 30-yrs. Occu: House hold, R/o H. No.20/3, Faker Tekda near Railway Station Humnabad. Dist. Bidar.**

**Respondent:**

**The Registrar of Birth and Death through The Chief Officer TMC Humnabad. Dist. Bidar.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Husband of petitioner by namely LATE. MD. SYED SHA S/O MD. HUJAR SHA, he has died on 13.09.2021 at House Town Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 24.09.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 23-07-2026.

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

**:CITATION:**

**IN THE COURT OF THE PRL. CIVIL JUDGE AND JMFC., AT HUMNABAD.**

CRL. MISC. No.4248/2026.

**Petitioners :**

**Vijaykumar S/o late Khanderao, Age: 56-yrs. Occu: Business, R/o Town Chitguppa. Tq. Humnabad. Dist. Bidar.**

**Respondent:**

**The Registrar of Birth and Death through The Chief officer TMC Chitguppa. Dist. Bidar.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner by namely LATE. SHAKUNTALA BAI W/O KHANDERAO, she was died on 20.08.2016 at Town Chitguppa. Tq. Chitguppa, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 23.09.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22-07-2026.

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

# ಎನ್ ಎಸ್ ಯು ಐ ವತಿಯಿಂದ ಪ್ರತಿಭಟನೆ




• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ನಗರದಲ್ಲಿ ನೀಟ್ ಪೇಪರ್ ಲೀಕ್, ದೆಹಲಿಯ ಜಂತರ್ ಮಂತರ್ ನಲ್ಲಿ ವಿದ್ಯಾರ್ಥಿಗಳ ಮೇಲೆ ನಡೆದ ಲಾಠಿ ಪ್ರಹಾರ ನಡೆಸಿರುವುದನ್ನು ಖಂಡಿಸಿ ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ಪದಾಧಿಕಾರಿಗಳು, ಸದಸ್ಯರು ಪ್ರತಿಭಟನೆ ನಡೆಸಿದರು.ನಂತರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆಗೆ ಆಗ್ರಹಿಸಿ ತಹಶೀಲ್ದಾರ್ ಗೆ ಮನವಿ ಪತ್ರವನ್ನು ಸಲ್ಲಿಸಿದರು. ನಂತರ ಮಾತನಾಡಿದ ಪ್ರಮುಖರು, ನಿಮ್ಮ ಪರವಾಗಿ ನಾವಿದ್ದೇನೆ ಎಂದು ವಿದ್ಯಾರ್ಥಿಗಳಿಗೆ ಧೈರ್ಯ ತುಂಬುವುದು ಪ್ರಧಾನಿ, ಶಿಕ್ಷಣ ಸಚಿವರ ಕರ್ತವ್ಯ.ಆದರೆ ಈ ಕಾರ್ಯ ಮಾಡದ ಸರ್ಕಾರದ ವಿರುದ್ಧ ಯುವಜನತೆ ಪ್ರತಿಭಟನೆ ನಡೆಸುವಾಗ ಪೊಲೀಸರು ನಡೆಸಿದ ದೌರ್ಜನ್ಯ ಎಂದಿಗೂ ಒಪ್ಪುವಂತಹದ್ದಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ನಗರದ ಪ್ರಮುಖ ಬೀದಿಗಳಲ್ಲಿ ನಡೆದ ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.ನೀಟ್ ಪೇಪರ್ ಲೀಕ್ ನಿಂದ ಬೇಸತ್ತು ಆತ್ಮಹತ್ಯೆಗೊಳಗಾದ ವಿದ್ಯಾರ್ಥಿಗಳಿಗೆ ನ್ಯಾಯ ಸಿಗಬೇಕು ಎಂದು ಆಗ್ರಹಿಸಿದರು.

# ಪಾಲಕರ ಸಹಭಾಗಿತ್ವದಿಂದಲೇ ಮಕ್ಕಳ ಶೈಕ್ಷಣಿಕ ಯಶಸ್ಸು




• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಗುರಿ ತಲುಪಲು ಶಿಕ್ಷಕರಷ್ಟೇ ಪಾಲಕರ ಸಹಭಾಗಿತ್ವವೂ ಅತ್ಯಂತ ಅಗತ್ಯವಾಗಿದೆ ಎಂದು ನಿವೃತ್ತ ಪ್ರಾಚಾರ್ಯ ಚಂದ್ರಕಾಂತ್ ಬಿರಾದಾರ್ ಹೇಳಿದರು.

ತಾಲೂಕಿನ ಹಾಲ್ಬರ್ಗ ಗ್ರಾಮದ ಅನುಗ್ರಹ ಶಾಲೆಯಲ್ಲಿ ಆಯೋಜಿಸಿದ್ದ ಪ್ರಸಕ್ತ ಸಾಲಿನ ಪಾಲಕರ–ಶಿಕ್ಷಕರ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಆದರ್ಶ ಮೌಲ್ಯಗಳನ್ನು ಬೆಳೆಸುವುದು ಶಿಕ್ಷಕರು ಮತ್ತು ಪಾಲಕರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಿ ಸರಿಯಾದ ಮಾರ್ಗದರ್ಶನ ನೀಡಿದರೆ ಅವರು ಉತ್ತಮ ಸಾಧನೆ ಮಾಡಬಹುದು ಎಂದು ಹೇಳಿದರು. ಪಾಲಕರು ಪ್ರತಿದಿನ ಮಕ್ಕಳೊಂದಿಗೆ ಸಮಯ ಕಳೆಯುವ ಮೂಲಕ ಅವರ ಭವಿಷ್ಯ ರೂಪಿಸುವಲ್ಲಿ ಸಕ್ರಿಯ ಪಾತ್ರವಹಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಪ್ರಾಚಾರ್ಯ ಫಾದರ್ ಪ್ರಸನ್ನ ಕುಮಾರ್ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೆ ಕಡಿಮೆ ಶುಲ್ಕದಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದು ಸಂಸ್ಥೆಯ ಧ್ಯೇಯವಾಗಿದ್ದು, ಶಾಲೆಯ ಅಭಿವೃದ್ಧಿಗೆ ಪಾಲಕರ ಸಹಕಾರ ಅಗತ್ಯ ಎಂದು ತಿಳಿಸಿದರು.

ಪಾಲಕರ ಪ್ರತಿನಿಧಿ ಸಂಜೀವ್ ಕುಮಾರ್ ರಾಥೋಡ್ ಅನುಗ್ರಹ ಶಾಲೆಯ ಶಿಕ್ಷಣ ಗುಣಮಟ್ಟವನ್ನು ಮೆಚ್ಚುಗೆ ವ್ಯಕ್ತಪಡಿಸಿದರು. ಉಪ ಪ್ರಾಚಾರ್ಯರಾದ ನವೀನ್ ಕುಮಾರ್ ಹಾಗೂ ಸತೀಶ್ ಕುಮಾರ್ ಉಪಸ್ಥಿತರಿದ್ದರು. ಶಿಕ್ಷಕಿ ಸುಧಾರಾಣಿ ಕಾರ್ಯಕ್ರಮ ನಿರೂಪಿಸಿ, ಸಂಜುರಾಣಿ ವರದಿ ವಾಚಿಸಿದರು. ಪಾರ್ವತಿ ಮೇಡಂ ಸ್ವಾಗತಿಸಿದರು.

# ಎಲ್ಲ ಭಾಷೆಯಲ್ಲಿ ಸಿಇಟಿ ಬರೆಯಲು ಅವಕಾಶ ಕಲ್ಪಿಸಿ ಶಿಕ್ಷಕರ ನೇಮಕಾತಿ ಕರಡುಪ್ರತಿ ಮರುಪರಿಷ್ಕರಣೆಗೆ ಆಗ್ರಹ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಕರ್ನಾಟಕ ಸರ್ಕಾರವು ಶಿಕ್ಷಕರ ನೇಮಕಾತಿಗಾಗಿ ಹೊರಡಿಸಿರುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ)ಕರಡು ನಿಯಮಾವಳಿ ಮರುಪರಿಷ್ಕರಿಸಿ ಸಿಇಟಿ ಪರೀಕ್ಷೆ ಎಲ್ಲ ಭಾಷೆಯಲ್ಲಿ ಬರೆಯಲು ಅನೂವು ಮಾಡಿಕೊಡಬೇಕು ಎಂದು ಕರ್ನಾಟಕ ರಾಜ್ಯ ಭಾಷಾ ಅಲ್ಪಸಂಖ್ಯಾತ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟಕರ್ ನೇತೃತ್ವದಲ್ಲಿ ರಾಜ್ಯ ಶಾಲಾ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯಕಾರ್ಯದರ್ಶಿಗಳಿಗೆ ಬರೆದ ಮನವಿ ಪತ್ರ ತಹಸೀಲ್ದಾರರಿಗೆ ಸಲ್ಲಿಸಿದರು.

ಬಳಿಕ ಮಾತನಾಡಿದ ದತ್ತಾತ್ರಿ ಕಾಟಕರ್ ಅವರು, ಪ್ರಸ್ತುತ ಸಿಇಟಿ ಕರಡು ನಿಯಮಾವಳಿಯಿಂದ ಗ್ರಾಮೀಣ ಭಾಗದ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತ ಸಮುದಾಯದ ಸಾವಿರಾರು ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗುವ ಸಾಧ್ಯತೆಯಿರುವುದರಿಂದ ಸರ್ಕಾರ ನೇಮಕಾತಿ ಕರಡು ನಿಯಮಾವಳಿಯಲ್ಲಿ ಷರತ್ತುಗಳನ್ನು ಸಡಿಲಿಸುವುದು ಅನಿವರ್ಯವಾಗಿದೆ.ಸಿಇಟಿ ಪರೀಕ್ಷೆ ಕೇವಲ ಇಂಗ್ಲೀಷ ಮತ್ತು ಕನ್ನಡ ಭಾಷೆಯಲ್ಲಿ ಬರೆಯಬೇಕು, ಪಿಯುಸಿ ಅಂಕಗಳು ಅರ್ಹತೆಗಾಗಿ ಕಡ್ಡಾಯಗೊಳಿಸಿರುವುದು ಹಾಗೂ ಕನ್ನಡ ಮತ್ತು ಇಂಗ್ಲೀಷ ಭಾಷೆಗಳಲ್ಲಿ ಕನಿಷ್ಠ ಅಂಕಗಳನ್ನು ಕಡ್ಡಾಯಗೊಳಿಸಿರುವುದು ಅವೈಜ್ಞಾನಿಕವಾಗಿದೆ. ಕಾರಣ ಮರಾಠಿ,ಉರ್ದು ಸೇರಿದಂತೆ ಮಾನ್ಯತೆ ಪಡೆದ ಎಲ್ಲ ಭಾಷೆಯಲ್ಲಿ ಸಿಇಟಿ ಪರೀಕ್ಷೆ ಬರೆಯಲು ಎಲ್ಲರಿಗೂ ಉದ್ಯೋಗಾವಕಾಶ ಪಡೆಯಲು ಅವಕಾಶ ಮಾಡಿಕೊಡಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಪ್ರಮುಖರಾದ ಸುಧಾಕರ ಗಾಯಕವಾಡ, ಸಹದೇವ ಗೌಡಗಾಂವೆ,ಸಂದೀಪ ಉಮಾಜೀ, ಸಂಜೀವ ಬಿರಾದಾರ, ರಾಣಾಪ್ರತಾಪ ಯಾದವ, ದಿಲೀಪ ಬಿರಾದಾರ, ಜೈಹಿಂದ ಬಿರಾದಾರ, ತುಕಾರಾಮ ಮೋರೆ, ಉಮಾಕಾಂತ ಕೋಂಜಿವಾಲೆ,ಅಶೋಕ ಮಲ್ಲೇಶಿ,ಡಾ.ಗುಂಡೆರಾವ ಶೆಡೋಳೆ , ಡಾ.ಉದ್ಧವ ಕನಸೆ ಸೇರಿದಂತೆ ಅನೇಕರಿದ್ದರು.

# ಕನ್ನಡ ಉಳಿಸಿ, ಬೆಳೆಸುವ ಕಾರ್ಯ ಎಲ್ಲರದ್ದಾಗಿದೆ : ಮಾಮಡಿ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಕರ್ನಾಟಕದಲ್ಲಿ ಕನ್ನಡ ಉಳಿಸಿ, ಬೆಳೆಸುವ ಕಾರ್ಯ ಕಸಾಪ ಸೇರಿದಂತೆ ನಾಡಿನ ಸಮಸ್ಥ ಕನ್ನಡಿಗರದ್ದಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾಭಾರತಿ ಪಬ್ಲಿಕ್ ಶಾಲೆಯಲ್ಲಿ, ಕ.ಸಾ.ಪ. ಕ.ರಾ.ಸ.ನೌಕರರ ಸಂಘ, ಆದರ್ಶ ಶಿಕ್ಷಣ ಸಂಸ್ಥೆ ಹಾಗು ಬಸವ ಭಾಗ್ಯ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕನ್ನಡ ಉಳಿಸಿ ಬೆಳೆಸುವುದು ಎಲ್ಲಾ ಕನ್ನಡಿಗರ ಕನಸಾಗಿದೆ. ನಮ್ಮ ಹಿರಿಯರು ಭಾಷಾವಾರು ಪ್ರಾಂಗಳ ವಿಂಗಡನೆಯಲ್ಲಿ ಕನ್ನಡ ಮಾತನಾಡುವ ಗಡಿ ಭಾಗದಲ್ಲಿರುವ ನಮಗೆ ಕರ್ನಾಟಕದಲ್ಲಿ ಉಳಿಯುವಂತೆ ಮಾಡಿರುವುದು ನಮ್ಮೆಲ್ಲರ ಪುಣ್ಯ, ಇದನ್ನು ನಾವು ಉಳಿಸಿ, ಬೆಳೆಸಿಕೊಂಡು ಹೋಗಬೇಕಾಗಿದೆ. ಬೇರೆ ಭಾಷೆಗಳನ್ನು ನಾವು ಗೌರವಿಸೋಣ ಅದರ ಜೊತೆಗೆ ಕನ್ನಡತನ ಮರೆಯಬಾರದು. ನಮ್ಮ ಮಾತೃಭಾಷೆ ಕನ್ನಡವನ್ನು ಪ್ರೀತಿಸಬೇಕು. ಪತ್ರಕರ್ತರು ಕನ್ನಡ ಭಾಷೆಯನ್ನು ಬೆಳೆಸುವಲ್ಲಿ ದೊಡ್ಡ ಪಾತ್ರ ವಹಿಸಿದ್ದಾರೆ. ಅವರು ನಿಜಾಂಶವನ್ನು ಅಚ್ಚಕನ್ನಡದಲ್ಲಿ ಬರೆದು ಜನಮಾನಸಕ್ಕೆ ಮುಟ್ಟಿಸುವ ಕಾರ್ಯ ಮಾಡುತ್ತಿರುವುದು ಪ್ರಶಂಶನಾರ್ಹವಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪೊಲೀಸ್ ಉಪಾಧೀಕ್ಷಕ ಬಲ್ಲಪ್ಪ ನಂದಗಾವಿ, ಗಡಿಭಾಗದಲ್ಲಿ ಕನ್ನಡ ಉಳಿಯಬೇಕಾದರೆ ನಾವೆಲ್ಲರೂ ನಮ್ಮ ಮನೆಯಿಂದಲೇ ಕನ್ನಡವನ್ನು ಬೆಳೆಸುವಂತಾಗಬೇಕು. ನಮ್ಮ ತಾಯಿ, ತಾಯಿನಾಡಿಗಾಗಿ ನಾವೆಲ್ಲರೂ ಕಟಿಬದ್ಧರಾಗಿರಬೇಕು. ಪತ್ರಕರ್ತರು ಜಾತಿ, ಧರ್ಮಗಳಿಂದ ವಿಮುಕ್ತರಾಗಿ ಸಾಮಾಜಿಕ ಚಿಂತಕರಾಗಿ ಕಾರ್ಯನಿರ್ವಹಿಸಬೇಕು. ಪೋಸ್ಕೋ ಕಾಯಿದೆ ಸೇರಿದಂತೆ ಹಲವು ವರದಿಗಳಲ್ಲಿ ಗೌಪ್ಯತೆಗಳನ್ನು ಕಾಪಾಡಿಕೊಂಡು ಹೋಗುವು ಕಾರ್ಯ ಪತ್ರಕರ್ತರದ್ದಾಗಿದೆ. ತಕ್ಷಣ ಸುದ್ದಿಗಳನ್ನು ಮುಟ್ಟಿಸುವ ಧಾವಂತದಲ್ಲಿ ಸತ್ಯವನ್ನು ಮರೆಮಾಚಬಾರದು. ಕನ್ನಡ ಕಲಿಕೆಯ ಜೊತೆಯಲ್ಲಿ ಮಕ್ಕಳಲ್ಲಿ ಸಂಸ್ಕಾರ ಬಿತ್ತುವ ಕಾರ್ಯವಾಗಬೇಕು ಎಂದು ಹೇಳಿದರು.

ವಿದ್ಯಾಭಾರತಿ ಪಬ್ಲಿಕ್ ಶಾಲೆಯ ಮುಖ್ಯಶಿಕ್ಷಕ ರೋಹಿತ್ ವೈರಾಗೆ ಮಾತನಾಡಿ, ಪತ್ರಕರ್ತರು ಪ್ರಚಲಿತ ವಿದ್ಯಮಾನಗಳಬಗ್ಗೆ ಬೆಳಕು ಚೆಲ್ಲಬೇಕು. ಕ.ಸಾ.ಪ ಸೇರಿದಂತೆ ಸಂಘ ಸಂಸ್ಥೆಯವರು ವಿದ್ಯಾರ್ಥಿಗಳಲ್ಲಿ ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸುವ ಕಾರ್ಯಮಾಡಬೇಕು ಎಂದು ಸಲಹೆ ನೀಡಿದರು. ಪತ್ರಕರ್ತರ ಸಂಘದ ಗೌರವಾಧ್ಯಕ್ಷ ಅಶೋಕ ರಾಜೋಳೆ ಪತ್ರಿಕಾರಂಗ ಬೆಳೆದು ಬಂದ ದಾರಿಯಬಗ್ಗೆ ಬೆಳಕು ಚೆಲ್ಲಿಸಿದರು. ಕಾರ್ಯಕ್ರಮದಲ್ಲಿ ಕ.ರಾ.ಸ.ನೌ.ಸಂಘದ ಪ್ರಧಾನ ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂತೋಷ ಬಿಜಿಪಾಟೀಲ ಉಪಸ್ಥಿತರಿದ್ದರು. ಇದೇವೇಳೆ ನಿಕಟಪೂರ್ವ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಹಿರಿಯ ಪತ್ರಕರ್ತರಾದ ಗಣಪತಿ ಬೋಚರೆ, ವಿಜಯಕುಮಾರ ಪರ್ಮಾ, ರಾಜೇಶ ಮುಗಟೆ ಸೇರಿದಂತೆ ಕಾರ್ಯನಿರತ ಪತ್ರಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು.

ರೋಹಿತ ವೈರಾಗೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಸಂತೋಷ ಬಿಜಿಪಾಟೀಲ ವಂದಿಸಿದರು.

> ಬರುವ ನವ್ಹೆಂಬರ್ ತಿಂಗಳಲ್ಲಿ ಶಿಕ್ಷಣ ಇಲಾಖೆ ಆಯೋಜಿಸುವ ಭಾಷಣ ಸ್ಪರ್ಧೆಗಳಲ್ಲಿ ಕನ್ನಡ ಭಾಷೆ ಹೊರತು ಪಡಿಸಿ, ಬೇರೆ ಯಾವುದೇ ಭಾಷೆಗಳ ಶಬ್ದಗಳನ್ನು ಬಳಸದೇ ಭಾಷಣ ಮಾಡುವ ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನಗದು ರೂಪದಲ್ಲಿ ನೀಡಲಾಗುವುದು.
>
> – ನಾಗಭೂಷಣ ಮಾಮಡಿ, ಅಧ್ಯಕ್ಷರು, ಕ.ಸಾ.ಪ ಭಾಲ್ಕಿ.

## ಬುದ್ಧಿವಾದ ಹೇಳಿದ್ದಕ್ಕೆ ಮನೆ ಬಿಟ್ಟು ಹೋದ ಬಾಲಕಿ

ಕಲಬುರಗಿ: ಮನೆಯಲ್ಲಿ ಗಲೀಜ್ ಇದ್ದು, ಅದನ್ನು ಸ್ವಚ್ಛಗೊಳಿಸಲು ತಾಯಿ ಬುದ್ಧಿವಾದ ಹೇಳಿದ್ದರಿಂದ ಆಕೆಯ 15 ವಯಸ್ಸಿನ ಪುತ್ರಿ ಮನೆ ಬಿಟ್ಟು ಹೋದ ಘಟನೆ ನಗರ ನಾಗನಹಳ್ಳಿ ಕ್ರಾಸ್ ಬಳಿ ಇರುವ ಜಮಶೆಟ್ಟಿ ನಗರದಲ್ಲಿ ವರಿಯಾಗಿದೆ. ಶ್ರೀಮತಿ ಗಾಯತ್ರಿ ಗಂಡ ದಿ. ಗೋಪಾಲಕೃಷ್ಣ ಕೊಗನೂರ್ ಅವರ ಮೊದಲ ಪುತ್ರಿ ಏಳನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಭಾಗಿರಥಿ ಕಾಣೆಯಾದ ಬಾಲಕಿಯಾಗಿದ್ದಾಳೆ.

ಬುದ್ದಿವಾದ ಹೇಳಿದ್ದಕ್ಕೆ ಸಿಟ್ಟಿನಿಂದ ಬ್ಯಾಗ್ ತೆಗೆದುಕೊಂಡು ಮನೆಯಿಂದ ಹೊರಹೋಗಿದ್ದಾಳೆ ಎಂದು ನೊಂದ ತಾಯಿ ದೂರು ಸಲ್ಲಿಸಿದ್ದು, ಈ ಕುರಿತು ಗುಲಬರ್ಗಾ ವಿಶ್ವವಿದ್ಯಾಲಯ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಪ್ಪನ ಕೆರೆಯಲ್ಲಿ ನವಜಾತ ಶಿಶುವಿನ ಶವ ಪತ್ತೆ

ಕಲಬುರಗಿ: ನಗರದ ಜಗತ್ ವೃತ್ತದ ಬಳಿ ಇರುವ ಅಪ್ಪನ ಕೆರೆ (ಶರಣಬಸವೇಶ್ವರರ ಕೆರೆ)ಯಲ್ಲಿ ಸುಮಾರು ಒಂದು ವರ್ಷದ ನವಜಾತ ಶಿಶುವಿನ ಶವ ತೇಲುತ್ತಿರುವ ಸ್ಥಿತಿಯಲ್ಲಿ ಕಳೆದ ಶುಕ್ರವಾರ ರಾತ್ರಿ ವರದಿಯಾಗಿದೆ.ಕೆರೆಯಲ್ಲಿ ಮಗುವಿನ ಕೊಳೆತ ಸ್ಥಿತಿಯಲ್ಲಿದ್ದ ಶವ ತೇಲುತ್ತಿರುವುದನ್ನು ಸ್ಥಳೀಯ ಸಾರ್ವಜನಿಕರು ಗಮನಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ ಮಗುವಿಗೆ ಸುಮಾರು 1ರಿಂದ 2 ವರ್ಷ ವಯಸ್ಸಾಗಿರಬಹುದು ಎಂದು ಅಂದಾಜಿಸಲಾಗಿದೆ.

ಸಾರ್ವಜನಿಕರು ಮಾಹಿತಿ ನೀಡಿದ ತಕ್ಷಣ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಹಾಗೂ ನಗರ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಮಗುವಿನ ಶವವನ್ನು ಹೊರತೆಗೆದಿದ್ದಾರೆ.

ಸ್ಥಳೀಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಮಗು ಕೆರೆಗೆ ಬಿದ್ದಿದ್ದು ಹೇಗೆ? ಇದು ಕೊಲೆಯೇ ಅಥವಾ ಅಪಘಾತವೇ? ಎಂಬ ಸತ್ಯಾಸತ್ಯತೆಯನ್ನು ಪತ್ತೆ ಹಚ್ಚಲು ತೀವ್ರ ತನಿಖೆ ಕೈಗೊಂಡಿದ್ದಾರೆ. ಮಗುವಿನ ಪೋಷಕರು ಯಾರು ಮತ್ತು ಯಾವ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂಬ ಬಗ್ಗೆ ಹೆಚ್ಚಿನ ಮಾಹಿತಿ ಇನ್ನಷ್ಟೇ ಹೊರಬರಬೇಕಿದೆ. ಪೋಲಿಸರು ಸಿಸಿಟಿವಿ ದೃಶ್ಯಾವಳಿಗಳನ್ನು ಆಧರಿಸಿ ತನಿಖೆ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ.

## ಆಷಾಢ ಏಕಾದಶಿ ಮಹೋತ್ಸವ: ಲಕ್ಷ್ಮೀ ತಿಮ್ಮಪ್ಪನ ಸನ್ನಿಧಿಯಲ್ಲಿ ಭಕ್ತಿಭಾವದ ಸಂಭ್ರಮ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜು. 25: ತಾಲೂಕಿನ ಐತಿಹಾಸಿಕ ಬೋರಬಂಡ ಸುಕ್ಷೇತ್ರದ ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವಸ್ಥಾನದಲ್ಲಿ ಆಷಾಢ ಏಕಾದಶಿ ಅಂಗವಾಗಿ ಶನಿವಾರ ಸಾವಿರಾರು ಭಕ್ತರು ಆಗಮಿಸಿ ಶ್ರೀ ದೇವರ ದರ್ಶನ ಪಡೆದು ವಿಶೇಷ ಪೂಜೆಗಳಲ್ಲಿ ಪಾಲ್ಗೊಂಡರು. ಮುಂಜಾನೆಯಿಂದಲೇ ದೇವಸ್ಥಾನದಲ್ಲಿ ಭಕ್ತರ ದಂಡು ನೆರೆದಿದ್ದು, ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು.

ಆಷಾಢ ಏಕಾದಶಿ ಪ್ರಯುಕ್ತ ದೇವಸ್ಥಾನವನ್ನು ವಿಶೇಷವಾಗಿ ಹೂವುಗಳಿಂದ ಅಲಂಕರಿಸಲಾಗಿತ್ತು. ಶ್ರೀ ಲಕ್ಷ್ಮೀ ತಿಮ್ಮಪ್ಪ ಸ್ವಾಮಿಗೆ ವಿಶೇಷ ಅಭಿಷೇಕ, ಅಲಂಕಾರ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದವು. ಭಕ್ತರು ದೇವರ ದರ್ಶನ ಪಡೆದು ತಮ್ಮ ಇಷ್ಟಾರ್ಥಗಳು ನೆರವೇರಲೆಂದು ಪ್ರಾರ್ಥಿಸಿದರು.

ಹಿಂದೂ ಧಾರ್ಮಿಕ ಸಂಪ್ರದಾಯದಲ್ಲಿ ಆಷಾಢ ಶುಕ್ಲ ಏಕಾದಶಿಯನ್ನು "ದೇವಶಯನಿ ಏಕಾದಶಿ" ಎಂದೂ ಕರೆಯಲಾಗುತ್ತದೆ. ಈ ದಿನದಿಂದಲೇ ಚಾತುರ್ಮಾಸ ಆರಂಭವಾಗುತ್ತದೆ ಎಂಬ ನಂಬಿಕೆಯಿದೆ. ಪುರಾಣಗಳ ಪ್ರಕಾರ ಶ್ರೀ ಮಹಾವಿಷ್ಣು ಕ್ಷೀರಸಾಗರದಲ್ಲಿ ಆದಿಶೇಷನ ಮೇಲೆ ಯೋಗನಿದ್ರೆಗೆ ಜಾರುತ್ತಾನೆ. ನಾಲ್ಕು ತಿಂಗಳ ಬಳಿಕ ಕಾರ್ತಿಕ ಶುಕ್ಲ ಏಕಾದಶಿಯಂದು ಪ್ರಬೋಧಿನಿ (ದೇವೋತ್ಥಾನ) ಏಕಾದಶಿ ದಿನ ಯೋಗನಿದ್ರೆಯಿಂದ ಎಚ್ಚರಗೊಳ್ಳುತ್ತಾನೆ ಎಂದು ಧಾರ್ಮಿಕ ಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ. ಬೋರಬಂಡ ಸುಕ್ಷೇತ್ರದ ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವಸ್ಥಾನವು ಉತ್ತರ ಕರ್ನಾಟಕದ ಪ್ರಮುಖ ವೈಷ್ಣವ ಕ್ಷೇತ್ರಗಳಲ್ಲಿ ಒಂದಾಗಿದ್ದು, ವರ್ಷಪೂರ್ತಿ ಸಾವಿರಾರು ಭಕ್ತರನ್ನು ತನ್ನತ್ತ ಸೆಳೆಯುತ್ತದೆ. ಆಷಾಢ ಏಕಾದಶಿ, ವೈಕುಂಠ ಏಕಾದಶಿ, ರಾಮನವಮಿ, ಶ್ರೀಕೃಷ್ಣ ಜನ್ಮಾಷ್ಟಮಿ ಸೇರಿದಂತೆ ವಿವಿಧ ಧಾರ್ಮಿಕ ಹಬ್ಬಗಳ ಸಂದರ್ಭದಲ್ಲಿ ವಿಶೇಷ ಪೂಜೆಗಳು ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಭಕ್ತರ ಆಧ್ಯಾತ್ಮಿಕ ನಂಬಿಕೆಯ ಕೇಂದ್ರವಾಗಿ ಈ ಕ್ಷೇತ್ರ ಪ್ರಸಿದ್ಧಿ ಪಡೆದಿದೆ.

## ಕೇಂದ್ರ ಸರಕಾರದ ಮೋಸ,ವಂಚನೆ ತಡೆಗೆ ಒತ್ತಾಯ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ದೇಶದಲ್ಲಿನಡೆಯುತ್ತಿರುವಮೋಸ,ವಂಚನೆ,ದೌರ್ಜನ್ಯಗಳನ್ನು ಖಂಡಿಸಿ ಮುದಗಲ್ ಮದನಿ ಇಸ್ಲಾಮಿಕ್ ಟ್ರಸ್ಟ್ ಪಧಾಧಿಕಾರಿಗಳು ಶನಿವಾರ ಉಪತಹಶೀಲ್ದಾರ್ ತುಳುಜಾರಾಮ್ ಸಿಂಗ್ ಅವರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ದೇಶದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಮೋಸ,ವಂಚನೆ ಮತ್ತು ವಿದ್ಯಾರ್ಥಿಗಳ ಮೇಲೆ ನಡೆಸುತ್ತಿರುವ ದೌರ್ಜನ್ಯಗಳು ಸಂವಿಧಾನಕ್ಕೆ ವಿರುದ್ದವಾಗಿವೆ. ಕೂಡಲೇ ಕೇಂದ್ರ ಸರಕಾರ ದಬ್ಬಾಳಿಕೆಯನ್ನು ನಿಲ್ಲಿಸಬೇಕು.ಇಲ್ಲವಾದಲ್ಲಿ ಉಗ್ರವಾದ ಪ್ರತಿಭಟನೆಯನ್ನು ಮಾಡಲಾಗುವುದು ಎಂದರು.ಸಿಪಿಐ ರಾಮಣ್ಣ ಜಾಲಗಾರ,ಟ್ರಸ್ಟ ನ ಪದಾಧಿಕಾರಿಗಳಾದ ಡಾ// ರಫಿ.ಇಸ್ಮಾಯಿಲ್ ಸೇರಿದಂತೆ ಇತರರು ಇದ್ದರು.

ಪೋಟೋ(ಆರ್.ಸಿ,ಹೆಚ್25ಮುದಗಲ್03) ಮುದಗಲ್: ದೇಶದಲ್ಲಿ ನಡೆಯುತ್ತಿರುವ ಮೋಸ,ವಂಚನೆ,ದೌರ್ಜನ್ಯಗಳನ್ನು ಖಂಡಿಸಿ ಮುದಗಲ್ ಮದನಿ ಇಸ್ಲಾಮಿಕ್ ಟ್ರಸ್ಟ್ ಪಧಾಧಿಕಾರಿಗಳು ಶನಿವಾರ ಉಪತಹಶೀಲ್ದಾರ್ ತುಳುಜಾರಾಮ್ ಸಿಂಗ್ ಅವರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

## ಡಾ. ಚನ್ನಬಸವಸ್ವಾಮಿ ಹಿರೇಮಠ ಅವರಿಗೆ ಒಲಿದ ದಿ ಬೆಸ್ಟ್ ಲೈಫ್ ಅಚೀವ್ ಮೆಂಟ್ ಅವಾರ್ಡ್

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದಡಾ. ಚನ್ನಬಸವಸ್ವಾಮಿ ಹಿರೇಮಠ ಹರೇಟನೂರು ಅವರ 47ನೇ ಜನ್ಮದಿನದ ಶುಭದಿನದಂದು, ಅವರ ಅನಾಥಪರ ಹಾಗೂ ಸಮಾಜಪರ ನಿರಂತರ ಸೇವಾ ಕಾರ್ಯಗಳನ್ನು ಗುರುತಿಸಿ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ. ತಮಿಳುನಾಡಿನ ಏಷಿಯಾ ಇಂಟರ್ ನ್ಯಾಷನಲ್ ಕಲ್ಚರ್ ರೀಸರ್ಚ್ ಯುನಿವರ್ಸಿಟಿ ವತಿಯಿಂದ ಇಂದು (ಜುಲೈ 25) ಜರುಗುವ ಕಾರ್ಯಕ್ರಮದಲ್ಲಿ, ಡಾ. ಚನ್ನಬಸವಸ್ವಾಮಿ ಹಿರೇಮಠ ಅವರಿಗೆ "ದಿ ಬೆಸ್ಟ್ ಲೈಫ್ ಅಚೀವ್ ಮೆಂಟ್ ಅವಾರ್ಡ್"ಗೌರವಾನ್ವಿತ ಪ್ರಶಸ್ತಿಯನ್ನು ನಾಡಿನ ಗಣ್ಯಾತಿಗಣ್ಯರ ಸಮಕ್ಷಮದಲ್ಲಿ ಪ್ರದಾನ ಮಾಡಿ ಸನ್ಮಾನಿಸಲಾಗುವುದೆಂದು ಸಂಸ್ಥೆಯ ಮುಖ್ಯಸ್ಥರು ಮಾಹಿತಿ ನೀಡಿದರು.

## ನಿವೃತ್ತಿ ಹೊಂದಿದ ಶಿವಪ್ಪ ಕಲ್ಲೂರಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣ ಸಮೀಪದ ಬನ್ನಿಗೋಳ ಶಾಲೆಯಲ್ಲಿ ಮುಖ್ಯಗುರುಗಳಾಗಿ ಕರ್ತವ್ಯನಿರ್ವಹಿಸಿ ಆಮದಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆ ಗೊಂಡು ನಿವೃತ್ತಿ ಹೊಂದಿದ ಶಿವಪ್ಪ ಕಲ್ಲೂರಗೆ ಬ್ರಾಡವೇ ಅಂಗಡಿಯಲ್ಲಿ ಟೈಲರ ಹಾಗೂ ಶಿಕ್ಷಕ ಬಳಗದವರಿಂದ ಸನ್ಮಾನಿ ಗೌರವಿಸಲಾಯಿತು.

ಈ ವೇಳೆ ಶಾಲಾ

ಶಿಕ್ಷಕರು ಅಶೋಕ, ಚಂದ್ರಶೇಖರ, ಹುಸೇನ್ಬಾಷಾ, ಶ್ರೀಮನ್ ಟೈಲರ ಮಹೇಬೂಬ್ ಕೊಳ್ಳಿ, ಬ್ರಾಡವೇ ಟೈಲೊರ ಚಂದ್ರಕಾಂತ ಕೆ. ವಿ, ಸುರೇಶ ಕೆ ಸೇರಿದಂತೆ ಇತರರಿದ್ದರು.

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಯಾದಗಿರಿ ಜಿಲ್ಲೆಯ ತಾಲೂಕುವಾರು ಪ್ರಗತಿ ವರದಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆ ಆರಂಭವಾಗಿದ್ದು, ಯಾದಗಿರಿ ಜಿಲ್ಲೆಯಲ್ಲಿ ಬಿಎಲ್ಓ ಗಳ ಮೂಲಕ ಮನೆ-ಮನೆಗೆ ಭೇಟಿ ನೀಡಿ ಎಣಿಕೆ ನಮೂನೆ (Enumeration Form - EF) ವಿತರಿಸುವ ಕಾರ್ಯವು ಚುರುಕಿನಿಂದ ಸಾಗುತ್ತಿದೆ. ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯಿಂದ ಲಭ್ಯವಿರುವ ಅಧಿಕೃತ ಅಂಕಿ-ಅಂಶಗಳ ಪ್ರಕಾರ, ಜಿಲ್ಲೆಯಲ್ಲಿ ಶೇ. 97.08% ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದೆ.

ಮನೆ-ಮನೆಗೆ ಗಣತಿ ನಮೂನೆ ನೀಡುವುದು ಹಾಗೂ ಡಿಜಿಟೈಸೇಶನ್ ಕಾರ್ಯವು ಕಳೆದ ಜೂನ್ 30 ರಿಂದ ಆರಂಭವಾಗಿದ್ದು, ಜುಲೈ 29 ರವರೆಗೆ ನಡೆಯಲಿದೆ. ಜೂನ್ 16 ರ ಅಂಕಿ-ಅಂಶಗಳ ಪ್ರಕಾರ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಒಟ್ಟು 10,53,236 ಮತದಾರರು ದಾಖಲಾಗಿದ್ದಾರೆ.

ಜಿಲ್ಲೆಯ ಒಟ್ಟು 10,53,236 (100%) ಮತದಾರರಿಗೆ ಎಣಿಕೆ ನಮೂನೆಗಳನ್ನು (ಇಈ) ಯಶಸ್ವಿಯಾಗಿ ವಿತರಿಸಲಾಗಿದ್ದು, ಈ ಪೈಕಿ 7,65,322 (72.66%) ನಮೂನೆಗಳನ್ನು ಈಗಾಗಲೇ ಡಿಜಿಟೈಸ್ ಮಾಡಲಾಗಿದೆ. ಉಳಿದಂತೆ 5,021 (0.48%) ನಮೂನೆಗಳನ್ನು ಆನ್‌ಲೈನ್ ಮೂಲಕ ಸ್ವೀಕರಿಸಲಾಗಿದೆ.

ಮನೆ-ಮನೆ ಸಮೀಕ್ಷೆಯ ವೇಳೆ ಜಿಲ್ಲೆಯಲ್ಲಿ ಒಟ್ಟು 76,254 ಂಖಆಆಔ ಮತದಾರರನ್ನು ಗುರುತಿಸಲಾಗಿದ್ದು, ಇದರಲ್ಲಿ ಗೈರು ಹಾಜರಾದವರು 1,468, ಶಾಶ್ವತವಾಗಿ ಸ್ಥಳಾಂತರಗೊಂಡವರು 42,377, ಮೃತ ಮತದಾರರು 20,514, ಈಗಾಗಲೇ ನೋಂದಾಯಿತರಾಗಿರುವವರು 11,546, ಇತರೆ 349 ಸೇರಿದ್ದಾರೆ.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಡಿಜಿಟೈಸೇಶನ್ ಕಾರ್ಯ ಪ್ರಗತಿಯಲ್ಲಿದ್ದು, ಹುಣಸಗಿ ತಾಲ್ಲೂಕು ಶೇ. 76.51% ರಷ್ಟು ಪ್ರಗತಿ ಸಾಧಿಸುವ ಮೂಲಕ ಮುಂಚೂಣಿಯಲ್ಲಿದೆ.

ಉಳಿದ ತಾಲ್ಲೂಕುಗಳ ವಿವರ: ಶೋರಾಪೂರ ಶೇ. 73.86, ಶಹಾಪೂರ ಶೇ. 73.88, ಯಾದಗಿರಿ ಶೇ. 67.42, ಗುರುಮಟಕಲ್ ಶೇ. 71.72, ವಡಗೇರಾ ಶೇ. 75.40.ಜಿಲ್ಲೆಯಲ್ಲಿ ಒಟ್ಟು 1,134 ಪಾರ್ಟ್‌ಗಳಲ್ಲಿ ಈ ಮಹತ್ವದ ಪ್ರಕ್ರಿಯೆ ನಡೆಯುತ್ತಿದ್ದು, ನಿಗದಿತ ಅವಧಿಯೊಳಗೆ ಸಂಪೂರ್ಣ ಡಿಜಿಟೈಸೇಶನ್ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲು ಚುನಾವಣಾ ಅಧಿಕಾರಿಗಳ ತಂಡ ಶ್ರಮಿಸುತ್ತಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೆಲ್ಹೇರಿ ಶಾಲೆಯಲ್ಲಿ ಏಕ್ ಪೇಡ್ ಮಾ ಕೇ ನಾಮ್ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್




ಭಾರತ ಸರ್ಕಾರ ಹಾಗೂ ಕರ್ನಾಟಕ ಸರ್ಕಾರದ ಆಶ್ರಯದಲ್ಲಿ ಯಾದಗಿರಿ ಅರಣ್ಯ ಉಪ ವಿಭಾಗ ಮತ್ತು ಗುರುಮಠಕಲ್ ಅರಣ್ಯ ಉಪ ವಿಭಾಗದ ಅರಣ್ಯ ಇಲಾಖೆಯ ವತಿಯಿಂದ ಯೆಲ್ಹೇರಿ ಸರ್ಕಾರಿ ಪ್ರೌಢಶಾಲೆಯಲ್ಲಿ ಶನಿವಾರ "ಏಕ್ ಪೇಡ್ ಮಾ ಕೇ ನಾಮ್" ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಯಾದಗಿರಿ ಉಪ ವಲಯ ಅರಣ್ಯಾಧಿಕಾರಿ ಭೀಮಾಶಂಕರ ಹಾಗೂ ಗುರುಮಠಕಲ್ ಉಪ ವಲಯ ಅರಣ್ಯಾಧಿಕಾರಿ ಅಶ್ವಥ್ ಕುಮಾರ್ ಭಾಗವಹಿಸಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಸಿಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಭೀಮಾಶಂಕರ ಅವರು, ಅರಣ್ಯ ನಾಶದಿಂದ ಪರಿಸರದಲ್ಲಿ ಅಸಮತೋಲನ ಉಂಟಾಗುತ್ತಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಕನಿಷ್ಠ ಒಂದು ಗಿಡ ನೆಟ್ಟು ಅದನ್ನು ಪೋಷಿಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು. "ಕಾಡು ಬೆಳೆಸಿ - ನಾಡು ಉಳಿಸಿ" ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು.


ಮುಖ್ಯ ಅತಿಥಿ ಸೋಮನಾಥ ರೆಡ್ಡಿ ಬೋರೆಡ್ಡಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದು ಮರವನ್ನು ನೆಟ್ಟು ಅದರ ಲಾಲನೆ-ಪಾಲನೆಯ ಜವಾಬ್ದಾರಿ ವಹಿಸಬೇಕು. ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಹೊಣೆಗಾರಿಕೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಹಿರಿಯ ಶಿಕ್ಷಕ ಹುಸೇನಪ್ಪ ಸಕ್ರಿ ಮಾತನಾಡಿ, ಮಾನವನ ನಿರಂತರ ಚಟುವಟಿಕೆಗಳಿಂದ ಅರಣ್ಯ ನಾಶ, ಪರಿಸರ ಮಾಲಿನ್ಯ, ಮಳೆ ಅಭಾವ ಹಾಗೂ ಬರಗಾಲದಂತಹ ಸಮಸ್ಯೆಗಳು ಎದುರಾಗುತ್ತಿವೆ. "ಮನೆಗೊಂದು ಮರ - ಊರಿಗೊಂದು ವನ" ಎಂಬ ಧ್ಯೇಯದೊಂದಿಗೆ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಶಿಕ್ಷಕ ಬಸವರಾಜ ಸ್ವಾಗತಿಸಿದರು. ಟಿ. ರಾಮುಲು ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ಬಸವರಾಜ, ಶಿಕ್ಷಕರು, ಅಡುಗೆ ಸಿಬ್ಬಂದಿ, ಅರಣ್ಯ ಇಲಾಖೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದ ಬಳಿಕ ಶಾಲಾ ಆವರಣದಲ್ಲಿ 100ಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಳ್ಳಲಾಯಿತು.

## ಶಿಥಿಲ ಕಟ್ಟಡದಿಂದ ಪ್ರಾಥಮಿಕ ಶಾಲೆ ಸ್ಥಳಾಂತರ, ಪ್ರೌಢಶಾಲೆಯ ಕೊಠಡಿಗಳಲ್ಲೇ 2ರಿಂದ 7ನೇ ತರಗತಿ ಪಾಠ : ಬಿಸಿಯೂಟಕ್ಕೂ ಅಲೆದಾಟ

• ಮಲ್ಲಮ್ಮ ನುಡಿ ವಾರ್ತೆಮುದಗಲ್





: ಸಮೀಪದ ಕಾಚಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಥಿಲಾವಸ್ಥೆ ತಲುಪಿರುವ ಹಿನ್ನೆಲೆಯಲ್ಲಿ ಒಂದರಿಂದ ಏಳನೇ ತರಗತಿವರೆಗಿನ ಶಾಲೆಯು ಈಗ ಸಂಕಷ್ಟದ ನಡುವೆ ಕಾರ್ಯನಿರ್ವಹಿಸುತ್ತಿದೆ. ಸುಮಾರು ಆರು ದಶಕಗಳ ಹಿಂದೆ ನಿರ್ಮಾಣಗೊಂಡಿರುವ ಶಾಲಾ ಕಟ್ಟಡ ಬೀಳುವ ಹಂತದಲ್ಲಿರುವುದರಿಂದ ಮಕ್ಕಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಎರಡರಿಂದ ಏಳನೇ ತರಗತಿಗಳನ್ನು ಶಿಕ್ಷಣ ಇಲಾಖೆಯ ಅನುಮತಿ ಪಡೆದು ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆರು ಕೊಠಡಿಗಳಲ್ಲಿ ನಡೆಸಲಾಗುತ್ತಿದೆ.

1964ರಲ್ಲಿ ಆರಂಭವಾದ ಈ ಶಾಲೆಗೆ ಸ್ವಂತ ಕಟ್ಟಡವಿದ್ದರೂ ಅದು ಈಗ ಸಂಪೂರ್ಣ ಶಿಥಿಲಗೊಂಡಿದೆ. ಹೊಸ ಕಟ್ಟಡ ನಿರ್ಮಾಣಕ್ಕೆ ಅಗತ್ಯವಾದ ಜಾಗದ ಸಮಸ್ಯೆ ಎದುರಾಗಿದ್ದು, ಭೂದಾನ ನೀಡಿರುವ ಜಮೀನಿನ ಮಾಲೀಕರ ಕುಟುಂಬದ ಆಸ್ತಿ ವಿವಾದ ನ್ಯಾಯಾಲಯದಲ್ಲಿ ಇರುವ ಕಾರಣ ಹೊಸ ಕಟ್ಟಡ ನಿರ್ಮಾಣ ಪ್ರಕ್ರಿಯೆ ಸ್ಥಗಿತಗೊಂಡಿದೆ. ಇದರಿಂದ ಹಲವು ವರ್ಷಗಳಿಂದ ಶಾಲೆಗೆ ಶಾಶ್ವತ ಪರಿಹಾರ ದೊರೆಯದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಪ್ರಸ್ತುತ ಒಂದನೇ ತರಗತಿಯನ್ನು ಮಾತ್ರ ಹಳೆಯ ಪ್ರಾಥಮಿಕ ಶಾಲೆಯಲ್ಲೇ ನಡೆಸಲಾಗುತ್ತಿದ್ದು, ಎರಡ ರಿಂದ ಏಳನೇ ತರಗತಿಗಳನ್ನು ಪ್ರೌಢಶಾಲೆಯ ಕಟ್ಟಡದಲ್ಲಿ ನಡೆಸಲಾಗುತ್ತಿದೆ. ಶಾಲೆಯಲ್ಲಿ ಸುಮಾರು 120ಕ್ಕೂ ಹೆಚ್ಚು ವಿದ್ಯಾರ್ಥಿಗಳು ದಾಖಲಾಗಿದ್ದು, ಪ್ರತಿದಿನ ಉತ್ತಮ ಹಾಜರಾತಿಯಿದೆ. ಆದರೆ ಎರಡು ಶಾಲೆಗಳ ನಡುವೆ ಓಡಾಟ ಮಾಡಬೇಕಾದ ಅನಿವಾರ್ಯತೆ ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಹೆಚ್ಚುವರಿ ತೊಂದರೆಯಾಗಿದೆ. ವಿಶೇಷವಾಗಿ ಮಧ್ಯಾಹ್ನದ ಬಿಸಿಯೂಟಕ್ಕಾಗಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಮತ್ತೆ ಪ್ರಾಥಮಿಕ ಶಾಲೆಗೆ ತೆರಳಿ ಊಟ ಮಾಡಿ ಬಳಿಕ ಹಿಂದಿರುಗಬೇಕಾಗಿದೆ. ಇದರಿಂದ ಸಮಯ ವ್ಯರ್ಥವಾಗುವುದರ ಜೊತೆಗೆ ಮಕ್ಕಳ ಸುರಕ್ಷತೆ ಮತ್ತು ಶೈಕ್ಷಣಿಕ ಚಟುವಟಿಕೆಗಳ ಮೇಲೂ ಪರಿಣಾಮ ಬೀರುತ್ತಿದೆ. ಶಾಲೆಯಲ್ಲಿ ಎಸ್‌ಡಿಎಂಸಿ (ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ) ರಚನೆಯಾಗಿಲ್ಲ. ಸಮಿತಿ ಇಲ್ಲದ ಕಾರಣ ಶಾಲೆಯ ಅಭಿವೃದ್ಧಿಗೆ ಅಗತ್ಯವಾದ ಅನುದಾನ ಮತ್ತು ವಿವಿಧ ಸೌಲಭ್ಯಗಳನ್ನು ಪಡೆಯಲು ತೊಂದರೆ ಉಂಟಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಶಾಲೆಯ ಮುಖ್ಯ ಶಿಕ್ಷಕಿ ಲಲೀತಾ ಮತ್ತು ಸಹ ಶಿಕ್ಷಕ ಗೋವಿಂದರಡ್ಡಿ ಮಾತನಾಡಿ, "ಶಾಲೆಯ ಹಳೆಯ ಕಟ್ಟಡ ಶಿಥಿಲಗೊಂಡಿರುವ ಕಾರಣ ಮಕ್ಕಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಶಿಕ್ಷಣ ಇಲಾಖೆಯ ಅನುಮತಿ ಪಡೆದು ಎರಡರಿಂದ ಏಳನೇ ತರಗತಿಗಳನ್ನು ಪ್ರೌಢಶಾಲೆಯ ಕಟ್ಟಡದಲ್ಲಿ ನಡೆಸುತ್ತಿದ್ದೇವೆ. ಹೊಸ ಕಟ್ಟಡ ನಿರ್ಮಾಣಕ್ಕೆ ಜಾಗದ ಸಮಸ್ಯೆ ಬಗೆಹರಿದರೆ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸಲು ಸಾಧ್ಯವಾಗುತ್ತದೆ. ಎಸ್‌ಡಿಎಂಸಿ ರಚನೆಯಾದರೆ ಶಾಲೆಯ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಹೇಳಿದರು.

ಗ್ರಾಮಸ್ಥರ ಒತ್ತಾಯ

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜಾಗದ ವಿವಾದವನ್ನು ಶೀಘ್ರ ಬಗೆಹರಿಸಿ ಹೊಸ ಶಾಲಾ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಬೇಕು. ಜೊತೆಗೆ ಎಸ್‌ಡಿಎಂಸಿ ರಚಿಸಿ ಶಾಲೆಗೆ ಅಗತ್ಯ ಅನುದಾನ ಮತ್ತು ಮೂಲಸೌಕರ್ಯ ಒದಗಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಗ್ರಾಮದ ಸಾರ್ವಜನಿಕರು, ಮುಖಂಡರು, ಚುನಾಯಿತ ಪ್ರತಿನಿಧಿಗಳು ಸಹಕಾರ ನೀಡಬೇಕು ಇತಿಹಾಸ ವಿರುವ ಶಾಲೆಗೆ ಈಗ ಸಮಸ್ಯೆವುಂಟಾಗಿದೆ.

## ಯಲಬುರ್ಗಾ ವಿಧಾನಸಭಾ ಕ್ಷೇತ್ರ ಕುಂಠಿತ ನಾಪತ್ತೆಯಾದ ಶಾಸಕ

• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ




ಯಲಬುರ್ಗಾ ವಿಧಾನಸಭಾ ಕ್ಷೇತ್ರ ಕುಂಠಿತವಾಗಿ, ಶಾಸಕ ಬಸವರಸಜ ರಾಯರಡ್ಡಿ ಅವರು ನಾಪತ್ತೆಯಾಗಿದ್ದಾರೆ, ಇದರಿಂದ ಯಲಬುರ್ಗಾ ವಿಧಾನಸಭಾ ಕ್ಷೇತ್ರ ಪೋಲೀಸ ಕ್ಷೇತ್ರ ಆಗಿದೆ ಕ್ಷೇತ್ರದಲ್ಲಿ ಆಡಳಿತ ಮಾಡುತ್ತಿರುವರು ಪೊಲೀಸರು ಹಾಗೂ ಶಾಸಕರ ಕೈ ಕೆಳಗೆ ಇರುವ ಚೇಲಾಗಳು, ಕ್ಷೇತ್ರದಲ್ಲಿ ಆಡಳಿತ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಹಾಲಪ್ಪ ಆಚಾರ ಅವರು ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಜೂ.25 ರಂದು ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಳಿಕ, ಯಲಬುರ್ಗಾ ಕ್ಷೇತ್ರದ ಶಾಸಕರು ಕಳೆದ ಎರಡು ಮೂರು ತಿಂಗಳಿಂದ ಅಡ್ರೆಸ್ ಇಲ್ಲದೆ ಕಾಣೆಯಾಗಿದ್ದಾರೆ ಅವರನ್ನು ಹುಡುಕುವದು ಕಷ್ಟವಾಗಿದೆ ಎಂದರು. ರಾಜ್ಯದ ಕಾಂಗ್ರೆಸ ಸರ್ಕಾರ ಜನರ ಅಭಿವೃದ್ಧಿ ಮಾಡುವ ಉದ್ದೇಶಕ್ಕೆ ಅಧಿಕಾರಿಕ್ಕೆ ಬಂದಿಲ್ಲ ,ಅಧಿಕಾರಕ್ಕಾಗಿ ಬಂದಿದ್ದಾರೆ ಇವರಿಗೆ ಕ್ಷೇತ್ರದ ಆಡಳಿತ ಬಗ್ಗೆ ಕಾಳಜಿ ಇಲ್ಲ ಅಧಿಕಾರಕ್ಕಾಗಿ ತಿಂಗಳಿಂದ ದೆಹಲಿಯಲ್ಲಿ ಹೋಗಿ ಕುಳಿತಿದ್ದಾರೆ ,ರಾಜ್ಯದಲ್ಲಿ ಸಂಪೂರ್ಣ ಬರಗಾಲ ಇದ್ದು ಜನರ ಕಷ್ಟ ಆಲಿಸಲು ಆಗುತ್ತಿಲ್ಲ ಮುಖ್ಯಮಂತ್ರಿಯಾಗಿ ತಿಂಗಳು ಕಳೆದರು ಪೂರ್ಣ ಪ್ರಮಾಣದ ಮಂತ್ರಿ ಮಂಡಲ ರಚನೆ ಮಾಡುವುದಕ್ಕೆ ಆಗುತ್ತಿಲ್ಲ ಕ್ಷೇತ್ರದಲ್ಲಿ ಮಳೆ ಬಾರದೆ ರೈತರು ಕಂಗಲಾಗಿದ್ದಾರೆ,ಗೋಶಾಲೆ ಇಲ್ಲದೆ ರೈತರು ತೊಂದರೆಯಲ್ಲಿದ್ದಾರೆ ಎಂದರು .ಈ ವೇಳೆ ಮುಖಂಡರಾದ ಬಸವಲಿಂಗಪ್ಪ ಭೂತೆ, ಶರಣಪ್ಪ ಈಳಗೇರ, ವೀರಣ್ಣ ಹುಬ್ಬಳ್ಳಿ, ಸಂತೋಷಿಮಾ ಜ್ಯೋಶಿ , ವಿಶ್ವನಾಥ ಮರಿಬಸಪ್ಪನವರ, ಅಶೋಕ ಅರಕೇರಿ,ಅಯ್ಯನಗೌಡ ಕೆಂಚಮ್ಮನವರ, ವಸಂತಕುಮಾರ ಭಾವಿಮನಿ ಸೇರಿದಂತೆ ಇತರರು ಇದ್ದರು.

# ಮಳೆ ಬಿಸಿಲಿನಾಟ : ನಾಟಿ ಕಾರ್ಯಕ್ಕೆ ಭತ್ತದ ಮಡಿಗಳ ಕೊರತೆಯಿಂದ ರೈತರ ಬೇಸರ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಮಳೆ ಕೊರತೆ ಹಾಗೂ ನಿರಂತರ ಸುರಿದ ಮಳೆಯಿಂದಾಗಿ ಕೃಷಿಕರು ತಾವು ಅಂದುಕೊಂಡಂತೆ ಸಕಾಲವಾಗಿ ನಾಟಿ ಕಾರ್ಯ ಮಾಡಲಾಗದೇ ಪರಿತಪಿಸುತ್ತಿದ್ದಾರೆ. ಕೆಲವರು ಉಳುಮೆ ಮಾಡಿ ನೇರವಾಗಿ ಭತ್ತವನ್ನು ಬಿತ್ತನೆ ಮಾಡಿದರೆ ಇನ್ನು ಕೆಲವರು ಶಶಿಮಡಿ ಮಾಡಿ ನಂತರ ಅದನ್ನು ಕಿತ್ತು ನಾಟಿ ಮಾಡಲಾಗುತ್ತಿತ್ತು. ಆದರೆ ಕೆಲವು ಪ್ರದೇಶಗಳಲ್ಲಿ ಮಡಿ ಮಾಡಿದ ಭತ್ತದ ಸಸಿಯ ಕೊರತೆಯು ರೈತರಿಗೆ ಎದುರಾಗಿದೆ.

ಗೋಕರ್ಣ ವ್ಯಾಪ್ತಿಯಲ್ಲಿ ಬಹುತೇಕವಾಗಿ ಹಾಲಕ್ಕಿ ಒಕ್ಕಲಿಗರು ಭತ್ತದ ಕೃಷಿಯನ್ನು ಮಾಡುತ್ತಾರೆ. ಅವರ ಜತೆಗೆ ಕೆಲವೊಂದಿಷ್ಟು ಸಮುದಾಯದವರು ಕೂಡ ಕೃಷಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಆದರೆ ಹಾಲಕ್ಕಿ ಒಕ್ಕಲಿಗರು ಮಾತ್ರ ಅಪ್ಪಟ ಕೃಷಿಕರಾಗಿ ಇವತ್ತಿಗೂ ಕೂಡ ಭೂಮಿತಾಯಿಯನ್ನೇ ನಂಬಿಕೊಂಡಿದ್ದಾರೆ. ಹೀಗಾಗಿ ಲಾಭ ನಷ್ಟದ ಬಗ್ಗೆ ವಿಚಾರ ಮಾಡದೇ ಅವರು ಭತ್ತದ ಕೃಷಿಯನ್ನು ಮಾಡುತ್ತಾರೆ.

ಆರಂಭದಲ್ಲಿ ಮಳೆಯಾಗಿ ನಂತರ ಮಳೆ ಸಂಪೂರ್ಣ ಕೈಕೊಟ್ಟ ಹಿನ್ನೆಲೆಯಲ್ಲಿ ರೈತರು ತಲೆಯ ಮೇಲೆ ಕೈ ಹೊತ್ತುಕೊಳ್ಳುವಂತಾಯಿತು. ನಂತರ ಸುರಿದ ತೀವ್ರ ಮಳೆಯಿಂದಾಗಿ ಅಲ್ಲಲ್ಲಿ ಅವಾಂತರಗಳು ಸೃಷ್ಟಿಯಾದವು. ಆದರೆ ಈಗ ಮಳೆ ಬಿಸಿಲಿನಾಟವಾಗಿದ್ದು, ನಾಟಿಕಾರ್ಯಕ್ಕೆ ಸೂಕ್ತ ಸಮಯ ಎನ್ನುವಂತಾಗಿದೆ. ಆದರೆ ಒಮ್ಮೆಲೆ ವಿಪರಿತ ಬಿದ್ದ ಮಳೆಯಿಂದಾಗಿ ಹಾಗೇ ಮಳೆ ಕೈಕೊಟ್ಟಿದ್ದರಿಂದಾಗಿ ಭತ್ತದ ಮಡಿಗಳಿಗೆ ಹಾನಿ ಉಂಟಾಯಿತು. ಹೀಗಾಗಿ ನಾಟಿ ಮಾಡಲು ಜಾಗವಿದ್ದರೂ ಕೂಡ ಭತ್ತದ ಸಸಿ ಕೊರತೆಯಿಂದಾಗಿ ರೈತರು ಪರಿತಪಿಸುತ್ತಿದ್ದಾರೆ.

# ರಸ್ತೆ-ಚರಂಡಿ ನಿರ್ಮಾಣಕ್ಕೆ ಆಗ್ರಹಿಸಿ ಗ್ರಾ ಪಂಗೆ ಮುತ್ತಿಗೆ; ಮಹಿಳೆಯರಿಂದ ತೀವ್ರ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಇಂಡಿ



ಇಂಡಿ ತಾಲ್ಲೂಕಿನ ಇಂಗಳಗಿ ಗ್ರಾಮದ ವಾರ್ಡ್ ನಂ.1ರಲ್ಲಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಮಾಡದಿರುವುದನ್ನು ಖಂಡಿಸಿ ಸ್ಥಳೀಯ ಮಹಿಳೆಯರು ಸೇರಿದಂತೆ ನಿವಾಸಿಗಳು ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ ತೀವ್ರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ವೇಳೆ ಮಹಿಳೆಯರು ಹಾಗೂ ನಿವಾಸಿಗಳು ತಮ್ಮ ಸಮಸ್ಯೆಗಳನ್ನು ವಿವರಿಸಿ ಆಕ್ರೋಶ ವ್ಯಕ್ತಪಡಿಸಿದರು. ಹಲವು ವರ್ಷಗಳು ಕಳೆದರೂ ವಾರ್ಡ್‌ನಲ್ಲಿ ಸಮರ್ಪಕ ರಸ್ತೆ ನಿರ್ಮಾಣವಾಗಿಲ್ಲ. ಅಲ್ಲದೆ, ಮನೆಗಳ ಬಳಕೆಯ ಕೊಳಚೆ ನೀರು ಹರಿದು ಹೋಗಲು ಅಗತ್ಯವಾದ ಚರಂಡಿ ವ್ಯವಸ್ಥೆಯೂ ಇಲ್ಲ. ಇದರಿಂದಾಗಿ ಮನೆಗಳ ಬಚ್ಚಲು ನೀರು ಹಾಗೂ ಇತರ ಕೊಳಚೆ ನೀರು ನೇರವಾಗಿ ರಸ್ತೆಯ ಮೇಲೆಯೇ ಹರಿಯುತ್ತಿದ್ದು, ನಿವಾಸಿಗಳು ಪ್ರತಿದಿನವೂ ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ದೂರಿದರು.

ವಿಶೇಷವಾಗಿ ಮಳೆಗಾಲದಲ್ಲಿ ರಸ್ತೆಯ ಮೇಲೆ ಕೊಳಚೆ ನೀರು ಹಾಗೂ ಮಳೆ ನೀರು ನಿಂತು ಕೆಸರುಮಯವಾಗುತ್ತದೆ. ಇದರಿಂದ ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಸಂಚರಿಸಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೊಳಚೆ ನೀರು ರಸ್ತೆಯ ಮೇಲೆ ಹರಿಯುವುದರಿಂದ ದುರ್ವಾಸನೆ ಹಾಗೂ ಅಶುಚಿತ್ವ ಹೆಚ್ಚಾಗಿದ್ದು, ಸಾಂಕ್ರಾಮಿಕ ರೋಗಗಳ ಭೀತಿಯೂ ಎದುರಾಗಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದರು.ರಸ್ತೆಯ ದುಸ್ಥಿತಿಯಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೂ ತೀವ್ರ ತೊಂದರೆಯಾಗುತ್ತಿದೆ. ಪ್ರತಿದಿನ ವಿದ್ಯಾರ್ಥಿಗಳು ಇದೇ ರಸ್ತೆಯ ಮೂಲಕ ಶಾಲೆಗೆ ತೆರಳಬೇಕಾಗಿದ್ದು, ಕೆಸರು ಮತ್ತು ಕೊಳಚೆ ನೀರಿನಿಂದಾಗಿ ಬಟ್ಟೆ ಹಾಗೂ ಪುಸ್ತಕಗಳನ್ನು ಕಾಪಾಡಿಕೊಂಡು ಸಂಚರಿಸುವುದು ಕಷ್ಟಕರವಾಗಿದೆ. ಮಳೆ ಬಂದ ಸಂದರ್ಭದಲ್ಲಿ ರಸ್ತೆಯಲ್ಲಿ ನೀರು ನಿಂತು ವಿದ್ಯಾರ್ಥಿಗಳು ಶಾಲೆಗೆ ತೆರಳಲು ಪರದಾಡುವಂತಾಗಿದೆ. ಕೆಲವೊಮ್ಮೆ ಜಾರಿ ಬೀಳುವ ಅಪಾಯವೂ ಎದುರಾಗುತ್ತಿದೆ ಎಂದು ಪೋಷಕರು ಆತಂಕ ವ್ಯಕ್ತಪಡಿಸಿದರು.

ಅದೇ ರೀತಿ, ವಾರ್ಡ್‌ನ ಚಿಕ್ಕ ಮಕ್ಕಳು ಆಟವಾಡಲು ಸೂಕ್ತ ಸ್ಥಳವಿಲ್ಲದೆ ಪರದಾಡುವಂತಾಗಿದೆ. ಮನೆಗಳ ಮುಂಭಾಗ ಹಾಗೂ ರಸ್ತೆಯಲ್ಲೇ ಕೊಳಚೆ ನೀರು ನಿಂತಿರುವುದರಿಂದ ಮಕ್ಕಳು ಹೊರಗೆ ಬಂದು ಆಟವಾಡಲು ಸಾಧ್ಯವಾಗುತ್ತಿಲ್ಲ. ಇದರಿಂದ ಮಕ್ಕಳ ಆರೋಗ್ಯ ಹಾಗೂ ಸುರಕ್ಷತೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ನಿವಾಸಿಗಳು ಹೇಳಿದರು. ಮಕ್ಕಳಿಗೆ ಸ್ವಚ್ಛ ಹಾಗೂ ಸುರಕ್ಷಿತ ವಾತಾವರಣ ಕಲ್ಪಿಸುವುದು ಆಡಳಿತದ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಅಧಿಕಾರಿಗಳು ಕೂಡಲೇ ಗಮನ ಹರಿಸಬೇಕು ಎಂದು ಆಗ್ರಹಿಸಿದರು.

"ಜನರು ತೆರಿಗೆ ಪಾವತಿಸಿ, ಮೂಲಭೂತ ಸೌಲಭ್ಯಗಳಿಗಾಗಿ ವರ್ಷಗಟ್ಟಲೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ದುರದೃಷ್ಟಕರ. ಒಂದು ರಸ್ತೆ ಮತ್ತು ಚರಂಡಿ ನಿರ್ಮಾಣದಂತಹ ಮೂಲಭೂತ ಸೌಲಭ್ಯವನ್ನು ಒದಗಿಸಲು ಸಾಧ್ಯವಾಗದಿದ್ದರೆ ಗ್ರಾಮೀಣ ಜನರ ಸಮಸ್ಯೆಗಳಿಗೆ ಆಡಳಿತ ಯಾವಾಗ ಸ್ಪಂದಿಸುತ್ತದೆ?" ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರು.

ಗ್ರಾಮ ಪಂಚಾಯಿತಿ ಅಧಿಕಾರಿಗಳು ನಿವಾಸಿಗಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಸ್ಥಳ ಪರಿಶೀಲನೆ ನಡೆಸಿ ಶೀಘ್ರದಲ್ಲೇ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಸಮಸ್ಯೆ ಬಗೆಹರಿಯದಿದ್ದಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ತೀವ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

> ❝ ರಸ್ತೆಯ ಮೇಲೆ ಕೊಳಚೆ ನೀರು ಹರಿಯುತ್ತಿರುವುದರಿಂದ ಸಣ್ಣಪುಟ್ಟ ವಿಚಾರಗಳಿಗೂ ನೆರೆಹೊರೆಯವರ ನಡುವೆ ಆಗಾಗ್ಗೆ ಜಗಳಗಳು ನಡೆಯುತ್ತಿವೆ. ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ಸಮಸ್ಯೆ ತಂದಿದ್ದರೂ ಇದುವರೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದರು.

ಇಂಗಳಗಿ ಗ್ರಾಮದ ವಾರ್ಡ್ ನಂ.1ರ ಜನರ ಬಹುಕಾಲದ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಅಗತ್ಯ ಅನುದಾನ ಒದಗಿಸಿ, ಕಾಮಗಾರಿಯನ್ನು ಶೀಘ್ರ ಆರಂಭಿಸಬೇಕು. ಅಲ್ಲದೆ, ವಿದ್ಯಾರ್ಥಿಗಳು, ಚಿಕ್ಕ ಮಕ್ಕಳು ಹಾಗೂ ಸಾರ್ವಜನಿಕರು ಸುರಕ್ಷಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಸ್ಥಳೀಯ ನಿವಾಸಿಗಳು ಆಗ್ರಹಿಸಿದರು.

# ನೆಲೋಗಿಪುರ (ಭೈರಾಪುರ) ಗ್ರಾಮದಲ್ಲಿ 27.46 ಕೋಟಿ ವೆಚ್ಚದ 110 / 11 ಕೆವಿ ವಿದ್ಯುತ್ ಉಪಕೇಂದ್ರಕ್ಕೆ ಭೂಮಿಪೂಜೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ತಾಲೂಕಿನ ನೆಲೋಗಿಪುರ (ಭೈರಾಪುರ) ಗ್ರಾಮದಲ್ಲಿ ?27.46 ಕೋಟಿ ಅಂದಾಜು ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ 2̥20 ಎಂವಿಎ, 110/11 ಕೆವಿ ವಿದ್ಯುತ್ ಉಪಕೇಂದ್ರ ಹಾಗೂ ಮುಂಡರಗಿ-ಬೆಟಗೇರಿ ಎಸ್‌ಸಿ ಲೈನ್‌ನಿಂದ ನೆಲೋಗಿಪುರ ಉಪಕೇಂದ್ರದವರೆಗೆ 6 ಕಿಲೋಮೀಟರ್ ವಿದ್ಯುತ್ ಮಾರ್ಗ ನಿರ್ಮಾಣ ಕಾಮಗಾರಿಗೆ ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಅವರು ಇಂದು ಭೂಮಿಪೂಜೆ ನೆರವೇರಿಸಿದರು.

ಈ ಯೋಜನೆ ಪೂರ್ಣಗೊಂಡ ಬಳಿಕ ನೆಲೋಗಿಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಗುಣಮಟ್ಟದ ಮತ್ತು ನಿರಂತರ ವಿದ್ಯುತ್ ಪೂರೈಕೆ ದೊರೆಯಲಿದ್ದು, ರೈತರು, ಕೃಷಿ ಪಂಪ್‌ಸೆಟ್ ಬಳಕೆದಾರರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸದ ಕೆ. ರಾಜಶೇಖರ ಹಿಟ್ನಾಳ, ಮಾಜಿ ಸಂಸದ ಕರಡಿ ಸಂಗಣ್ಣ, ಸ್ಥಳೀಯ ಜನಪ್ರತಿನಿಧಿಗಳು, ವಿವಿಧ ಮುಖಂಡರು, ಜೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳು ಮತ್ತು ಸಿಬ್ಬಂದಿ, ರೈತರು, ನೆಲೋಗಿಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗ್ರಾಮಸ್ಥರು ಉಪಸ್ಥಿತರಿದ್ದರು.

ಈ ಮಹತ್ವದ ವಿದ್ಯುತ್ ಮೂಲಸೌಕರ್ಯ ಯೋಜನೆಯಿಂದ ಪ್ರದೇಶದ ವಿದ್ಯುತ್ ವಿತರಣಾ ವ್ಯವಸ್ಥೆ ಮತ್ತಷ್ಟು ಬಲಗೊಂಡು ಗ್ರಾಮೀಣ ಅಭಿವೃದ್ಧಿಗೆ ಉತ್ತೇಜನ ದೊರೆಯುವ ನಿರೀಕ್ಷೆ ವ್ಯಕ್ತವಾಗಿದೆ.

# ಮಹಿಳೆಯರು ಕೆಲಸದ ಜೊತೆಗೆ ಆರೋಗ್ಯದ ಬಗ್ಗೆ ಕಾಳಜಿ ವಹಿಸಿರಿ: ತಾ.ಪಂ ಸಹಾಯಕ ನಿರ್ದೇಶಕ ಮಹೇಶ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಆಧುನಿಕ ಬದುಕಿನ ಒತ್ತಡದಲ್ಲಿರುವ ಪ್ರತಿಯೊಬ್ಬ ಮಹಿಳೆ ಕೆಲಸದ ಜೊತೆಗೆ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕೆಂದು ಕೊಪ್ಪಳ ತಾಲೂಕ ಪಂಚಾಯತಿಯ ಸಹಾಯಕ ನಿರ್ದೇಶಕ ಮಹೇಶ್ ಕರೆ ನೀಡಿದರು.ಶುಕ್ರವಾರದಂದು ಜಿಲ್ಲಾ ಪಂಚಾಯತ ಕೊಪ್ಪಳ ಹಾಗೂ ಕೊಪ್ಪಳ ತಾಲೂಕ ಪಂಚಾಯತಿ ವತಿಯಿಂದ ಕೊಪ್ಪಳ ತಾಲೂಕ ಪಂಚಾಯತಿ ಸಭಾಂಗಣದಲ್ಲಿ ಜರುಗಿದ ಮಹಿಳಾ ನೌಕರರು ಮತ್ತು ಸಿಬ್ಬಂದಿಗಳಿಗೆ ಮುಟ್ಟಿನ ಕಪ್ ವಿತರಣೆ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕೆಲಸದ ಒತ್ತಡದಲ್ಲಿರುವ ನಾವುಗಳು ಆರೋಗ್ಯದ ಬಗ್ಗೆ ಗಮನಹರಿಸದಿರುವದರಿಂದ ದೇಹದ ಆರೋಗ್ಯದಲ್ಲಿ ಏರುಪೇರುಗಳು ಆಗುತ್ತಿವೆ. ಮಾಸಿಕ ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಲು ಜಿಲ್ಲಾ ಪಂಚಾಯತಿಯಿಂದ ವಿತರಿಸಲಾದ ಮುಟ್ಟಿನ ಕಪ್ ಸಹಕಾರಿಯಾಗಲಿವೆ ಎಂದರು. ಪಂಚಾಯತ್ ರಾಜ್ ಆಯುಕ್ತಾಲಯದಿಂದ ಇಂತಹ ನಿರ್ಣಯ ಕೈಗೊಂಡು ಮಹಿಳೆಯರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿರುವದು ನಿಜಕ್ಕೂ ಶ್ಲಾಘನೀಯವಾಗಿದೆ ಎಂದರು.ಜಿಲ್ಲಾ ಪಂಚಾಯತಿಯ ಸ್ಯಾನಿಟೇಶನ್ ಮತ್ತು ಹೈಜಿನ್ ಸಮಾಲೋಚಕಿ ಬಸಮ್ಮ ಹುಡೇದ ಮಾತನಾಡಿ, ಮುಟ್ಟಿನ ಸಮಯದಲ್ಲಿ ಮಾಸಿಕ ಋತುಚಕ್ರ ನಿರ್ವಹಣೆ, ಶುಚಿಯಾದ ಬಟ್ಟೆ ಬಳಕೆ ಹಾಗು ಸ್ಯಾನಿಟರಿ ಪ್ಯಾಡ್ ಬಳಕೆಯಿಂದ ಆಗುವ ಅನುಕೂಲಗಳು, ವೈಯಕ್ತಿಕ ಶುಚಿತ್ವ ಕುರಿತು ಮಹತ್ವದ ಮಾಹಿತಿ ನೀಡಿದರು. ಮಹಿಳೆಯರ ವೈಯಕ್ತಿಕ ಶುಚಿತ್ವ ಹಾಗೂ ಸ್ಯಾನಿಟರಿ ಪ್ಯಾಡ್‌ಗಳ ಬಳಕೆ ಹಾಗೂ ಬಳಸಿದ ಪ್ಯಾಡ್‌ಗಳನ್ನು ಇನ್ಸಿನರೇಟರ್ ಮೂಲಕ ವೈಜ್ಞಾನಿಕ ನಿರ್ವಹಣೆ ಕುರಿತು ಮಾಹಿತಿ ನೀಡಿದರು. ಇತ್ತೀಚಿನ ದಿನಗಳಲ್ಲಿ ನಾವು ಆರೋಗ್ಯದ ಬಗ್ಗೆ ಕಾಳಜಿ ವಹಿಸದೇ ಇರುವುದರಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದೇವೆ. ಮುಟ್ಟನ್ನು ಗುಟ್ಟನ್ನಾಗಿಸದೇ ಮುಟ್ಟನ್ನು ಒಗ್ಗೂಡಿಕೊಂಡು ಆರೋಗ್ಯದ ಬದಲಾವಣೆಗೆ ಮುನ್ನುಡಿ ಬರೆಯೋಣ ಎಂದು ಕರೆ ನೀಡಿದರು. ಮಹಿಳೆಯರು ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಲು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬಳಕೆಯಾದ ಪ್ಯಾಡ್‌ಗಳನ್ನು ಸಂಗ್ರಹಿಸಿ ವೈಜ್ಞಾನಿಕ ನಿರ್ವಹಣೆ ಮಾಡಲು ಇನ್ಸಿನರೇಟರ್ ಅಳವಡಿಸಲಾಗುತ್ತಿದ್ದು, ಎಲ್ಲಾ ಮಹಿಳೆಯರು ಅವುಗಳಿಗೆ ನೀಡಬೇಕು. ಎಲ್ಲಿ ಬೇಕಾದಲ್ಲಿ ಬಿಸಾಡದೇ ಗ್ರಾಮ ಪಂಚಾಯತಿ ವಾಹನಕ್ಕೆ ನೀಡಬೇಕು ಅಥವಾ ನಿಗದಿಪಡಿಸಿದ ಸ್ಥಳದಲ್ಲಿ ಅವುಗಳನ್ನು ವಿಲೇವಾರಿ ಮಾಡತಕ್ಕದ್ದು. ಬಯಲು ಶೌಚಕ್ಕೆ ಹೋಗುವುದರಿಂದ ಅನೇಕ ರೋಗಗಳು ಹರಡುವ ಸಾಧ್ಯತೆ ಶೇ.80 ರಷ್ಟು ಇರುವುದರಿಂದ ನಿಮ್ಮ ಸುತ್ತ-ಮುತ್ತಲಿನ ಜನರಿಗೆ ಅರಿವು ಮೂಡಿಸಬೇಕೆಂದರು. ಹಸಿ ಕಸ ಮತ್ತು ಒಣ ಕಸ ಪ್ರತ್ಯೇಕಿಸಿ ವಾಹನಕ್ಕೆ ನೀಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕ ಪಂಚಾಯತಿಯ ವಿ ಬಿ ಜಿ ರಾಮ್ ಜೀ ಯೋಜನೆಯ ಸಹಾಯಕ ನಿರ್ದೇಶಕಿ ಸೌಮ್ಯ ಕೆ, ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ, ಸಂಜೀವಿನಿ ಯೋಜನೆಯ ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಸುನೀಲ್, ಮಹಿಳಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ತಾಲೂಕ ಪಂಚಾಯತಿಯ ಮಹಿಳಾ ನೌಕರರು, ಸಂಜೀವಿನಿ ಯೋಜನೆಯ ಮಹಿಳಾ ಸದಸ್ಯರು, ಗ್ರಾಮ ಕಾಯಕ ಮಿತ್ರರು, ಅಂಗವಿಕಲ ಪುನರ್ವಸತಿ ಮಹಿಳಾ ಕಾರ್ಯಕರ್ತರು, ವಿವಿಧ ಇಲಾಖೆಗಳ ಮಹಿಳಾ ನೌಕರರು ಹಾಜರಿದ್ದರು.

# ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಮೆದುಳು ದಿನಾಚರಣೆ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಜಿಲ್ಲಾ ಆಸ್ಪತ್ರೆ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜ್, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರದಂದು ಕಾಲೇಜಿನ ಸಭಾಭವನದಲ್ಲಿ "ವಿಶ್ವ ಮೆದುಳು ದಿನಾಚರಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಭೀ ಕಾರ್ಯಕ್ರಮದ ಫಿಸಿಯೋಥೆರಪಿಸ್ಟ್ ಡಾ. ಚೈತ್ರಾ ಸರೋದೆ ಮಾತನಾಡಿ, "ಎಲ್ಲಾ ವಯಸ್ಸಿನವರಿಗೂ ಮೆದುಳು ಆರೋಗ್ಯ" ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಇದರ ಉದ್ದೇಶ ಮೆದುಳಿನ ಆರೋಗ್ಯವು ದಿನನಿತ್ಯದ ಜೀವನಕ್ಕೆ ಸಮಸ್ಯೆ ಪರಿಹರಿಸುವ ಉತ್ಪಾದಕ ಮತ್ತು ಉಪಯುಕ್ತ ಜೀವನವನ್ನು ನಡೆಸಲು ನೆರವಾಗುತ್ತದೆ. ಮೆದುಳಿನ ಆರೋಗ್ಯ ಹಾಗೂ ನರವೈಜ್ಞಾನಿಕ ಸಮಸ್ಯೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಮತ್ತು ಸರಿಯಾದ ಆಹಾರ, ವ್ಯಾಯಾಮ ಮತ್ತು ಒತ್ತಡ ನಿರ್ವಹಣೆಯ ಮೂಲಕ ಮೆದುಳಿನ ಕಾಯಿಲೆಗಳನ್ನು ತಡೆಯುವುದಾಗಿದೆ. ಉತ್ತಮ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳುವ ಮಹತ್ವ, ನರವೈಜ್ಞಾನಿಕ ಕಾಯಿಲೆಗಳ ಆರಂಭಿಕ ಲಕ್ಷಣಗಳನ್ನು ಗುರುತಿಸುವುದು ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದರಿಂದ ಮೆದುಳಿಗೆ ಸಂಬಂಧಿಸಿದ ಕಾಯಿಲೆಗಳ ಅಪಾಯವನ್ನು ಹೇಗೆ ಕಡಿಮೆ ಮಾಡಬಹುದು ಎಂಬುದರ ಕುರಿತು ವಿವರವಾಗಿ ತಿಳಿಸಿದರು. ಹಾಗೂ ತಲೆನೋವು, ಅಪಸ್ಮಾರ, ಮರೆವಿನ ಕಾಯಿಲೆ ಹಾಗೂ ಪಾರ್ಶ್ವವಾಯು ಎಂಬ ನಾಲ್ಕು ಪ್ರಮುಖ ನರವೈಜ್ಞಾನಿಕ ಕಾಯಿಲೆಗಳ ಬಗ್ಗೆ ಮಾಹಿತಿ ನೀಡಿದರು. ನರರೋಗಗಳಿಗೆ ಸಂಬಂಧಿಸಿದ ಖಾಯಿಲೆಗಳಿಗೆ ಜಿಲ್ಲಾ ಆಸ್ಪತ್ರೆಯಿಂದ ಚಿಕಿತ್ಸೆ ಲಭ್ಯವಾಗುವ ವ್ಯವಸ್ಥೆಯನ್ನು ಕಭೀ ಕಾರ್ಯಕ್ರಮದ ಮೂಲಕ ಮಾಡಲಾಗುತ್ತಿದೆ ಎಂದು ತಿಳಿಸುತ್ತಾ ಮೆದುಳಿನ ಆರೋಗ್ಯ ಹಾಗೂ ನರವೈಜ್ಞಾನಿಕ ಕಾಯಿಲೆಗಳ ಕುರಿತು ಉಪಯುಕ್ತ ಮಾಹಿತಿಯನ್ನು ನೀಡಿದರು.

ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೇವಮ್ಮ ಅವರು ಈಡಿಸ್ ಈಜಿಪ್ಟ್ ಜಾತಿಯ ಸೊಳ್ಳೆಗಳಿಂದ ಹರಡುವ ಖಾಯಿಲೆಗಳ ಕುರಿತು ವಿವರವಾಗಿ ಮಾತನಾಡಿದರು. ನಂತರ ಕಾಲೇಜಿನ ಪ್ರಾಂಶುಪಾಲರಾದ ಗಣಪತಿ ಲಮಾಣಿ ಇವರು ತಮ್ಮ ಅಧ್ಯಕ್ಷರ ಭಾಷಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಹಮ್ಮಿಕೊಳ್ಳುವ ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಪತಂಜಲಿ ಯೋಗ ಸಮಿತಿಯ ಬಸವರಾಜ ಅಂಗಡಿ, ಯೋಗ ಶಿಕ್ಷಕರಾದ ಪ್ರಕಾಶ ಸಜ್ಜನ್, ಕಭೀ ಕಾರ್ಯಕ್ರಮದ ಸಲಹೆಗಾರರಾದ ತೇಜಸ್ವಿನಿ, ಸೇರಿದಂತೆ ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಮಲೇರಿಯಾ, ಡೆಂಗೆ ಮತ್ತು ಚಿಕೂನ್ ಗುನ್ಯ ಖಾಯಿಲೆ ತಡೆಗಟ್ಟಲು ಡಿಎಚ್ಒ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯಾದ್ಯಂತ ಪ್ರಸ್ತುತ ದಿನಗಳಲ್ಲಿ ಮಳೆಗಾಲ ಪ್ರಾರಂಭವಾದ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ಧರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಈಶ್ವರ ಎಸ್. ಸವಡಿ ಅವರು ಸಾರ್ವಜನಿಕರಿಗೆ ಆರೋಗ್ಯದ ಸಲಹೆ ನೀಡಿದ್ದಾರೆ.ಮಲೇರಿಯಾ, ಡೆಂಗ್ಯೂ ಮತ್ತು ಚಿಕೂನ್ ಗುನ್ಯ ಖಾಯಿಲೆಗಳನ್ನು ತಡೆಗಟ್ಟಲು ಸಾರ್ವಜನಿಕರು ಆರೋಗ್ಯವನ್ನು ಕಾಪಾಡಿಕೊಳ್ಳಲು ಈ ಕೆಳಗಿನ ಆರೋಗ್ಯ ಸಲಹೆಗಳನ್ನು ಪಾಲಿಸಬೇಕು.ನೀರಿನ ತೊಟ್ಟಿಗಳು, ಡ್ರಮ್, ಬ್ಯಾರಲ್ ಮತ್ತು ಟ್ಯಾಂಕ್‌ಗಳನ್ನು ಕನಿಷ್ಠ ವಾರಕ್ಕೆ ಒಂದು ಬಾರಿ ಸ್ವಚ್ಛಗೊಳಿಸಿ, ಭದ್ರವಾಗಿ ಮುಚ್ಚಿಡಬೇಕು. ಮಳೆ ನೀರು ಸಂಗ್ರಹವಾಗುವಂತಹ ಟೈರುಗಳು, ತೆಂಗಿನ ಚಿಪ್ಪುಗಳನ್ನು ವಿಲೇವಾರಿ ಮಾಡಬೇಕು. ಏರ್ ಕೂಲರ್, ಹೂವಿನಕುಂಡ, ಫೈರ್ ಬಕೆಟ್ ಇತ್ಯಾದಿಗಳ ನೀರನ್ನು ಪ್ರತಿವಾರ ಖಾಲಿ ಮಾಡಿ, ಒಣಗಿಸಿ ಭರ್ತಿ ಮಾಡಬೇಕು. ಹಗಲಿನಲ್ಲಿ ನಿದ್ದೆ ಮಾಡುವ/ವಿಶ್ರಾಂತಿ ಪಡೆಯುವವರು ಸೊಳ್ಳೆ ಪರದೆ ಹಾಗೂ ಸೊಳ್ಳೆ ನಿರೋಧಕ ತಪ್ಪದೇ ಬಳಸಬೇಕು.ಮನೆ, ಶಾಲಾ ಕಾಲೇಜು, ಕಚೇರಿ, ಅಂಗನವಾಡಿ, ಅಂಗಡಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಗಲು ಹೊತ್ತಿನಲ್ಲಿ ಈಡಿಸ್ ಈಜಿಪ್ಟ್ ಸೊಳ್ಳೆಗಳಿಂದ ರಕ್ಷಣೆ ಪಡೆಯಲು ಸ್ವಚ್ಛತೆಗೆ ಆದ್ಯತೆ ನೀಡಬೇಕು. ಆರೋಗ್ಯ ಇಲಾಖೆಯ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ, ಡೆಂಗಿ ಜ್ವರದಿಂದ ರಕ್ಷಿಸಿಕೊಳ್ಳಲು ನೀಡುವ ಸಲಹೆ-ಸೂಚನೆಗಳನ್ನು ತಪ್ಪದೇ ಪಾಲಿಸಿ ಹಾಗೂ ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸಬೇಕು. "ಪ್ರತಿ ಶುಕ್ರವಾರ ಡೆಂಗಿ ನಿಯಂತ್ರಣ ಅಭಿಯಾನ"ದ ಅಂಗವಾಗಿ ಒಣ ದಿನ ಆಚರಿಸಲಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ್ಯ ವಿವಾಹ, ಪೋಕ್ಸ್. ಸೈಬರ್ ಕ್ರೈಂ, ಮಾದಕ ದ್ರವ್ಯ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ಕುರಿತು ಜಿಲ್ಲಾ ಮಟ್ಟದ ಜಾಥಾ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರೀಡ್ಸ್ ಸಂಸ್ಥೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಕಾನೂನು ಸೇವಾಪ್ರಾಧಿಕಾರ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಇವರ ಸಂಯಕ್ತಾಶ್ರಯದಲ್ಲಿ ಬಾಲ್ಯ ವಿವಾಹ ನಿಷೇಧ, ಪೋಕ್ಸ್. ಸೈಬರ್ ಕ್ರೈಂ, ಮಾದಕ ದ್ರವ್ಯ ಮುಕ್ತ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಜಿಲ್ಲಾ ಮಟ್ಟದ ಜಾಥಾ ಹಾಗೂ ಹದಿ ಹರೆಯದ ಹೆಣ್ಣು ಮಕ್ಕಳ ಸಮಾವೇಶ-2026ವನ್ನು ಹಮ್ಮಿಕೊಳ್ಳಲಾಗಿತ್ತು. ಜಾಥಾವನ್ನು ಜಿಲ್ಲಾ ಪೊಲೀಸ್ ಕಛೇರಿಯಿಂದ ರಾಘವ ಕಲಾ ಮಂದಿರವರೆಗೆ ಹಮ್ಮಿಕೊಳ್ಳಲಾಗಿತ್ತು.ರಾಘವ ಕಲಾ ಮಂದಿರದಲ್ಲಿ ಹದಿ ಹರೆಯದ ಹೆಣ್ಣು ಮಕ್ಕಳ ಸಮಾವೇಶ-2026 ಹಮ್ಮಿಕೊಳ್ಳಲಾಗಿತ್ತು.ಸಮಾವೇಶದಲ್ಲಿ ಸಿದ್ದಲಿಂಗ ಪ್ರಭು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು. ಡಾ. ಸುಮನ್ ಡಿ.ಪೆನ್ನೇಕರ್. ಐ.ಪಿ.ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ರಾಜೇಶ್ ಎನ್.ಹೊಸಮನೆ ಹಿರಿಯ ಸಿವಿಲ್ ನ್ಯಾಯಾಧೀಶರು. ನವೀನ್ ಕುಮಾರ್,ಹೆಚ್ಚುವರಿ ಪೊಲೀಸ್‌ಅಧೀಕ್ಷರು. ವಿ.ಗೋವಿಂದರಾಜುಲು, ಡಿ.ಎಸ್.ವಿ. ಶ್ರೀಮತಿ ತ್ರಿವೇಣಿ ಪತ್ತಾರ್ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು, ತಿಪ್ಪೇಶಪ್ಪ ರೀಡ್ಸ್ ಸಂಸ್ಥೆಯ ನಿರ್ದೇಶಕರು. ಎಸ್. ಜೆ.ಪಿ.ಯು ಘಟಕದ ಸಿಬ್ಬಂದಿಯವರು, ಶಾಲಾ ಕಾಲೇಜಿನ ಮಕ್ಕಳು, ಯುವಕ-ಯುವತಿಯರು ಸ್ವ-ಸಹಾಯ ಸಂಘದ ಮಹಿಳೆಯರು ಭಾಗವಹಿಸಿದ್ದರು. ಸುಮಾರು 400 ಜನರು ಜಾಥ ಹಾಗೂ ಸಮಾವೇಶದಲ್ಲಿ ಪಾಲ್ಗೊಂಡಿದ್ದರು.




ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪೋಕ್ಸೋ ವಿಶೇಷ ನ್ಯಾಯಾಲಯ ವಿದ್ದರೂ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವ ಶಿಕ್ಷೆಯಾಗುವ ಪ್ರಮಾಣ ಹೆಚ್ಚಾಗ ಬೇಕಾಗಿದೆ. ಸಮಾಜ ಬಾಹಿರ ಚಟುವಟಿಗಳಲ್ಲಿ ತೊಡಗಿರುವವರಿಗೆ ಶಿಕ್ಷೆಯಾದಾಗ ಮಾತ್ರ ಇಡೀ ಸಮಾಜಕ್ಕೆ ಸರಿಯಾದ ಸಂದೇಶ ರವಾನೆಯಾಗುತ್ತದೆ. ಇತ್ತೀಚೆಗೆ ಹೆಚ್ಚುತ್ತಿರುವ ಬ್ಯಾಂಕಿಂಗ್ ವಂಚನೆಗಳು, ಉದ್ಯೋಗದ ವಂಚನೆ ಹಾಗೂ ಸಮಾಜಿಕ ಮಾಧ್ಯಮಗಳ ದುರ್ಬಳಕೆ ವಿದ್ಯಾರ್ಥಿಗಳು ಜಾಗೂರಕರಾಗಿರಬೇಕು. ಯುವತಿಯವರ ಫೋಟೋಗಳನ್ನು ದುರ್ಬಳಕೆ ಮಾಡಿಕೊಂಡು ಬೆದರಿಕೆ ಹಾಕುವ ಪ್ರಕರಣಗಳ ವಿರುದ್ಧ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕೆಂದು ಮಾತನಾಡಿದರು.

ಪೊಲೀಸ್ ಅಧೀಕ್ಷಕರು ಬಾಲ್ಯ ವಿವಾಹವು ಹೆಣ್ಣು ಮಕ್ಕಳ ಜೀವನ ಮತ್ತು ಭವಿಷ್ಯವನ್ನು ಅಂಧಕಾರಕ್ಕೆ ತಳ್ಳುತ್ತದೆ. ಇಡೀ ಜೀವವನವನ್ನು ಗಂಡ ಮಕ್ಕಳು ಸೇವೆಯಲ್ಲೇ ಕಳೆದು ಹೋಗುವಂತೆ ಮಾಡುವ ಈ ಪದ್ಧತಿಯನ್ನು ತಡೆಯಲೇಬೇಕಾಗಿದೆ. ಬಾಲ್ಯ ವಿವಾಹ ಕಾಯ್ದೆಯಡಿ ಹೆಣ್ಣು ಮಕ್ಕಳು ಅಪರಾದಿಯಾಗುವುದಿಲ್ಲ. ಬದಲಿಗೆ ಸಂತ್ರಸ್ಥರಾಗುತ್ತಾರೆ. ಮದುವೆ ಮಾಡಿಕೊಟ್ಟ ಪೋಷಕರು, ಗಂಡನ ಮನೆಯವರು, ಮದುವೆಗೆ ಸಹಕರಿಸಿದವರೇ ಕಾನೂನಿನ ಮುಂದೆ ಅಪರಾಧಿಗಳಾಗುತ್ತಾರೆ. ಮಕ್ಕಳಿಗೆ ಕನಸು ಕಾಣಲು, ಓದಲು ಮತ್ತು ಸಾಧನೆ ಮಾಡಲು ಅವಕಾಶ ನೀಡಿ. ಆಗ ಮಾತ್ರ ಪೋಷಕರ ಹೆಸರು ಎತ್ತರಕ್ಕೆ ಬೆಳೆಯುತ್ತದೆ. ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದರೆ ತಕ್ಷಣವೇ ಸಂಬಂಧಪಟ್ಟ ಇಲಾಖೆಗಳಿಗೆ ಅಥವಾ 1098 ಗೆ ಕರೆ ಮಾಡಬಹುದಾಗಿದೆ. ಕರೆ ಮಾಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು. ಸ್ವಸಹಾಯ ಸಂಘಗಳ ಮಹಿಳೆಯರು ಜಾಗೃತಿ ಕೈಗೊಳ್ಳುವ ಮೂಲಕ ಬಾಲ್ಯ ವಿವಾಹವನ್ನು ನಿರ್ಮೂಲನೆ ಮಾಡಲು ಪಣತೊಡಬೇಕು.

ಸಮಾವೇಶದಲ್ಲಿ ಹದಿಹರೆಯದ ಹೆಣ್ಣು ಮಕ್ಕಳು ಬಾಲ್ಯವಿವಾಹದ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

# 40 ಟಿಎಂಸಿ ನೀರು ತುಂಬಿದ ಕೂಡಲೇ ರೈತರಿಗೆ ನೀರು ಬಿಡಿ, ಇಲ್ಲದಿದ್ದರೆ ಉಗ್ರ ಹೋರಾಟ:ಕರಿಯಪ್ಪ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.25.ತಾಲ್ಲೂಕಿನ ರೈತರ ಹಿತಾಸಕ್ತಿಗಾಗಿ ಮಹಾ ವರುಣ ಯಾಗ ನೆರವೇರಿಸಿದ ಬಿಜೆಪಿ ಮುಖಂಡ ಕೆ. ಕರಿಯಪ್ಪ ಅವರನ್ನು ಅಭಿಮಾನಿಗಳು, ಕಾರ್ಯಕರ್ತರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪಗಡದಿನ್ನಿ ಕ್ಯಾಂಪ್‌ನಲ್ಲಿ ಬೃಹತ್ ರ್‍ಯಾಲಿ ಮತ್ತು ಅದ್ದೂರಿ ಸನ್ಮಾನ ಕಾರ್ಯಕ್ರಮದ ಮೂಲಕ ಸ್ವಾಗತಿಸಿ ಗೌರವಿಸಿದರು. ಈ ಕಾರ್ಯಕ್ರಮದಲ್ಲಿ ಸಾವಿರಾರು ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿಜೆಪಿ ಮುಖಂಡ ಕೆ.ಕರಿಯಪ್ಪ ಅವರು , ಅಧಿಕಾರವಿದ್ದಾಗ ಮಾತ್ರವಲ್ಲ ಅಧಿಕಾರವಿಲ್ಲದಿದ್ದರೂ ಜನರ ಮಧ್ಯೆ ಇರುವುದೇ ನನ್ನ ಬದುಕಿನ ಗುರಿ. ಸಾಮಾನ್ಯ ಕುಟುಂಬದಲ್ಲಿ ಬೆಳೆದಿರುವ ನನಗೆ ರೈತರು ಹಾಗೂ ಕಾರ್ಮಿಕರ ಕಷ್ಟಗಳು ಚೆನ್ನಾಗಿ ತಿಳಿದಿವೆ. ಅಧಿಕಾರ ಅಥವಾ ಹುದ್ದೆ ಎಂಬುದು ಕೇವಲ ಸೇವೆ ಮಾಡಲು ಸಿಗುವ ಒಂದು ಅವಕಾಶವಷ್ಟೇ, ಜನಸೇವೆಗೆ ಹುದ್ದೆಗಳೇ ಬೇಕೆಂದಿಲ್ಲ. ಜನರ ಪ್ರೀತಿ ಮತ್ತು ಆಶೀರ್ವಾದವೇ ನನ್ನ ನಿಜವಾದ ಶಕ್ತಿ.ಕಾಂಗ್ರೆಸ್ ಸರ್ಕಾರವು ಎರಡನೇ ಬೆಳೆಗೆ ನೀರು ನೀಡದೆ ರೈತರನ್ನು ಆರ್ಥಿಕ ಸಂಕಷ್ಟಕ್ಕೊಡ್ಡಿದೆ. ಇದರಿಂದ ಹಳ್ಳಿ ಭಾಗದ ಜನರು ಗುಳೆ ಹೋಗುತ್ತಿದ್ದಾರೆ.ಡ್ಯಾಮ್‌ನಲ್ಲಿ 40 ಟಿಎಂಸಿ ನೀರು ತುಂಬಿದ ತಕ್ಷಣ ರೈತರಿಗೆ ಬೆಳೆ ಬೆಳೆಯಲು ನೀರು ಬಿಡಬೇಕು. ಒಂದು ವೇಳೆ ನೀರು ಬಿಡದಿದ್ದರೆ, ಈ ಕ್ಷೇತ್ರದ ಜನತೆಯ ಜೊತೆಗೂಡಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.ಬಿಜೆಪಿ ಮುಖಂಡ ಹರ್ಷ ಅವರು ಮಾತನಾಡಿ, ಸಿಂಧನೂರು ತಾಲ್ಲೂಕಿನಲ್ಲಿ 'ಅಣ್ಣ' ಎಂಬ ಆತ್ಮೀಯ ಕರೆಯ ಹೆಸರು ಯಾರಿಗಾದರೂ ಸಲ್ಲುತ್ತದೆ ಎಂದಾದರೆ, ಅದು ಕರಿಯಪ್ಪ ಅಣ್ಣ ಅವರಿಗೆ ಮಾತ್ರ. ಅವರು ಅಧಿಕಾರದಲ್ಲಿರಲಿ ಅಥವಾ ಇಲ್ಲದಿರಲಿ, ಸದಾ ಜನರ ಮಧ್ಯೆ ಇದ್ದು ನಿರಂತರ ಸೇವೆ ಸಲ್ಲಿಸುತ್ತಿರುವ ನಿಜವಾದ ಜನನಾಯಕರು ಎಂದು ಪ್ರಶಂಸಿದರು.ನಗರ ಮಂಡಲ ಅಧ್ಯಕ್ಷ ಸಿದ್ಧರಾಮೇಶ ಮನ್ನಾಪುರ ಮಾತನಾಡಿ, "ರೈತರು ಮಳೆಯಿಲ್ಲದೆ ಸಂಕಷ್ಟದಲ್ಲಿದ್ದಾಗ ಕೆ. ಕರಿಯಪ್ಪ ಅವರು ತಮ್ಮ ಹುಟ್ಟುಹಬ್ಬ ಆಚರಿಸಿಕೊಳ್ಳಬೇಡಿ ಎಂದಿದ್ದರು. ಆದರೆ ಅಭಿಮಾನಿಗಳ ಕೋರಿಕೆಯಂತೆ ಸಿಂಧನೂರು ಕ್ಷೇತ್ರದಲ್ಲಿ ಪ್ರಥಮ ಬಾರಿಗೆ ಮಳೆಗಾಗಿ ಮಹಾ ವರುಣ ಯಾಗ ಹಮ್ಮಿಕೊಳ್ಳಲಾಯಿತು. ಪೂಜೆ ಮಾಡಿದ ಒಂದು ಗಂಟೆಯಲ್ಲೇ ಮಳೆ ಬಂದಿದ್ದು, ಕರಿಯಪ್ಪ ಅವರ ನಿಷ್ಕಲ್ಮಶ ಮನಸ್ಸಿಗೆ ದೇವರ ಕೃಪೆ ದೊರೆತು ಸತತ ಮೂರು ದಿನ ಮಳೆಯಾಯಿತು.



ಯಾವುದೇ ಪ್ರಚಾರವೋ ಅಥವಾ ವಾಹನದ ವ್ಯವಸ್ಥೆಯೋ ಮಾಡದಿದ್ದರೂ, ಸಾಗರದಂತೆ ಜನರು ಸ್ವಯಂಪ್ರೇರಿತರಾಗಿ ಸೇರಿದ್ದರು. ಯಾವುದೇ ಅಧಿಕಾರವಿಲ್ಲದೆ ಕಳೆದ 30-40 ವರ್ಷಗಳಿಂದ ನಿರಂತರ ಜನಸೇವೆ ಮಾಡುತ್ತಿರುವ ಅವರು, 2028ರಲ್ಲಿ ಶಾಸಕರಾಗಿ ಆಯ್ಕೆಯಾಗುವುದು ನಿಶ್ಚಿತ ಎಂದರು.

ಗ್ರಾಮೀಣ ಮಂಡಲ ಅಧ್ಯಕ್ಷ ಯಂಕೋಬ ನಾಯಕ ಮಾತನಾಡಿ, "ರಾಜ್ಯ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದ್ದೇವೆ ಎಂದು ಸುಳ್ಳು ಹೇಳುತ್ತಿದೆ. ಯಾವುದೇ ಅಭಿವೃದ್ಧಿ ಮಾಡದೆ, 2ನೇ ಬೆಳೆಗೆ ನೀರು ನೀಡದೆ ರೈತರನ್ನು ಆರ್ಥಿಕ ಸಂಕಷ್ಟಕ್ಕೊಡ್ಡಿದೆ. ಗ್ಯಾರಂಟಿ ಯೋಜನೆಗಳು ಬೋಗಸ್ ಆಗಿದ್ದು, ಒಂದು ಕಡೆ ನೀಡಿ ಮತ್ತೊಂದು ಕಡೆ ಕಿತ್ತುಕೊಳ್ಳಲಾಗುತ್ತಿದೆ.

ಕಳೆದ ಚುನಾವಣೆಯಲ್ಲಿ ಎಸ್‌ಸಿ-ಎಸ್‌ಟಿ ಸಮುದಾಯವನ್ನು ದಾರಿ ತಪ್ಪಿಸಲು ಬಿಜೆಪಿ ಸಂವಿಧಾನ ಬದಲಾಯಿಸುತ್ತದೆ ಎಂದು ಸುಳ್ಳು ಸುದ್ದಿ ಹಬ್ಬಿಸಿ, ಈಗ ಅದೇ ಸಮುದಾಯದ 187 ಕೋಟಿ ರೂ. ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಸಿಂಧನೂರು ತಾಲೂಕಿನಲ್ಲಿ ಶೂನ್ಯ ಅಭಿವೃದ್ಧಿಯಾಗಿದೆ. ಒಳಬಳ್ಳಾರಿ ಏತ ನೀರಾವರಿ ಯೋಜನೆಯಲ್ಲಿ ಸ್ವಾರ್ಥ ಸಾಧನೆ ಮಾಡಲಾಗಿದ್ದು, ಗ್ರಾಮೀಣ ಭಾಗದ ರಸ್ತೆಗಳು ಮತ್ತು ನಗರದ ಯುಜಿಡಿ ಕಾಮಗಾರಿಗಳು ಸಂಪೂರ್ಣ ಹದಗೆಟ್ಟಿವೆ. ಮಲ್ಲಯ್ಯ ಕ್ಯಾಂಪ್ ಬಳಿಯ ಬ್ರಿಡ್ಜ್ ಕಮ್ ಬ್ಯಾರೇಜ್ ಕಾಮಗಾರಿಯಿಂದ ರಸ್ತೆಗಳು ಹಳ್ಳಬಿದ್ದು, ಜನರು ರಾತ್ರಿ ವೇಳೆ ಬೈಕ್‌ಗಳಲ್ಲಿ ಓಡಾಡಲು ಪರದಾಡುತ್ತಿದ್ದಾರೆ. ಇದು ಸರ್ಕಾರದ ಬೇಜವಾಬ್ದಾರಿಗೆ ಸಾಕ್ಷಿಯಾಗಿದೆ" ಎಂದು ಆರೋಪಿಸಿದರು.ಈ ಸಮಾರಂಭದಲ್ಲಿ ಛತ್ರಪತಿ ಶಿವಾಜಿ ಮಹಾರಾಜ ಸೇವಾ ಟ್ರಸ್ಟ್ ಅಧ್ಯಕ್ಷ ಜಿ.ಕೆ. ವಿಶ್ವನಾಥ್ ಚೌದರಿ, ಮುಖಂಡರಾದ ನೆಕ್ಕಂಟಿ ಸುರೇಶ್, ಕಮ್ಮ ರಾಮಕೃಷ್ಣ, ಮುತ್ತು ಬರಸಿ, ರಾಮಚಂದ್ರರಾವ್, ಬೋಸು, ಸೋಮನಾಥ ಕಲ್ಲೂರು,ರಮಣಾರೆಡ್ಡಿ, ನೆಕ್ಕಂಟಿ ವಂಶಿ, ವಿಶ್ವನಾಥ ಚೌಧರಿ,ನರೇಶ್, ರವಿ, ಚಿಲುಕೂರು ಮೋಹನರಾವ್, ಕೊಂಡಬಾಬು, ಯಮನೂರ ಮುಳ್ಳೂರು,ಮಹಾನಂದಮ್ಮ,ಸಿದ್ದಪ್ಪ ಕಲ್ಲೂರು, ಸೇರಿದಂತೆ ಅನೇಕ ಗಣ್ಯರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಕೃಷಿ ಮಹಾವಿದ್ಯಾಲಯ ವಿದ್ಯಾರ್ಥಿಗಳಿಂದ ಅನಿರ್ದಿಷ್ಟಾವಧಿ ಮುಷ್ಕರ



ವಿಜಯಪುರ ಜು 25: ವಿವಿಧ ಬೇಡಿಕೆಗಳ ಈಡೇರಿಕೆ ಕುರಿತಂತೆ ನಗರದ ಹೊರವಲಯದ ಹಿಟ್ನಳ್ಳಿ ಕೃಷಿ ಮಹಾವಿದ್ಯಾಲಯ ವಿದ್ಯಾರ್ಥಿಗಳು ಇಂದಿನಿಂದ ಅನಿರ್ದಿಷ್ಟಾವಧಿಯ ಮುಷ್ಕರ ಹಮ್ಮಿಕೊಂಡಿದ್ದಾರೆ. ಈಗಾಗಲೇ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳಿಗೆ ನೇಮಕಾತಿ ಮಾಡಲು ಅಧಿಸೂಚನೆ ಹೊರಡಿಸಿದ್ದು, ಇದರಲ್ಲಿ ಬಿಇ ಬಯೋಟೆಕ್ನಾಲಜಿ ಮುಗಿಸಿದ ಪದವೀಧರರಿಗೂ ಅವಕಾಶ ಕಲ್ಪಿಸಿದ್ದಾರೆ. ಇದರಿಂದ ಕೃಷಿಯಲ್ಲಿ ವಿವಿಧ ವಿಷಯಗಳನ್ನು ಓದಿರುವ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದ್ದು, ಇದನ್ನು ಕೈ ಬಿಡಬೇಕೆಂದು ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಯಾಗಿದೆ. ಭಾರತೀಯ ಕೃಷಿ ಅನುಸಂಧಾನ ಪರಿಷತ್ ನವದೆಹಲಿಯಿಂದ ಮಾನ್ಯತೆ ಪಡೆದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಓದಿರುವ ಪದವೀಧರರಿಗೆ ಮಾತ್ರ ವಿವಿಧ ಹುದ್ದೆಗಳ ನೇಮಕಾತಿಗೆ ಆದ್ಯತೆ ನೀಡಬೇಕು,ಇದನ್ನು ಬಿಟ್ಟು ಐಸಿಎಆರ್ ನಿಂದ ಮಾನ್ಯತೆ ಪಡೆಯದ ಖಾಸಗಿ ರೈಟೆಕ್ ವಿವಿಯಲ್ಲಿ ಓದಿರುವ ಅಭ್ಯರ್ಥಿಗಳಿಗೆ ನೇಮಕಾತಿಯಲ್ಲಿ ಅವಕಾಶ ಕೊಡಬಾರದು ಮತ್ತು ಪ್ರತಿವರ್ಷ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕೆಂಬ ಪ್ರಮುಖ ಬೇಡಿಕೆಗಳೊಂದಿಗೆ, ವಿದ್ಯಾರ್ಥಿಗಳು ಹೋರಾಟ ಮಾಡುತ್ತಿದ್ದಾರೆ. ಇಂದು ವಿದ್ಯಾರ್ಥಿ ಮುಖಂಡರಾದ ಎಂ.ಡಿ.ಅಮೀರ, ಸುರೇಶ ಬಿರಾದಾರ, ಶರಣಬಸು ನಾಯ್ಕಲ್, ರೋಹಿಣಿದೇಸಾಯಿ, ವೈಷ್ಣವಿ. ಕೆ ನೇತೃತ್ವದಲ್ಲಿ ಪ್ರಭಾರಿ ಡೀನ್ ಡಾ. ಎ.ಪಿ.ಬಿರಾದಾರ ಸಹ ವಿಸ್ತರಣೆ ನಿರ್ದೇಶಕ ಡಾ. ಆರ್.ಬಿ. ಜೊಳ್ಳಿ ಇವರಿಗೆ ಮನವಿ ಪತ್ರವನ್ನು ಸಲ್ಲಿಸಿ, ಕಾಲೇಜು ಆವರಣದ ಮುಂದೆ ಶಾಂತಿಯುತ ಹೋರಾಟ ಆರಂಭಿಸಿದ್ದಾರೆ. ಈ ಹೋರಾಟದಲ್ಲಿ ಮಹಾವಿದ್ಯಾಲಯದ ನೂರಾರು ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

# ಅಬಕಾರಿ ಸನ್ನದುಗಳು 24 ರಿಂದ 31 ರವರೆಗೆ ಇ-ಹರಾಜು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

2025-26 ರ ಆಯವ್ಯಯ ಘೋಷಣೆಯಂತೆ ಕರ್ನಾಟಕ ಸರ್ಕಾರವು ಖಾಲಿ ಅಥವಾ ಲಭ್ಯವಿರುವ ಮದ್ಯದ ಸನ್ನದುಗಳನ್ನು ಪಾರದರ್ಶಕ ಎಲೆಕ್ಟ್ರಾನಿಕ್ ಹರಾಜಿನ ಮೂಲಕ ಹಂಚಿಕೆ ಮಾಡಿ, ಹೆಚ್ಚುವರಿ ರಾಜಸ್ವ ಸಂಗ್ರಹಣೆ ಮಾಡುವ ನಿರೀಕ್ಷಿಸಿದೆ ಎಂದು ಪ್ರಸ್ತಾಪಿಸಿದ ಹಿನ್ನೆಲೆಯಲ್ಲಿ ,ಅಬಕಾರಿ ಇಲಾಖೆಯು ಅಬಕಾರಿ ನಿಯಮಗಳಿಗೆ ಅಗತ್ಯ ತಿದ್ದುಪಡಿಗಳನ್ನು ತಂದು, ಒಟ್ಟಾರೆ 579 ಸನ್ನದುಗಳನ್ನು ಎಲೆಕ್ಟ್ರಾನಿಕ್ ಇ-ಹರಾಜು ಮೂಲಕ ಹಂಚಿಕೆ ಮಾಡಲು ಸರ್ಕಾರವು ಅಧಿಸೂಚನೆ ಹೊರಡಿಸಿದೆ.

ಸ್ಥಗಿತಗೊಂಡಿರುವ ಮತ್ತು ಹಂಚಿಕೆಯಾಗದೇ ಇರುವ ಸಿಎಲ್-2 ಮತ್ತು ಸಿಎಲ್(11-ಸಿ) ಸನ್ನದುಗಳನ್ನು ಸಿಎಲ್(2-ಎ) ಎಂದು ಮತ್ತು ಸ್ಥಗಿತಗೊಂಡಿರುವ ಸಿಎಲ್-9 ಸನ್ನದುಗಳನ್ನು ಸಿಎಲ್(9-ಎ) ಎಂದು ವರ್ಗೀಕರಿಸಿ 569 ಸನ್ನದುಗಳ ಪೈಕಿ ಹರಾಜು ಪ್ರಕ್ರಿಯೆಗೆ 483 ಸಿಎಲ್(2-ಎ) ಮತ್ತು 96 ಸಿಎಲ್(9-ಎ) ಸನ್ನದುಗಳನ್ನು ಇ-ಹರಾಜಿಗೆ ಪ್ರಕಟಿಸಲಾಗಿದೆ.

ಸರ್ಕಾರವು ಸಿಎಲ್(2-ಎ) ಮತ್ತು ಸಿಎಲ್(9-ಎ) ಸನ್ನದುಗಳನ್ನು ಇ-ಹರಾಜಿನಲ್ಲಿ ಹರಾಜು ಮಾಡಲಿದೆ.ವಿವಿಧ ವರ್ಗಗಳಿಗೆ ಮೀಸಲಾತಿ ಕಲ್ಪಿಸಲಾಗಿದೆ.

ಬಿಡ್‌ದಾರರ ನೋಂದಣಿಯು ಜುಲೈ 3 ರಿಂದ ಪ್ರಾರಂಭವಾಗಿದ್ದು, ನೇರ ಹರಾಜು (Live Bidding) ಜುಲೈ 24 ರಿಂದ 31ರವರೆಗೆ ಜರುಗಲಿದೆ.

ಇ-ಹರಾಜು ಅಧಿಸೂಚನೆ ಮತ್ತು ಬಿಡ್ಡಿಂಗ್‌ಗಾಗಿ ನೋಂದಾಯಿಸಿಕೊಳ್ಳುವ ವಿಧಾನವು ಅಬಕಾರಿ ಇಲಾಖೆಯ ttps://stateexcise.karnataka.gov.in ನಲ್ಲಿ ಮತ್ತು MSTC ಇ-ಹರಾಜು ಪೋರ್ಟಲ್ https://www.mstcecommerce.com. ನಲ್ಲಿ ಲಭ್ಯವಿರುತ್ತದೆ ಎಂದು ಅಬಕಾರಿ ಆಯುಕ್ತರಾದ ಆರ್.ವೆಂಕಟೇಶ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲೆಮಾರಿ ಸಮುದಾಯದ ಯಾರೂ ಮತದಾನದ ಹಕ್ಕಿನಿಂದ ವಂಚಿತರಾಗಬಾರದು: ಶಿವಕುಮಾರ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ನಾಗರಿಕರು ಹೊರಗುಳಿಯಬಾರದು ಹಾಗೂ ಪ್ರತಿಯೊಬ್ಬರಿಗೂ ತಮ್ಮ ಸಂವಿಧಾನಬದ್ಧ ಮತದಾನದ ಹಕ್ಕು ದೊರೆಯಬೇಕು ಎಂಬ ಉದ್ದೇಶದಿಂದ ಸಿರುಗುಪ್ಪ ತಾಲೂಕಿನ 64 ಹಳೇಕೋಟ ಗ್ರಾಮದ ನಾಲ್ಕನೇ ವಾರ್ಡ್‌ನ ಅಲೆಮಾರಿ ಕಾಲೋನಿಯಲ್ಲಿ ವಿಶೇಷ ಎಸ್‌ಐಆರ್ (ಖಿಡಿಜಭಿಚಿಟ ಖಟಿಣಜಚಿಘಿತಜ ಖಜತ್ಖುಠಟಿ) ಜಾಗೃತಿ ಕಾರ್ಯಕ್ರಮ ನಡೆಯಿತು.



ಈ ಕಾರ್ಯಕ್ರಮದಲ್ಲಿ ಕೆಪಿಸಿಸಿ ಸಾಮಾಜಿಕ ನ್ಯಾಯ ಸಮಿತಿ ರಾಜ್ಯ ಉಪಾಧ್ಯಕ್ಷ ವೈ. ಶಿವಕುಮಾರ್ ಅವರು ಬಿಎಲ್‌ಒ ಅಧಿಕಾರಿಗಳೊಂದಿಗೆ ಮನೆ ಮನೆಗೆ ಭೇಟಿ ನೀಡಿ ಸಾರ್ವಜನಿಕರನ್ನು ನೇರವಾಗಿ ಸಂಪರ್ಕಿಸಿ ಎಸ್‌ಐಆರ್ ಅರ್ಜಿಗಳನ್ನು ಸ್ವತಃ ಭರ್ತಿ ಮಾಡಿಸಿದರು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ ಸೇರಿದಂತೆ ವಿವಿಧ ಮತದಾರರ ನೋಂದಣಿ ಪ್ರಕ್ರಿಯೆಗಳ ಕುರಿತು ಜನರಿಗೆ ವಿವರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು.

ಅಲೆಮಾರಿ ಸಮುದಾಯದ ಅನೇಕ ಕುಟುಂಬಗಳಿಗೆ ಮತದಾರರ ನೋಂದಣಿ ಪ್ರಕ್ರಿಯೆ ಕುರಿತು ಸಮರ್ಪಕ ಮಾಹಿತಿ ಇಲ್ಲದಿರುವುದನ್ನು ಗಮನಿಸಿದ ವೈ. ಶಿವಕುಮಾರ್ ಅವರು ಪ್ರತಿಯೊಂದು ಮನೆಗೆ ತೆರಳಿ ಕುಟುಂಬ ಸದಸ್ಯರ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಪರಿಶೀಲಿಸಿ, ಹೆಸರು ಇಲ್ಲದವರಿಗೆ ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ಎಸ್‌ಐಆರ್ ಅರ್ಜಿಗಳನ್ನು ಭರ್ತಿ ಮಾಡಿಸಿದರು. ಜೊತೆಗೆ ಮತದಾರರ ಪಟ್ಟಿಯಲ್ಲಿ ಹೆಸರು, ವಿಳಾಸ ಅಥವಾ ಇತರ ವಿವರಗಳಲ್ಲಿ ದೋಷಗಳಿದ್ದರೆ ಅವುಗಳನ್ನು ತಿದ್ದುಪಡಿ ಮಾಡಿಸಿಕೊಳ್ಳುವ ಅವಕಾಶಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಸಾಮಾಜಿಕ ನ್ಯಾಯ ಸಮಿತಿ ರಾಜ್ಯ ಉಪಾಧ್ಯಕ್ಷ ವೈ. ಶಿವಕುಮಾರ್, "ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು. ಅಲೆಮಾರಿ ಸಮುದಾಯ ಸೇರಿದಂತೆ ಯಾವುದೇ ವರ್ಗದ ಜನರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಚುನಾವಣಾ ಆಯೋಗದ ಎಸ್‌ಐಆರ್ ಅಭಿಯಾನವನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು. ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ," ಎಂದು ಹೇಳಿದರು.

ಯುವ ಮತದಾರರು, ಮಹಿಳೆಯರು ಹಾಗೂ ಅಲೆಮಾರಿ ಸಮುದಾಯದ ಪ್ರತಿಯೊಬ್ಬರೂ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿದೆಯೇ ಎಂಬುದನ್ನು ಪರಿಶೀಲಿಸಿಕೊಂಡು, ಅಗತ್ಯವಿದ್ದರೆ ಎಸ್‌ಐಆರ್ ಮೂಲಕ ಹೆಸರು ಸೇರ್ಪಡೆ ಅಥವಾ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಬಿಎಲ್‌ಒ ಅಧಿಕಾರಿಗಳು ಮತದಾರರ ನೋಂದಣಿಗೆ ಅಗತ್ಯ ದಾಖಲೆಗಳು, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಚುನಾವಣಾ ಆಯೋಗದ ಮಾರ್ಗಸೂಚಿಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಸ್ಥಳೀಯ ನಿವಾಸಿಗಳು ಸಹ ಉತ್ತಮ ಸ್ಪಂದನೆ ವ್ಯಕ್ತಪಡಿಸಿ ತಮ್ಮ ದಾಖಲೆಗಳನ್ನು ಸಲ್ಲಿಸಿ ಎಸ್‌ಐಆರ್ ಅರ್ಜಿಗಳನ್ನು ಭರ್ತಿ ಮಾಡಿಸಿದರು.

ಅಲೆಮಾರಿ ಕಾಲೋನಿಯಲ್ಲಷ್ಟೇ ಅಲ್ಲದೆ ವಿವಿಧ ಸಮುದಾಯಗಳಲ್ಲಿಯೂ ಇದೇ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಮುಂದುವರಿಸಲಾಗುತ್ತಿದ್ದು, ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ನಾಗರಿಕರು ಹೊರಗುಳಿಯದಂತೆ ವ್ಯಾಪಕ ಅರಿವು ಮೂಡಿಸುವ ಕಾರ್ಯಕ್ಕೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಎಲ್‌ಒ ಅಧಿಕಾರಿಗಳು, ಸ್ಥಳೀಯ ಮುಖಂಡರು, ಅಲೆಮಾರಿ ಸಮುದಾಯದ ಹಿರಿಯರು, ಮಹಿಳೆಯರು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ಮತದಾರರ ನೋಂದಣಿ ಅಭಿಯಾನಕ್ಕೆ ಸಕ್ರಿಯವಾಗಿ ಸಹಕರಿಸಿದರು.

# 27ರಂದು ಕಮಲಾಪುರದಲ್ಲಿ ಎರಬೂತ ಗ್ರೇಟ್ ಇಂಡಿಯನ್ ಬಸ್ಟರ್ಡ್ ಸಂರಕ್ಷಣೆ ಕುರಿತು ಪ್ರಾದೇಶಿಕ ಕಾರ್ಯಾಗಾರ



ಬಳ್ಳಾರಿ: ಕರ್ನಾಟಕ ಅರಣ್ಯ ಇಲಾಖೆಯ ಬಳ್ಳಾರಿ ವಿಭಾಗದ ವತಿಯಿಂದ ಅಳಿವಿನಂಚಿನಲ್ಲಿರುವ ಅಪರೂಪದ ಹಕ್ಕಿಯಾದ "ಎರಬೂತ" (ಗ್ರೇಟ್ ಇಂಡಿಯನ್ ಬಸ್ಟರ್ಡ್ - ಉಖಃ) ಸಂರಕ್ಷಣೆ, ಅದರ ಎದುರಿನ ಸವಾಲುಗಳು ಮತ್ತು ದೀರ್ಘಕಾಲೀನ ರಕ್ಷಣಾ ಕಾರ್ಯತಂತ್ರಗಳ ಕುರಿತು ಜುಲೈ 27 ರಂದು ಕಮಲಾಪುರದ ದರೋಜಿ ಕರಡಿ ಧಾಮ ಪ್ರಕೃತಿ ನಿರೂಪಣಾ ಕೇಂದ್ರದಲ್ಲಿ ಪ್ರಾದೇಶಿಕ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.ಈ ವಿಶೇಷ ಕಾರ್ಯಾಗಾರದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಹಾಗೂ ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್ ಅವರು ಭಾಗವಹಿಸಲಿದ್ದಾರೆ.ಅಲ್ಲದೆ, ಭಾರತೀಯ ವನ್ಯಜೀವಿ ಸಂಸ್ಥೆ (ಹಾಗೂ ಬಾಂಬೆ ನ್ಯಾಚುರಲ್ ಹಿಸ್ಟರಿ ಸೊಸೈಟಿ ಸಂಸ್ಥೆಗಳ ಪ್ರಸಿದ್ಧ ವಿಜ್ಞಾನಿಗಳು ಮತ್ತು ಸಂರಕ್ಷಣ ಜೀವಶಾಸ್ತ್ರಜ್ಞರು ಆಗಮಿಸಿ ಕ್ಷೇತ್ರ ಮಟ್ಟದ ತಮ್ಮ ಅನುಭವ ಹಾಗೂ ವೈಜ್ಞಾನಿಕ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.ಕಾರ್ಯಾಗಾರದ ಪ್ರಮುಖ ಉದ್ದೇಶಗಳು:ಎರಬೂತ / ಉಖಃ ತಳಿಯ ಪ್ರಸ್ತುತ ಸ್ಥಿತಿಗತಿ ಮತ್ತು ಸಂರಕ್ಷಣಾ ವಿಧಾನಗಳ ಬಗ್ಗೆ ಮಾಹಿತಿ ಹಂಚಿಕೊಳ್ಳುವುದು. ತೀವ್ರ ಅಳಿವಿನಂಚಿನಲ್ಲಿರುವ ಈ ಪಕ್ಷಿ ಪ್ರಭೇದ ಎದುರಿಸುತ್ತಿರುವ ಬೆದರಿಕೆಗಳು ಹಾಗೂ ಸಂರಕ್ಷಣೆಗೆ ಇರುವ ಅವಕಾಶಗಳನ್ನು ಗುರುತಿಸುವುದು. ವಿವಿಧ ಇಲಾಖೆಗಳ ನಡುವೆ ಉತ್ತಮ ಸಮನ್ವಯ ಸಾಧಿಸಿ, ಆವಾಸಸ್ಥಾನಗಳ ಪುನಶ್ಚೇತನಕ್ಕೆ ಪ್ರಾದೇಶಿಕ ಹಂತದಲ್ಲಿ ಸೂಕ್ತ ಕಾರ್ಯತಂತ್ರ ರೂಪಿಸುವುದು.12 ಜಿಲ್ಲೆಗಳ ಅಧಿಕಾರಿಗಳ ಭಾಗವಹಿಸುವಿಕೆ:ಉತ್ತರ ಕರ್ನಾಟಕ ಭಾಗದ (ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಪ್ರದೇಶಗಳ) 12 ಜಿಲ್ಲೆಗಳ ಅರಣ್ಯಾಧಿಕಾರಿಗಳು ಮತ್ತು ಜಿಲ್ಲಾ ಆಡಳಿತ ವ್ಯವಸ್ಥೆ ಈ ಕಾರ್ಯಾಗಾರದಲ್ಲಿ ಕೈಜೋಡಿಸಲಿದೆ.ಭಾಗವಹಿಸುವ ಜಿಲ್ಲೆಗಳು: ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ಬಳ್ಳಾರಿ, ವಿಜಯನಗರ, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಬಾಗಲಕೋಟೆ ಮತ್ತು ವಿಜಯಪುರ.ಇದರೊಂದಿಗೆ ಪೊಲೀಸ್ ಮಹಾನಿರೀಕ್ಷಕರು, ಬಳ್ಳಾರಿ ಜಿಲ್ಲಾ ಆಡಳಿತದಹಿರಿಯ ಅಧಿಕಾರಿಗಳು, 12 ಜಿಲ್ಲೆಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಆಯ್ದ ವಲಯ ಅರಣ್ಯಾಧಿಕಾರಿಗಳು ಹಾಗೂ ಉಪ ವಲಯ ಅರಣ್ಯಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್. ಬಸವರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಬಿಎ ವೃತ್ತಿಪರ ಕೋರ್ಸ್‌ಗೆ ವಿಶೇಷ ಮಹತ್ವ: ಡಾ.ಚವ್ಹಾಣ




**ಬಾಗಲಕೋಟೆ:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಬಿ.ಬಿ.ಎ. ವೃತ್ತಿಪರ ಕೋರ್ಸ್‌ಗೆ ವಿಶೇಷ ಮಹತ್ವವಿದ್ದು, ವಿದ್ಯಾರ್ಥಿಗಳು ಆರಂಭಡಿಂದಲೇ ಸ್ಪಷ್ಟ ಗುರಿ ಹೊಂದಿ ನಿರಂತರ ಪರಿಸ್ಥಾನದಿಂದ ತಮ್ಮ ಕನಸುಗಳನ್ನು ನನಸಾಗಿಸಿಕೊಳ್ಳಬಹುದು ಎಂದು ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜಗನ್ನಾಥ ಚವ್ಹಾಣ ಹೇಳಿದರು.

ಮಹಾವಿದ್ಯಾಲಯದ ಬಿ.ಬಿ.ಎ. ವಿಭಾಗದ ವತಿಯಿಂದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಆರಂಭ 2026ರ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಾವಿದ್ಯಾಲಯದ ಶಿಸ್ತು, ಮೌಲ್ಯಾಧಾರಿತ ಶಿಕ್ಷಣ ಹಾಗೂ ಗುಣಮಟ್ಟದ ಬೋಧನೆ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಜ್ಞಾನಾರ್ಜನೆಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಬಿ.ಬಿ.ಎ. ವಿಭಾಗದ ಸಂಯೋಜಕರಾದ ಡಾ. ನಂಜುಂಡಸ್ವಾಮಿ ಮಾತನಾಡಿ, ಮಹಾವಿದ್ಯಾಲಯ ಶಿಸ್ತು, ಸಮಯಪಾಲನೆ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ಹೆಸರುವಾಸಿಯಾಗಿದ್ದು, ಈ ಮೌಲ್ಯಗಳನ್ನು ಅಳವಡಿಸಿಕೊಂಡು ಅಧ್ಯಯನ ಮಾಡಿದರೆ ಯಶಸ್ಸು ಖಚಿತ ಎಂದರು.

ಐಕ್ಯೂಎಸಿ ಸಂಯೋಜಕಿ ಗಿರಿಜಾ ನಾವದಗಿ ಮಾತನಾಡಿ, ಪರಿಶ್ರಮ, ಶಿಸ್ತು, ಸದಾಚಾರ ಮತ್ತು ಸಾಧನೆಗಳ ಮೂಲಕ ಪೋಷಕರು ಹಾಗೂ ಮಹಾವಿದ್ಯಾಲಯಕ್ಕೆ ಹೆಮ್ಮೆ ತರುವ ವಿದ್ಯಾರ್ಥಿಗಳಾಗಿ ಬೆಳೆಯುವಂತೆ ಹಾರೈಸಿದರು.

ಪ್ರಾಧ್ಯಾಪಕರು ವಿದ್ಯಾರ್ಥಿಗಳಿಗೆ ಕೇವಲ ಪದವಿ ಪಡೆಯುವುದನ್ನಷ್ಟೇ ಗುರಿಯಾಗಿಸಿಕೊಳ್ಳದೆ, ನಿಜವಾದ ಜ್ಞಾನ ಸಂಪಾದನೆ, ಉತ್ತಮ ಸ್ನೇಹ ಹಾಗೂ ವ್ಯಕ್ತಿತ್ವ ವಿಕಸನಕ್ಕೂ ಸಮಾನ ಮಹತ್ವ ನೀಡುವಂತೆ ಸಲಹೆ ನೀಡಿದರು. ಸಾಂಸ್ಕೃತಿಕ ಚಟುವಟಿಕೆಗಳ ಕಾರ್ಯಾಧ್ಯಕ್ಷ ಡಾ. ಬಸವರಾಜ ಖೋತ, ಸಾಂಸ್ಕೃತಿಕ ಚಟುವಟಿಕೆಗಳ ಮಹತ್ವದ ಕುರಿತು ಮಾತನಾಡಿದರೆ, ದೈಹಿಕ ನಿರ್ದೇಶಕ ಡಾ.ಎಸ್.ಎಸ್. ಕೋಟ್ಯಾಳ ಕ್ರೀಡೆಗಳ ಮಹತ್ವವನ್ನು ವಿವರಿಸಿದರು.

ಬಿ.ಬಿ.ಎ. ವಿಭಾಗದ ಮುಖ್ಯಸ್ಥೆ ನಂದಿನಿ ದೊಡಮನಿ ಸ್ವಾಗತಿಸಿದರು. ಶೀತಲ್ ಬಾರ್ಸಿ ವಿವಿಧ ತರಗತಿಗಳ ವಿದ್ಯಾರ್ಥಿ ಪ್ರತಿನಿಧಿಗಳನ್ನು ಘೋಷಿಸಿದರು. ಗುರಮ್ಮ ಬಳಗಾರ ವಿಭಾಗದ ಕಾರ್ಯಯೋಜನೆಗಳ ಕುರಿತು ಮಾಹಿತಿ ನೀಡಿದರು. ಸಂಪತ ಹಿಟ್ಟಿನಮಠ ವಿದ್ಯಾರ್ಥಿಗಳ ಸಂವಹನ ಕೌಶಲ್ಯ, ನಾಯಕತ್ವ ಹಾಗೂ ವ್ಯಕ್ತಿತ್ವ ವಿಕಸನದ ಕುರಿತು ಉಪಯುಕ್ತ ಸಲಹೆಗಳನ್ನು ನೀಡಿದರು. ಯಜ್ಞಪತಿ ಹಾಗೂ ಹೀನಾ ಅರಬೋಳ ಕಾರ್ಯಕ್ರಮ ನಿರೂಪಿಸಿದರು. ತೇಜಸ್ವಿನಿ ಬಡಿಗೇರ ಪ್ರಾರ್ಥಿಸಿದರು. ಕಾರ್ಯಕ್ರಮದ ಬಳಿಕ ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

# 135 ಪ್ರಕರಣಗಳ ವಿಚಾರಣೆ: 46 ಇತ್ಯರ್ಥ




**ಬಾಗಲಕೋಟೆ:** ಜಿಲ್ಲೆಯಲ್ಲಿ ಎರಡು ದಿನಗಳ ಕಾಲ ಪ್ರವಾಸಕೈಗೊಂಡ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ಲೋಕಾಯುಕ್ತ ನ್ಯಾಯಾಲಯದಲ್ಲಿ ಬಾಕಿಯಿದ್ದ 135 ಪ್ರಕರಣಗಳ ವಿಚಾರಣೆ ನಡೆಸಿ, ಅದರಲ್ಲಿ 46 ಪ್ರಕರಣಗಳನ್ನು ಇತ್ಯರ್ಥಗೊಳಿಸಿದರೆ, ಒಂದು ಪ್ರಕರಣವನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿದರು. ವಿಚಾರಣೆ ವೇಳೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳಿಂದ ಪ್ರಗತಿ ಕುರಿತು ಮಾಹಿತಿ ಪಡೆದುಕೊಂಡು ಪ್ರಕರಣಗಳ ಶೀಘ್ರ ವಿಲೇವಾರಿಗೆ ಅಗತ್ಯ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತ ಸ್ಪಂದನೆ ನೀಡುವುದು ಹಾಗೂ ಆಡಳಿತದಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿತನವನ್ನು ಖಚಿತಪಡಿಸುವುದು ಲೋಕಾಯುಕ್ತ ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ. ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಪಡಿಸಿ, ಅನಗತ್ಯ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಉಪ ಲೋಕಾಯುಕ್ತರು ಸೂಚಿಸಿದರು. ವಿಚಾರಣೆ ವೇಳೆಯಲ್ಲಿ ಉಪ ಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಅರವಿಂದ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹಿರೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಲೋಕಾಯುಕ್ತ ಎಸ್‌ಪಿ ನಂದಗಾವಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಲೋಕಾಯುಕ್ತ ಡಿವಾಯ್‌ಎಸ್‌ಪಿ ಸುರೇಶ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



**ಮೃತ ವ್ಯಕ್ತಿ ತುಕಾರಾಮ ನಿಂಬೂರೆ ಕುಟುಂಬಕ್ಕೆ ಸರಕಾರದ ಸೌಲಭ್ಯ ಒದಗಿಸಿ, ಕೊಡುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಈಗಾಗಲೇ ಒತ್ತಾಯಿಸಲಾಗಿದೆ. ಇದನ್ನು ಹೊರತು ಪಡಿಸಿ, ವಯಕ್ತಿಕವಾಗಿ ಬಸವರಾಜ ಫೌಂಡೇಶನ್ ವತಿಯಿಂದ ಮೃತರ ಕುಟುಂಬಕ್ಕೆ 51 ಸಾವಿರ ನೀಡಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಭರವಸೆ ನೀಡಿದರು.**

# ಹಲವು ಪ್ರಕರಣಗಳಲ್ಲಿ ಸು–ಮೋಟೋ ದಾಖಲು

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ನಗರ ಪ್ರದೇಶದಲ್ಲಿ ಉಪ ಲೋಕಾಯುಕ್ತ ಬಿ.ವೀರಪ್ಪ ವಿವಿಧ ಸರಕಾರಿ ಕಚೇರಿಗಳು, ಜಿಲ್ಲಾ ಆಸ್ಪತ್ರೆ, ಕೃಷಿ ಉತ್ಪನ್ನ ಮಾರುಕಟ್ಟೆಗೆ ಅನಿರೀಕ್ಷಿತ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿ ಪರಿಶೀಲಿಸಿದರು.

ಪರಿಶೀಲನಯ ವೇಳೆಯಲ್ಲಿ ಅವ್ಯವಸ್ಥೆ, ಆಡಳಿತಾತ್ಮಕ ನಿರ್ಲಕ್ಷ್ಯ ಹಾಗೂ ಸಾರ್ವಜನಿಕ ಸೇವೆಯಲ್ಲಿ ಲೋಪಗಳನ್ನು ಕಂಡು ಸು–ಮೋಟೋ ಪ್ರಕರಣಗಳನ್ನು ದಾಖಲಿಸಿ, ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನವನಗರದ ಎಪಿಎಂಸಿಗೆ ಭೇಟಿ ನೀಡಿದ ಅವರು, ಅಲ್ಲಿನ ಮೂಲಸೌಕರ್ಯ, ಆಡಳಿತಾತ್ಮಕ ವ್ಯವಸ್ಥೆ ಹಾಗೂ ರೈತರಿಗೆ ಒದಗಿಸಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ಎಪಿಎಂಸಿಯಲ್ಲಿ 3 ವರ್ಷದಿಂದ ಕಾರ್ಯನಿರ್ವಹಿಸುತ್ತಿರುವ ಹಮಾಲನಿಗೆ ಇನ್ನೂ ಗುರುತಿನ ಚೀಟಿಗಳನ್ನು ವಿತರಿಸದಿರುವ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ ಉಪ ಲೋಕಾಯುಕ್ತರು, ಅರ್ಹ ಹಮಾಲರೆಲ್ಲರಿಗೂ ಶೀಘ್ರದಲ್ಲೇ ಗುರುತಿನ ಚೀಟಿಗಳನ್ನು ವಿತರಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಮಾರುಕಟ್ಟೆಯಲ್ಲಿ ರೈತರಿಂದ ಅಥವಾ ವ್ಯಾಪಾರಿಗಳಿಂದ ಕಮಿಷನ್ ಹೆಸರಿನಲ್ಲಿ ಯಾವುದೇ ಅನಧಿಕೃತ ಹಣ ವಸೂಲಿ ಮಾಡಲಾಗುತ್ತಿದೆಯೇ ಎಂಬ ಕುರಿತು ಅಧಿಕಾರಿಗಳು, ವ್ಯಾಪಾರಿಗಳು ಹಾಗೂ ಹಮಾಲರಿಂದ ಮಾಹಿತಿ ಪಡೆದು ವಿಚಾರಣೆ ನಡೆಸಿದರು. ಸರ್ಕಾರ ನಿಗದಿಪಡಿಸಿರುವ ನಿಯಮಗಳಂತೆ ಮಾತ್ರ ವ್ಯವಹಾರ ನಡೆಯಬೇಕು. ರೈತರ ಹಿತಾಸಕ್ತಿಗೆ ಧಕ್ಕೆ ಉಂಟು ಮಾಡುವ ಯಾವುದೇ ಅಕ್ರಮ ಅಥವಾ ಅನಧಿಕೃತ



ಕಮಿಷನ್ ವಸೂಲಿ ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿ ಸು–ಮೋಟೋ ಪ್ರಕರಣ ದಾಖಲು ಮಾಡಿದರು.

ಸೀಮಿಕೇರಿ ಕ್ರಾಸ್ ಬಳಿಯಿರುವ ನೀರು ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿದ ಅವರು, ಕುಡಿಯುವ ನೀರಿನ ಶುದ್ಧೀಕರಣ ಪ್ರಕ್ರಿಯೆ, ನೀರಿನ ಗುಣಮಟ್ಟ ಪರೀಕ್ಷೆ, ವಿತರಣಾ ವ್ಯವಸ್ಥೆ ಹಾಗೂ ನಿರ್ವಹಣೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ನೀರು ಪರೀಕ್ಷೆ ಮಾಡಿದ ಮಾಹಿತಿ ಕೇಳಿದಾಗ ಮಾಹಿತಿ ನೀಡದಾಗ ಪ್ರತಿ ತಿಂಗಳು ನೀರಿನ ಪರೀಕ್ಷೆಗೆ ಒಳಪಡಿಸಲು ತಿಳಿಸಿದರು. ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಕುಡಿಯುವ ನೀರನ್ನು ನಿರಂತರವಾಗಿ ಪೂರೈಸುವಂತೆ ಸೂಚಿಸಿದರು.

ನಂತರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಹೊರರೋಗಿ ವಿಭಾಗ, ವಾರ್ಡ್, ಔಷಧ ವಿತರಣೆ ಕೇಂದ್ರ ಹಾಗೂ ಚಿಕಿತ್ಸಾ ಸೌಲಭ್ಯಗಳನ್ನು ಪರಿಶೀಲಿಸಿದರು. ಆಸ್ಪತ್ರೆಗೆ ಆಗಮಿಸಿದ್ದ ರೋಗಿಗಳೊಂದಿಗೆ ಸಂವಾದ ನಡೆಸಿ, ಚಿಕಿತ್ಸೆ, ಔಷಧ ಲಭ್ಯತೆ ಹಾಗೂ ಸಿಬ್ಬಂದಿಯ ಸೇವೆಯ ಕುರಿತು ಮಾಹಿತಿ ಪಡೆದುಕೊಂಡರು. ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡದೆ, ಉತ್ತಮ ಆರೋಗ್ಯ ಸೇವೆ ಒದಗಿಸುವಂತೆ ವೈದ್ಯರು ಹಾಗೂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರಸಭೆ ಕಚೇರಿಗೆ ಭೇಟಿ ನೀಡಿ, ನಾಗರಿಕರಿಗೆ ನೀಡಲಾಗುತ್ತಿರುವ ಮೂಲಭೂತ ಸೇವೆಗಳು, ಸ್ವಚ್ಛತೆ, ಕುಡಿಯುವ ನೀರು, ತೆರಿಗೆ ಸಂಗ್ರಹ ಹಾಗೂ ಸಾರ್ವಜನಿಕ ದೂರುಗಳ ನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು. ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ದೂರುಗಳನ್ನು ವಿಳಂಬವಿಲ್ಲದೆ ಪರಿಹರಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಧಿಕಾರಿಗಳ ಕಚೇರಿ ಬಾಗಿಲಲ್ಲಿ ಸಾರ್ವಜನಿಕರಿಗೆ ಪ್ರವೇಶವಿಲ್ಲವೆಂಬ ಬೋರ್ಡನ್ನು ನೋಡಿ ತಕ್ಷಣ ತೆಗೆದು ಹಾಕಲು ತಿಳಿಸಿ, ಸಾರ್ವಜನಿಕರಿಗಾಗಿ ಕೆಲಸ ನಿರ್ವಹಿಸುವ ಅಧಿಕಾರಿ ಆಗಿರುವದರಿಂದ ಈ ರೀತಿ ಲೋಪ ಎಸಗಿದ ಅಧಿಕಾರಿಗಳ ಮೇಲೆ ಸು–ಮೋಟೋ ಪ್ರಕರಣ ದಾಖಲಿಸಿದರು.

ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಮಹಿಳಾ ಮತ್ತು ಅಭಿವೃದ್ಧಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ ನಿಗಮಕ್ಕೆ ಭೇಟಿ ನೀಡಿ ಆಡಳಿತಾತ್ಮಕ ವ್ಯವಸ್ಥೆಯಲ್ಲಿನ ನಿರ್ಲಕ್ಷ್ಯ ಕಂಡು ಸು–ಮೋಟೊ ಪ್ರಕರಣ ದಾಖಲಿಸಿದರು.


ಭೇಟಿ ಸಮಯದಲ್ಲಿ ಉಪ ಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಅರವಿಂದ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಗಜಾನನ ಬಾಲೆ, ಲೋಕಾಯುಕ್ತ ಇಲಾಖೆಯ ಎಸ್‌ಪಿ ನಂದಗಾವಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಲೋಕಾಯುಕ್ತ ಡಿವಾಯ್‌ಎಸ್‌ಪಿ ಸುರೇಶ ರೆಡ್ಡಿ, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಬಾಗಲಕೋಟೆ ಉಪವಿಭಾಗಾಧಿಕಾರಿಗಳ ಕಚೇರಿಯ ಸಿಬ್ಬಂದಿ ರಂಜಿತಾ ಮಂಗಳೂರು ಅವರ ಮೊಬೈಲ್ ಆಪ್ ಪರಿಶೀಲಿಸಿದಾಗ ಆದಾಯಕ್ಕಿಂತ ಹೆಚ್ಚಿನ ಆರ್ಥಿಕ ವಹಿವಾಟು ನಡೆದಿರುವುದು ಕಂಡುಬಂತು. ಹೀಗಾಗಿ ಅವರ 2 ವರ್ಷಗಳ ಬ್ಯಾಂಕ್ ತಖ್ತೆ ನೀಡುವಂತೆ ಎಸಿ ಅವರಿಗೆ ಸೂಚಿಸಲಾಯಿತು. ತಹಶೀಲ್ದಾರ ಕಚೇರಿಯಲ್ಲಿಯೂ ಕೂಡಾ ದ್ವಿತಿಯ ದರ್ಜೆ ಸಹಾಯಕ ರಾಕೇಶ ಚಲವಾದಿ ಮೊಬೈಲ್ ಪರಿಶೀಲಿಸಲಾಗಿ ಫೆಬ್ರವರಿ–2026 ರಲ್ಲಿ 1.54 ಲಕ್ಷ, ಮಾರ್ಚನಲ್ಲಿ 4.82 ಲಕ್ಷ, ಮೇ ನಲ್ಲಿ 3ಲಕ್ಷ ರೂ. ಜುಲೈ ಮಾಹೆಯಲ್ಲಿ 1.69 ಲಕ್ಷ, ನವೆಂಬರ–2025ರಲ್ಲಿ 2 ಲಕ್ಷ ರೂ.ಗಳ ವಹಿವಾಟು ಮಾಡಿರುವುದು ಕಂಡುಬಂದಿದ್ದು ಆ ಸಿಬ್ಬಂದಿಯ 2 ವರ್ಷಗಳ ವಹಿವಾಟಿನ ಮಾಹಿತಿ ನೀಡುವಂತೆ ತಹಶೀಲ್ದಾರರಿಗೆ ಸೂಚಿಸಿ ಸು–ಮೋಟೋ ಪ್ರಕರಣ ದಾಖಲಿಸಲಾಯಿತು.**

# ವಿದ್ಯಾರ್ಥಿ ಜೀವನದಲ್ಲಿ ನಾಯಕತ್ವದ ಗುಣ ಅಗತ್ಯ: ಡಾ.ಮಿರ್ಜಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ವಿದ್ಯಾರ್ಥಿ ಜೀವನದಲ್ಲಿ ನಾಯಕತ್ವದ ಗುಣ, ಶಿಸ್ತು, ಪ್ರಾಮಾಣಿಕತೆ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳುವುದು ಅತ್ಯಂತ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ತಮಗೆ ನೀಡಲಾದ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಮೂಲಕ ಮಾದರಿಯಾಗಬೇಕು ಎಂದು ಖ್ಯಾತ ವೈದ್ಯ ಡಾ. ಪ್ರಮೋದ ಮಿರ್ಜಿ ಹೇಳಿದರು.



ನಗರದ ವಿದ್ಯಾಗಿರಿಯ ಬಿ.ವಿ.ವಿ.ಎಸ್. ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯಲ್ಲಿ ಶನಿವಾರ ಜರುಗಿದ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ ಹಾಗೂ ವಿದ್ಯಾರ್ಥಿ ನಾಯಕತ್ವ ಪದಗ್ರಹಣ ಸಮಾರಂಭವನ್ನು ಸಸಿಗೆ ನೀರುಣಿಸಿ ಉಧ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಂದಲೇ ಆಯ್ಕೆಯಾಗುವ ನಾಯಕತ್ವ ತಂಡಕ್ಕೆ ಅಧಿಕಾರ ಹಸ್ತಾಂತರಿಸುವುದು ಕೇವಲ ಹುದ್ದೆಯಲ್ಲ; ಅದು ನಾಯಕತ್ವ, ಕರ್ತವ್ಯಪ್ರಜ್ಞೆ ಹಾಗೂ ಸೇವಾ ಮನೋಭಾವ ಬೆಳೆಸುವ ಮಹತ್ವದ ಜವಾಬ್ದಾರಿಯಾಗಿದ್ದು, ವಿದ್ಯಾರ್ಥಿಗಳು ಶಿಕ್ಷಕರನ್ನು ಗೌರವಿಸಿ, ಶಾಲೆಯ ಘನತೆಯನ್ನು ಹೆಚ್ಚಿಸುವ ರೀತಿಯಲ್ಲಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಿ.ವಿ.ವಿ. ಸಂಘದ ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ಸಿ.ಬಿ.ಸುರೇಶ್ ಹೆಗಡೆ ಮಾತನಾಡಿ, ಭಾರತೀಯ ಸಂಸ್ಕೃತಿಯ ಮೌಲ್ಯಗಳನ್ನು ಗೌರವಿಸುವ ಮನೋಭಾವವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು. ನಿಜವಾದ ನಾಯಕನು ಪ್ರಾಮಾಣಿಕತೆ, ಶಿಸ್ತು ಮತ್ತು ಪಾರದರ್ಶಕತೆಯನ್ನು ತನ್ನ ನಾಯಕತ್ವದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದ ಗೌರವಕ್ಕೆ ಪಾತ್ರನಾಗುತ್ತಾನೆ ಎಂದು ಹೇಳಿದರು. ಪ್ರಾಂಶುಪಾಲ ಪ್ರವೀಣ್ ಗುಂಡನಗಾಂವಿ ಪ್ರಾಸ್ತಾವಿಕವಾಗಿ ಮಾತನಾಡಿದರು.

2026–27ನೇ ಸಾಲಿಗೆ ಆಯ್ಕೆಯಾಗಿರುವ ಮುಖ್ಯ ವಿದ್ಯಾರ್ಥಿ ಪೃಥ್ವಿರಾಜ ಹಳ್ಳೂರ, ಮುಖ್ಯ ವಿದ್ಯಾರ್ಥಿನಿ ದೀಪಿಕಾ ಸಾಹನಿ, ಸಭಾ ಕಾರ್ಯದರ್ಶಿಗಳಾದ ಆರಾಧ್ಯ ರಾಥೋಡ, ವೈಷ್ಣವಿ ಗಡಾದ, ಸಂಪತ್ ಬಿರಾದಾರ ಹಾಗೂ ಅಮೃತ ಕುಂಬಾರ, ಕ್ರೀಡಾ ಕಾರ್ಯದರ್ಶಿ ಸಚಿನ್ ಕೋಲ್ಕರ ಸೇರಿದಂತೆ ಶಿಸ್ತು ನಿರ್ವಹಣಾ ತಂಡ ಹಾಗೂ ವಿವಿಧ ಹೌಸ್‌ಗಳ ನಾಯಕರು ಮತ್ತು ಪದಾಧಿಕಾರಿಗಳಿಗೆ ಅಧಿಕಾರ ಪ್ರದಾನ ಮಾಡಿ ಪ್ರಮಾಣವಚನ ಬೋಧಿಸಲಾಯಿತು.

ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಶಿಸ್ತುಬದ್ಧ ಪಥಸಂಚಲನ ನಡೆಸಿ, ನಂತರ ಪ್ರಮಾಣವಚನ ಸ್ವೀಕರಿಸಿದರು. ವಿದ್ಯಾರ್ಥಿಗಳಿಂದ ಭರತನಾಟ್ಯ ಸೇರಿದಂತೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವೇದಿಕೆಯಲ್ಲಿ ಉಪಪ್ರಾಂಶುಪಾಲ ವಿ.ಎಸ್.ಪೊಲೀಸ್ ಗೌಡರ, ಗುಳೇದಗುಡ್ಡ ಬಿಪ್ಸ್ ಶಾಲೆಯ ಪ್ರಾಂಶುಪಾಲ ರಾಜಶೇಖರ ಬಿ., ಬಾಗಲಕೋಟೆ ಬಿಪ್ಸ ಶಾಲೆಯ ಪ್ರಾಂಶುಪಾಲೆ ಮಂಗಳಗೌರಿ ಹೆಗಡೆ ಉಪಸ್ಥಿತರಿದ್ದರು.

# ಜಿಲ್ಲಾ ಕಾನಿಪ ಸಂಘದ ಪ್ರಶಸ್ತಿಗಳಿಗೆ ನಾಲ್ವರ ಆಯ್ಕೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ಪತ್ರಿಕಾ ಕ್ಷೇತ್ರದ ಅತ್ಯುತ್ತಮ ಸೇವೆಗಾಗಿ ಜಿಲ್ಲೆಯ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೊಡಮಾಡುವ 2026 ನೇ ಸಾಲಿನ ಪ್ರಶಸ್ತಿಗಳಿಗೆ ಜಿಲ್ಲೆಯ ನಾಲ್ವರು ಪತ್ರಕರ್ತರನ್ನು ಆಯ್ಕೆ ಮಾಡಲಾಗಿದೆ.

ಜುಲೈ 31ರಂದು ನಡೆಯುವ ಜಿಲ್ಲಾಮಟ್ಟದ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ದಿ.ಶ್ರೀಶೈಲ ಅಂಗಡಿ ಸ್ಮರಣಾರ್ಥ ಕೊಡಮಾಡುವ 'ಸಂಜೆದರ್ಶನ' ಪ್ರಶಸ್ತಿಗೆ ಸಂಯುಕ್ತ ಕರ್ನಾಟಕ ವರದಿಗಾರ ಅಭಯ ಮನಗೂಳಿ, ದಿ.ಶರಣಬಸವರಾಜ ಜಿಗಜಿನ್ನಿ ಸ್ಮರಣಾರ್ಥ ನೀಡುವ 'ಸತ್ಯಾಶ್ರಯ' ಪ್ರಶಸ್ತಿಗೆ ವಿಜಯ ಕರ್ನಾಟಕ ವರದಿಗಾರ ಲಿಂಗರಾಜ ಚಿನಿವಾಲರ, ದಿ.ರಾಮು ಮನಗೂಳಿ ಸ್ಮರಣಾರ್ಥ ಉಮೇಶ ಪೂಜಾರಿ ನೀಡುವ 'ಸವಿನುಡಿ' ಪ್ರಶಸ್ತಿಗೆ ಉದಯವಾಣಿ ವರದಿಗಾರ ಶ್ರೀಶೈಲ ಬಿರಾದಾರ ಹಾಗೂ ದಿ.ಎನ್.ಎಚ್.ಶಾಲಗಾರ ಸ್ಮರಣಾರ್ಥ ಕೊಡಮಾಡುವ 'ಸಮಾಜವೀರ' ಪ್ರಶಸ್ತಿಗೆ ಸುದಿನ ಪತ್ರಿಕೆ ಸಂಪಾದಕ ಸುಭಾಸ ಹೊದ್ಲೂರ ಆಯ್ಕೆಯಾಗಿದ್ದಾರೆ.

ಈ ವರ್ಷದಿಂದ ಪತ್ರಿಕಾ ವಿತರಕರಿಗೆ ದಿ.ತಾಯಮ್ಮ ಕಲ್ಲಪ್ಪಗೌಡ ಬಿರಾದಾರ ಸ್ಮರಣಾರ್ಥ ನೀಡಲಾಗುವ 'ಕಾಯಕ ಪ್ರಶಸ್ತಿ'ಗೆ ಶಿರೂರಿನ ಸಂಗನಬಸವ್ವ ಬಸಪ್ಪ ಡಾವಣಗೆರೆ ಅವರನ್ನು ಆಯ್ಕೆ ಮಾಡಲಾಗಿದೆ.

ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ, ಪ್ರಶಸ್ತಿ ಪತ್ರ, ನಗದು ನೀಡಿ ಗೌರವಿಸಲಾಗುವುದು ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಗದೀಶ ಗಾಣಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಚ್ಛತೆಗೆ ಮೂಲ ಕಾರಣ ಪೌರಕಾರ್ಮಿಕರು: ಶಾಸಕ



• **ಮಲ್ಲಮ್ಮ ನುಡಿ ವಾರ್ತೆ ಹಳಿಯಾಳ**

ನಗರ ಪಟ್ಟಣ ಸ್ವಚ್ಛವಾಗಿಡಲು ಪೌರಕಾರ್ಮಿಕರ ಪರಿಶ್ರಮ ಅವರು ನಾಡಿನ ದೊಡ್ಡ ಶಕ್ತಿ ಪೌರಕಾರ್ಮಿಕರಿಗೆ ಗೌರವದಿಂದ ನೋಡಬೇಕು ನಿರಂತರ ಸಾರ್ವಜನಿಕ ಸೇವಾ ಕಾರ್ಯದಲ್ಲಿ ತಮ್ಮ ಜೀವನವನ್ನು ಸಾಗಿಸುತ್ತ ಸ್ವಚ್ಛತೆಗೆ ಮೂಲ ಕಾರಣ ಇವರೇ ಇವರ ಕಷ್ಟ ತೊಂದರೆಗಳಿಗೆ ಸ್ಪಂದಿಸುವ ನಾಡಿನ ರಾಜ್ಯದ ಪೌರ ಸೇವಾ ನೌಕರರ ಸೇವಾ ಸಂಘ ಕಾರ್ಯ ನಿರ್ವಹಿಸುತ್ತಿರುವುದು ಎಲ್ಲಾ ಪೌರ್ಮ ಪೌರಕಾರ್ಮಿಕರಿಗೆ ಸ್ಪಂದಿಸುವ ಅಲ್ಲಿ ಯಶಸ್ಸು ಕಾಣಲಿ ಹಾಗೂ ರಾಜ್ಯ ಅಧ್ಯಕ್ಷ ಶ್ರೀಮತಿ ಶೈಲಾ ಕೇಡಿ ಅವರಿಗೆ ಹಾಗೂ ಸಂಘಕ್ಕೆ ಯಾವತ್ತು ನಮ್ಮ ಸಹಕಾರ ಬೆಂಬಲ ಇದೆ ಎಂದು ಶಾಸಕ ಆರ್ ವಿ ದೇಶಪಾಂಡೆ ತಿಳಿಸಿದರು.

ಇಂದು ಪಟ್ಟಣದ ಪುರಸಭೆಯ ಪ್ರಭಾವನದಲ್ಲಿ ನಡೆದ ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘದ ರಾಜ್ಯ ಅಧ್ಯಕ್ಷರಿಗೆ ಉತ್ತರ ಕನ್ನಡ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭ ಅಚ್ಚುಕಟ್ಟಾಗಿ ನೆರವೇರಿತು ಈ ಸಮಾರಂಭದಲ್ಲಿ ಹುಬ್ಬಳ್ಳಿ ಧಾರವಾಡ ಅಳ್ನಾವರ ಗದಗ ಬೆಳಗಾವಿ ಕಾರವಾರದ ಪೌರ ಕಾರ್ಮಿಕರ ಇಲಾಖೆಯ ಹಾಗೂ ಪದಾಧಿಕಾರಿಗಳು ಭಾಗಿಯಾಗಿ ಸಮಾರಂಭದಲ್ಲಿ ಸಂಘದ ರಾಜ್ಯಾಧ್ಯಕ್ಷ ಶ್ರೀಮತಿ ಶೈಲಾ ಕೇಡಿ ಅವರಿಗೆ ಸನ್ಮಾನಿಸಿದರು ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯಾಧ್ಯಕ್ಷರು ಯಾವತ್ತು ಸಂಘಟನೆ ನಿಮ್ಮ ಬೆಂಬಲಕ್ಕೆ ನಿಲ್ಲುತ್ತದೆ ಹೊರಗುತ್ತಿಗೆ ದಿನಗೂಲಿ ನೌಕರರಿಗಾಗಿ ಸಮರ್ಪಕ ಸೇವೆ ಹಾಗೂ ವೇತನಕ್ಕೆ ಯಾವತ್ತು ಬೆಂಬಲವಾಗಿ ನಿಂತು ತಮ್ಮ ಕೆಲಸದ ಸಮಯದಲ್ಲಿ ಆಗುವ ಎಲ್ಲಾ ಕಾರ್ಯಗಳಿಗೆ ಬೆಂಬಲವಾಗಿ ನಿಲ್ಲುತ್ತೇವೆ ಎಂದು ಹಾಗೂ ಸ್ಥಳೀಯವಾಗಿ ಪುರಸಭೆ ಪಟ್ಟಣ ಪಂಚಾಯತ್ ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಮುಖ್ಯ ಅಧಿಕಾರಿಗಳು ಆಯುಕ್ತರು ತಮ್ಮ ವ್ಯಾಪ್ತಿಯಲ್ಲಿಯೇ ಪೌರಕಾರ್ಮಿಕರಿಗೆ ಸ್ಪಂದಿಸಿ ಅವರ ಕುಂದುಕೊರತೆಗೆ ಸಹಕರಿಸಬೇಕೆಂದರು.

ಈ ಸಮಾರಂಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್ ಪ್ರಸಾದ್ ಹಾಗೂ ರಾಜ್ಯಮಟ್ಟದ ಪದಾಧಿಕಾರಿಗಳು ಮತ್ತು ಉತ್ತರ ಕನ್ನಡ ಜಿಲ್ಲಾಧ್ಯಕ್ಷರಾದ ರಮೇಶ ಮಜುಕರ್ ಶಾಖಾಧ್ಯಕ್ಷರಾದ ಅನಿಲ್ ಛಲವಾದಿ ಶಾಕ ಉಪಾಧ್ಯಕ್ಷರಾದ ನಾಗರಾಜ್ ಕುರಿಯಾರ್ ಮುಖ್ಯ ಅಧಿಕಾರಿ ಅಶೋಕ ಸಾಳೆನ್ನವರ ತಹಸೀಲ್ದಾರ್ ಫಿರೋಜ್ ಷಾ ಸೋಮನಕಟ್ಟಿ ಮತ್ತು ಇಲಾಖೆಯ ಪೌರಕಾರ್ಮಿಕರು ಉಪಸ್ಥಿತರಿದ್ದರು.

ಮಲ್ಲಮ್ಮ ನುಡಿ | ಸಂಪುಟ: 14 ಸಂಚಿಕೆ: 102 Volume 14 Issue 102 | ಪ್ರಾದೇಶಿಕ ಕನ್ನಡ ದಿನ ಪತ್ರಿಕೆ | ಭಾನುವಾರ 26.07.2026 

# ವಿದ್ಯಾರ್ಥಿ–ಯುವಜನರ ಹೋರಾಟಕ್ಕೆ ಸಂದ ಜಯ



**ವಿಜಯಪುರ:** ನೀಟ್ (NEET) ಪರೀಕ್ಷೆಯಲ್ಲಿ ನಡೆದ ಅಕ್ರಮಗಳು ಹಾಗೂ ಅವ್ಯವಹಾರಗಳ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ದೇಶದ ವಿದ್ಯಾರ್ಥಿ ಮತ್ತು ಯುವಜನರ ನಿರಂತರ ಹೋರಾಟಕ್ಕೆ ದೊರೆತ ಮಹತ್ವದ ಜಯವಾಗಿದೆ ಎಂದು ದಲಿತ ವಿದ್ಯಾರ್ಥಿ ಪರಿಷತ್ ಹೇಳಿದೆ. ಸಂಘಟನೆಯ ರಾಜ್ಯ ಅಧ್ಯಕ್ಷ ಶ್ರೀನಾಥ ಪೂಜಾರಿ ಅವರು ಪ್ರಕಟಣೆಯಲ್ಲಿ ಮಾತನಾಡಿ, ದೇಶದಾದ್ಯಂತ ವಿದ್ಯಾರ್ಥಿಗಳು, ಯುವಜನರು ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳು ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳ ವಿರುದ್ಧ ನಿರಂತರವಾಗಿ ಧ್ವನಿ ಎತ್ತಿದ್ದರು. ಈ ಜನಾಭಿಪ್ರಾಯ ಮತ್ತು ಹೋರಾಟದ ಒತ್ತಡದ ಪರಿಣಾಮವಾಗಿ ಕೇಂದ್ರ ಸರ್ಕಾರ ತನ್ನ ತಪ್ಪನ್ನು ಒಪ್ಪಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಪ್ರಜಾಪ್ರಭುತ್ವದಲ್ಲಿ ಜನರ ಧ್ವನಿಯ ಶಕ್ತಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುವ ಯಾವುದೇ ನೀತಿ ಅಥವಾ ಆಡಳಿತ ವೈಫಲ್ಯವನ್ನು ದೇಶದ ಯುವಜನತೆ ಸಹಿಸುವುದಿಲ್ಲ ಎಂಬ ಸ್ಪಷ್ಟ ಸಂದೇಶ ಈ ಬೆಳವಣಿಗೆಯಿಂದ ಕೇಂದ್ರ ಸರ್ಕಾರಕ್ಕೆ ತಲುಪಿದೆ. ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ವಿದ್ಯಾರ್ಥಿ ಮತ್ತು ಯುವಜನ ವಿರೋಧಿ ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಎಚ್ಚರಿಕೆಯಿಂದ ನಡೆದುಕೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಸಮಾನ ಅವಕಾಶಗಳನ್ನು ಖಚಿತಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ಸುಧಾರಣೆಗಳನ್ನು ಜಾರಿಗೆ ತರಬೇಕು. ವಿದ್ಯಾರ್ಥಿಗಳ ಭವಿಷ್ಯವನ್ನು ರಾಜಕೀಯ ಅಥವಾ ಆಡಳಿತಾತ್ಮಕ ವೈಫಲ್ಯಗಳ ಬಲಿಯಾಗಲು ಬಿಡಬಾರದು ಎಂದು ದಲಿತ ವಿದ್ಯಾರ್ಥಿ ಪರಿಷತ್ ಆಗ್ರಹಿಸಿದೆ. ವಿದ್ಯಾರ್ಥಿಗಳ ಹಿತಾಸಕ್ತಿ, ಸಾಮಾಜಿಕ ನ್ಯಾಯ ಹಾಗೂ ಗುಣಮಟ್ಟದ ಶಿಕ್ಷಣಕ್ಕಾಗಿ ದಲಿತ ವಿದ್ಯಾರ್ಥಿ ಪರಿಷತ್ ಮುಂದೆಯೂ ತನ್ನ ಹೋರಾಟವನ್ನು ನಿರಂತರವಾಗಿ ಮುಂದುವರಿಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಂಶೋಧನೆಯಿಂದ ಉತ್ತಮ ಆಡಳಿತಕ್ಕೆ ಬಲ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಸಾಮಾಜಿಕ ಕಾರ್ಯ ಕ್ಷೇತ್ರದಲ್ಲಿ ನಡೆಯುವ ಸಂಶೋಧನೆಗಳು ಮತ್ತು ಸಂಶೋಧನಾ ವರದಿಗಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಕಲ್ಯಾಣ ಕಾರ್ಯಕ್ರಮಗಳು ಮತ್ತು ಅಭಿವೃದ್ಧಿ ನೀತಿಗಳನ್ನು ರೂಪಿಸಲು ಅಮೂಲ್ಯ ಮಾಹಿತಿಯನ್ನು ಒದಗಿಸುತ್ತವೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಹೇಳಿದರು.

ಕೇಂದ್ರೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಮಾಜ ಕಾರ್ಯ ವಿಭಾಗದ ವತಿಯಿಂದ ಸಂಶೋಧನೆ, ಬರವಣಿಗೆ ಮತ್ತು ಪ್ರಕಟಣೆ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಸರ್ಕಾರಿ ಯೋಜನೆಗಳ ಪ್ರಯೋಜನಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಹಾಗೂ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಸಮಾಜ ಕಾರ್ಯ ಸಂಶೋಧಕರು ಮತ್ತು ವೃತ್ತಿಪರರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಇಂತಹ ಸಂಶೋಧನೆಗಳು ಸರ್ಕಾರದ ಉತ್ತಮ ಆಡಳಿತಕ್ಕೆ ಬಲ ತುಂಬುತ್ತವೆ ಎಂದರು.

ಸಮಾಜ ಕಾರ್ಯ ಕ್ಷೇತ್ರದ ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವೃತ್ತಿಪರರು ಗ್ರಾಮ ಸಮೀಕ್ಷೆಗಳು, ಕ್ಷೇತ್ರ ಭೇಟಿ, ದತ್ತಾಂಶ ಸಂಗ್ರಹಣೆ, ಸಮುದಾಯಗಳೊಂದಿಗೆ ಸಂವಹನ ಹಾಗೂ ಸಮುದಾಯ ಆಧಾರಿತ ಸಂಶೋಧನೆಗಳ ಮೂಲಕ ತಳಮಟ್ಟದ ವಾಸ್ತವಾಂಶಗಳನ್ನು ಅರ್ಥಮಾಡಿಕೊಳ್ಳುವಲ್ಲಿ ಅವರು ಪ್ರಮುಖ ಪಾತ್ರ ವಹಿಸುತ್ತಾರೆ. ಹೀಗಾಗಿ ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಸಮಾಜದ ಅಗತ್ಯಗಳಿಗೆ ಸ್ಪಂದಿಸುವ, ನೈತಿಕ ಮೌಲ್ಯಗಳನ್ನು ಒಳಗೊಂಡ ಹಾಗೂ ಸಮಾಜ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಸಹಕಾರಿಯಾಗುವ ಗುಣಮಟ್ಟದ ಸಂಶೋಧನೆಗಳನ್ನು ಕೈಗೊಳ್ಳುವಂತೆ ಅವರು ಕರೆ ನೀಡಿದರು.

ಆಸ್ಟ್ರೇಲಿಯಾದ ಚಾರ್ಲ್ಸ್ ಸ್ಟರ್ಟ್ ವಿಶ್ವವಿದ್ಯಾಲಯದ ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕರೂ, ಸಿಯುಕೆಯ ಸಂದರ್ಶಕ ಪ್ರಾಧ್ಯಾಪಕರೂ ಆಗಿರುವ ಪ್ರೊ. ಮನೋಹರ್ ಪವಾರ್ ಅವರು ವಿಶೇಷ ಉಪನ್ಯಾಸ ನೀಡಿದರು. ಸಂಶೋಧನಾ ವಿಧಾನ, ಶೈಕ್ಷಣಿಕ ಬರವಣಿಗೆ, ಪ್ರಕಟಣಾ ನೀತಿಶಾಸ್ತ್ರ ಹಾಗೂ ಪ್ರತಿಷ್ಠಿತ ಸಂಶೋಧನಾ ನಿಯತಕಾಲಿಕೆಗಳಲ್ಲಿ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ಪ್ರಕಟಿಸುವ ಮಹತ್ವದ ಕುರಿತು ಅವರು ಉಪನ್ಯಾಸ ನೀಡಿದರು. ಸಂಶೋಧನಾ ಸಮಗ್ರತೆಯನ್ನು ಕಾಪಾಡಿಕೊಂಡು ಸಮಾಜಕ್ಕೆ ಉಪಯುಕ್ತವಾಗುವ ಪರಿಣಾಮಕಾರಿ ಶೈಕ್ಷಣಿಕ ಕೃತಿಗಳನ್ನು ರಚಿಸುವಂತೆ ಅವರು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಕಾರ್ಯಕ್ರಮದಲ್ಲಿ ಸಮಾಜ ಹಾಗೂ ವರ್ತನಾ ವಿಜ್ಞಾನ ನಿಕಾಯದ ಡೀನ್ ಪ್ರೊ. ಪವಿತ್ರಾ ಆರ್. ಆಲೂರ್, ಪ್ರೊ. ಚನ್ನವೀರ್ ಆರ್. ಎಂ., ಡಾ. ಚಿತ್ಕಲಾ ವೆಂಕರೆಡ್ಡಿ, ಡಾ. ಎಂ. ಶಿವಮೂರ್ತಿ, ಡಾ. ಹರೀಶ್, ಡಾ. ರವೀಂದರ್ ಕುಮಾರ್ ಹಾಗೂ ಡಾ. ಶ್ರೀನಿವಾಸ್ ಡಿ. ಸೇರಿದಂತೆ ಅಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಡಾ. ಲಕ್ಷ್ಮಣ ಜಿ ಸ್ವಾಗತಿಸಿದರು. ಡಾ. ಎಂ. ಶಿವಮೂರ್ತಿ ವಂದಿಸಿದರು. ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳಿಂದ ವಂದೇ ಮಾತರಂ ಗಾಯನದೊಂದಿಗೆ ಕಾರ್ಯಕ್ರಮ ಆರಂಭಗೊಂಡು ರಾಷ್ಟ್ರಗೀತೆಯೊಂದಿಗೆ ಸಮಾರೋಪಗೊಂಡಿತು.

# ಎಸ್ಐಆರ್ ಕುರಿತು ಭಿತ್ತಿಚಿತ್ರ ಸ್ಪರ್ಧೆ ಮೂಲಕ ಜಾಗೃತಿ




**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026 ಅಂಗವಾಗಿ ವಿದ್ಯಾರ್ಥಿಗಳಲ್ಲಿ ಎಸ್.ಆಯ್.ಆರ್. ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ, ಶಾಲಾ ಹಾಗೂ ಕಾಲೇಜುಗಳಲ್ಲಿ ಸ್ಥಾಪಿತವಾಗಿರುವ ಇಎಲ್‌ಸಿ ರಾಯಭಾರಿಗಳಿಗೆ ಆಯೋಜಿಸಿದ್ದ ಭಿತ್ತಿಚಿತ್ರ ಸ್ಪರ್ಧೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ದಿಲೀಷ ಶಶಿ ಶನಿವಾರ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲರ ಸಹಕಾರದಿಂದ ಎಸ್.ಐ.ಆರ್ ಪರಿಷ್ಕರಣೆಯ ಕಾರ್ಯದಲ್ಲಿ ಜಿಲ್ಲೆಯು ರಾಜ್ಯದ ಟಾಪ್ 5 ರೊಳಗೆ ಸ್ಥಾನ ಪಡೆದಿರುವುದು ಹೆಮ್ಮೆಯ ವಿಚಾರವಾಗಿದೆ. ಎಸ್. ಐ. ಆರ್. ಕುರಿತು ವ್ಯಾಪಕ ರೀತಿಯಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸ್ಪರ್ಧೆಯಲ್ಲಿ ಸ್ವತಃ ಚಿತ್ರ ಬಿಡಿಸುವ ಮೂಲಕ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಡಾ.ದಿಲೀಷ್ ಶಶಿ ಸ್ಫೂರ್ತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿ. ಪಂ. ಮುಖ್ಯ ಯೋಜನಾಧಿಕಾರಿ ಸೋಮಶೇಖರ ಮೇಸ್ತಾ, ಸ್ಪರ್ಧೆಯ ನಿರ್ಣಾಯಕರಾದ ಚಿತ್ರಕಲಾ ಶಿಕ್ಷಕರಾದ ಸಂಜೀವ ಬಸವಾಡ, ಗಣೇಶ್ ವಾಜಂತ್ರಿ ಹಾಗೂ ಜಿಲ್ಲಾ ಪಂಚಾಯತ್ ಸಿಬ್ಬಂದಿಗಳು ಮತ್ತಿತರರು ಭಾಗಿಯಾಗಿದ್ದರು.

# ಎಸ್ಐಆರ್: ಮತದಾರರ ಜಾಗೃತಿ ಸಭೆ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ (SIR) ಕಾರ್ಯಕ್ರಮದ ಅಂಗವಾಗಿ ಮತದಾರರ ಜಾಗೃತಿ ಮಹಾ ಅಭಿಯಾನ ಕುರಿತು ವಡ್ರಟ್ಟಿ ಗ್ರಾಮದಲ್ಲಿ ಒಂಬತ್ತು ಬಿ.ಎಲ್.ಒ.ಗಳ ಸಭೆ ನಡೆಯಿತು.

ಸಭೆಯು ಗಂಗಾವತಿ ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ಡಿ.ಕೆ. ಆಗೋಲಿ ಅವರ ನೇತೃತ್ವದಲ್ಲಿ ನಡೆದಿದ್ದು, ಎಸ್ಐಆರ್ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸುವುದು, ಮನೆ–ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿಯನ್ನು ಪರಿಶೀಲಿಸುವುದು ಹಾಗೂ ಹೊಸ ಮತದಾರರ ನೋಂದಣಿ, ತಿದ್ದುಪಡಿ ಮತ್ತು ಹೆಸರು ಸೇರ್ಪಡೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಪಕ್ಷದ ಮುಖಂಡರಾದ ಶಿವಪ್ಪ ಹತ್ತಿಮರದ, ದುರ್ಗಪ್ಪ ನಾಯಕ ದಳಪತಿ, ಚಿನ್ನಪ್ಪ ನಾಯಕ್, ಡಾ. ಮಹೇಶ್, ಸೋಮಯ್ಯ, ಬಸವರಾಜ್ ಸಂಗಟ್ಟಿ, ಕಲ್ಲಪ್ಪ ಗಡ್ಡಿ, ಬಸವಂತ ಪಾಟೀಲ್, ಮಲ್ಲಿನಾಯಕ್, ಪ್ರವೀಣ್ ಕುಮಾರ್, ಆರ್. ಕೆ. ರಮೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕಿಷ್ಕಿಂದಾ ಕಾಲೇಜಿನಲ್ಲಿ ಫ್ರೆಶರ್ಸ್ ಪಾರ್ಟಿ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ನಗರದ ಕಿಷ್ಕಿಂದಾ ಪಿಯು ಕಾಲೇಜಿನಲ್ಲಿ ನೂತನ ವಿದ್ಯಾರ್ಥಿಗಳನ್ನು ಸ್ವಾಗತಿಸುವ ಉದ್ದೇಶದಿಂದ "Freshers Party" ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಗಣ್ಯರು ದೀಪ ಬೆಳಗಿಸುವ ಮೂಲಕ ಉದ್ಘಾಟನೆ ನೆರವೇರಿಸಿದರು. ವೇದಿಕೆಯಲ್ಲಿ ಕಾಲೇಜಿನ ಆಡಳಿತ ಮಂಡಳಿ ಸದಸ್ಯರು, ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಆಹ್ವಾನಿತ ಅತಿಥಿಗಳು ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಅತಿಥಿಗಳು ಮಾತನಾಡಿ, ಕಾಲೇಜು ಜೀವನವು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ಘಟ್ಟವಾಗಿದ್ದು, ಶಿಕ್ಷಣದ ಜೊತೆಗೆ ವ್ಯಕ್ತಿತ್ವ ವಿಕಸನ, ಶಿಸ್ತು ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವಂತೆ ಸಲಹೆ ನೀಡಿದರು. ಹೊಸ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ವಿದ್ಯಾಭ್ಯಾಸದಲ್ಲಿ ತೊಡಗಿ ಕಾಲೇಜಿನ ಹೆಸರನ್ನು ಎತ್ತಿಹಿಡಿಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು, ಮನರಂಜನಾ ಕಾರ್ಯಕ್ರಮಗಳು ಹಾಗೂ ವಿದ್ಯಾರ್ಥಿಗಳ ಪ್ರತಿಭಾ ಪ್ರದರ್ಶನಗಳು ಎಲ್ಲರ ಗಮನ ಸೆಳೆದವು. ನೂತನ ವಿದ್ಯಾರ್ಥಿಗಳು ಸಂಭ್ರಮದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾಲೇಜು ಕುಟುಂಬದೊಂದಿಗೆ ಬೆರೆತು ಹೊಸ ಅನುಭವವನ್ನು ಪಡೆದರು.

ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರ ಉಪಸ್ಥಿತಿಯಲ್ಲಿ ಫ್ರೆಶರ್ಸ್ ಪಾರ್ಟಿ ಯಶಸ್ವಿಯಾಗಿ ನಡೆಯಿತು.

# ಜು.25ರ ವರೆಗೆ ಮತದಾರರ ಗಣತಿ ನಮೂನೆ ಪ್ರಗತಿ ವರದಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕರ್ನಾಟಕದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಎಸ್ಐಆರ್ ಪ್ರಕ್ರಿಯೆ ಹಿನ್ನೆಲೆ ಮನೆ ಮನೆಗೆ ಭೇಟಿ ನೀಡಿ ಮತದಾರರ ಗಣತಿ ನಮೂನೆಗಳನ್ನು ಎಣಿಕೆಯ ನಮೂನೆಗಳು ಅರ್ಜಿ ವಿತರಿಸುವ ಕಾರ್ಯವನ್ನು ಬಿಎಲ್ಒಗಳು ಆರಂಭಿಸಿದೆ ಎಂದು ಬೀದರ ಜಿಲ್ಲಾಧಿಕಾರಿಗಳ ಕಛೇರಿ ಚುನಾವಣಾ ತಹಸೀಲ್ದಾರ ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಎಸ್ಐಆರ್ ಪ್ರಕ್ರಿಯೆಯಲ್ಲಿ ಬೀದರ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳಲ್ಲಿ ಈ ಕೆಳಂಡ ನಮೂದಿಸಿರುವ ದತ್ತಾಂಶದಂತೆ ಪ್ರಗತಿಯನ್ನು ಸಾಧಿಸಲಾಗಿದೆ.

ಬಸವಕಲ್ಯಾಣ–47 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 257095 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 205900 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 10981 ಆಗಿದೆ.

ಹುಮನಾಬಾದ–48 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 262818 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 200810 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 15958 ಆಗಿದೆ.

ಬೀದರ(ದಕ್ಷಿಣ)–49 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 219880 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 167031 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 16896 ಆಗಿದೆ.

ಬೀದರ–50 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 248809 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 157118 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 14913 ಆಗಿದೆ.

ಭಾಲ್ಕಿ–51 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 243811 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 200333 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 20759 ಆಗಿದೆ.

ಔರಾದ(ಬಿ)–52 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 229546 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 178075 ಸ್ವೀಕತಗೊಂಡಿದೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 9439 ಆಗಿದೆ.

ಜಿಲ್ಲೆಯಲ್ಲಿ 6 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 1461959 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 1109267 ಸ್ವೀಕತಗೊಂಡಿವೆ. ಸಂಗ್ರಹಿಸಲಾಗದ ಎಣಿಕೆ ನಮೂನೆ 88946 ಆಗಿದೆ. ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಧ್ವನಿಯನ್ನು ಆಲಿಸಿ, ಪ್ರಜಾಪ್ರಭುತ್ವವನ್ನು ಬಲಪಡಿಸಿ



**ವಿದ್ಯಾರ್ಥಿ ಧ್ವನಿ**

● ಅಶೋಕ ಪಾಟೀಲ
ಪತ್ರಕರ್ತರು, ಕಲಬುರಗಿ

ಭಾರತವು ವಿಶ್ವದ ಅತಿ ಹೆಚ್ಚು ಯುವಜನಸಂಖ್ಯೆ ಹೊಂದಿರುವ ರಾಷ್ಟ್ರ. ದೇಶದ ಅಭಿವೃದ್ಧಿಯ ಅಡಿಪಾಯವೇ ಯುವಜನತೆ. ಅವರ ಕನಸು, ಪರಿಶ್ರಮ ಮತ್ತು ಪ್ರತಿಭೆ ನಾಳೆಯ ಭಾರತದ ಶಕ್ತಿ. ಉದ್ಯೋಗ ಮತ್ತು ಸಮಾನ ಅವಕಾಶಗಳ ಕನಸಿನೊಂದಿಗೆ ಕೋಟ್ಯಂತರ ವಿದ್ಯಾರ್ಥಿಗಳು ಪ್ರತಿದಿನ ಹೋರಾಟ ನಡೆಸುತ್ತಿದ್ದಾರೆ. "ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳು ಬೀದಿಗಿಳಿದು ತಮ್ಮ ಅಳಲನ್ನು ವ್ಯಕ್ತಪಡಿಸುತ್ತಿರುವುದು ಕೇವಲ ಒಂದು ಪ್ರತಿಭಟನೆ ಅಲ್ಲ, ಅದು ದೇಶದ ಆಡಳಿತ ವ್ಯವಸ್ಥೆಗೆ ಕೇಳಿಬರುತ್ತಿರುವ ಎಚ್ಚರಿಕೆಯ ಗಂಟೆಯಾಗಿದೆ."

ಇತ್ತೀಚಿನ ದಿನಗಳಲ್ಲಿ ದೆಹಲಿಯಲ್ಲಿ ವಿದ್ಯಾರ್ಥಿಗಳು ಮತ್ತು ಸಾಮಾಜಿಕ ಹೋರಾಟಗಾರರು ನಡೆಸುತ್ತಿರುವ ಪ್ರತಿಭಟನೆಗಳು ರಾಷ್ಟ್ರದ ಗಮನ ಸೆಳೆದಿವೆ. ಪರಿಸರ ಸಂರಕ್ಷಣೆ, ಸಾರ್ವಜನಿಕ ಹಿತಾಸಕ್ತಿ ಹಾಗೂ ಜನರ ಹಕ್ಕುಗಳ ಕುರಿತು ಧ್ವನಿ ಎತ್ತುತ್ತಿರುವ ಸೋನಂ ವಾಂಗ್ಚುಕ್ ಅವರಂತಹ ವ್ಯಕ್ತಿಗಳ ಹೋರಾಟವಾಗಲಿ ಅಥವಾ ವಿದ್ಯಾರ್ಥಿಗಳ ನ್ಯಾಯಸಮ್ಮತ ಬೇಡಿಕೆಗಳಾಗಲಿ, ಅವುಗಳ ಮೂಲ ಉದ್ದೇಶ ಒಂದೇ, ಸರಕಾರ ಪ್ರಜೆಗಳ ಧ್ವನಿಯನ್ನು ಕೇಳಬೇಕೆಂಬುದು.

ಒಬ್ಬ ವಿದ್ಯಾರ್ಥಿ ಸರ್ಕಾರಿ ಉದ್ಯೋಗ ಅಥವಾ ಉನ್ನತ ಶಿಕ್ಷಣದ ಅವಕಾಶಕ್ಕಾಗಿ ವರ್ಷಗಟ್ಟಲೆ ಶ್ರಮಿಸುತ್ತಾನೆ. ಅವನ ಕುಟುಂಬದ ನಿರೀಕ್ಷೆಗಳು, ಆರ್ಥಿಕ ಒತ್ತಡ, ಸ್ಪರ್ಧೆಯ ತೀವ್ರತೆ ಇವೆಲ್ಲವನ್ನು ಎದುರಿಸಿ ಪರೀಕ್ಷೆಗೆ ಹಾಜರಾಗುತ್ತಾನೆ. ಅಂತಹ ಸಂದರ್ಭದಲ್ಲಿ ಪರೀಕ್ಷೆಗಳ ಪಾರದರ್ಶಕತೆ ಅಥವಾ ನ್ಯಾಯಸಮ್ಮತತೆಯ ಬಗ್ಗೆ ಅನುಮಾನಗಳು ಮೂಡಿದರೆ ಅದು ನ್ಯಾಯಸಮ್ಮತವಲ್ಲ. "ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಶಾಂತಿಯುತವಾಗಿ ಪ್ರತಿಭಟಿಸುವ ಹಕ್ಕನ್ನು ನೀಡಿದೆ. ಆ ಹಕ್ಕನ್ನು ಗೌರವಿಸುವುದು ಸರಕಾರದ ಕರ್ತವ್ಯ." ಅದೇ ಸಮಯದಲ್ಲಿ ಕಾನೂನು ಮತ್ತು ಸಾರ್ವಜನಿಕ ಶಾಂತಿಯನ್ನು ಕಾಪಾಡುವುದು ಪ್ರತಿಭಟನಾಕಾರರ ಜವಾಬ್ದಾರಿಯೂ ಹೌದು. "ಪ್ರಜಾಪ್ರಭುತ್ವದ ನಿಜವಾದ ಶಕ್ತಿ ಸಂವಾದದಲ್ಲಿದೆ, ಸಂಘರ್ಷದಲ್ಲಲ್ಲ."

ಇಂದು ವಿದ್ಯಾರ್ಥಿಗಳ ನೋವು ಕೇವಲ ಒಂದು ಪರೀಕ್ಷೆ ಅಥವಾ ಒಂದು ನೇಮಕಾತಿಗೆ ಸೀಮಿತವಾಗಿಲ್ಲ. ಪರೀಕ್ಷೆಗಳ ವಿಶ್ವಾಸಾರ್ಹತೆ, ನೇಮಕಾತಿಗಳ ವಿಳಂಬ, ಉದ್ಯೋಗದ ಕೊರತೆ ಮತ್ತು ಹೆಚ್ಚುತ್ತಿರುವ ಸ್ಪರ್ಧೆ ಇವೆಲ್ಲವೂ ಯುವ ಮನಸ್ಸನ್ನು ಕಂಗೆಡಿಸುತ್ತಿವೆ. ಒಂದು ಕುಟುಂಬ ತಮ್ಮ ಮಕ್ಕಳ ಶಿಕ್ಷಣಕ್ಕಾಗಿ ವರ್ಷಗಳ ಕಾಲ ದುಡಿದು ಹಣ ಖರ್ಚು ಮಾಡುತ್ತದೆ. ಅಂತಿಮವಾಗಿ ನ್ಯಾಯಸಮ್ಮತ ಅವಕಾಶವೇ ಸಿಗದಿದ್ದರೆ, ಅದು ಕೇವಲ ಒಬ್ಬ ವಿದ್ಯಾರ್ಥಿಯ ಸೋಲಲ್ಲ, ಸಮಾಜದಲ್ಲಿರುವ ಜನರ ವಿಶ್ವಾಸಕ್ಕೆ ಆಗುವ ದೊಡ್ಡ ಹೊಡೆತವಾಗಿದೆ.

ಇಂದು ದೇಶದ ಯುವಕರು ಕೇವಲ ಉದ್ಯೋಗವನ್ನೇ



ಬೇಡುತ್ತಿಲ್ಲ. ಅವರಿಗೆ ನ್ಯಾಯಯುತ ಸ್ಪರ್ಧೆ, ಪಾರದರ್ಶಕ ಪರೀಕ್ಷಾ ವ್ಯವಸ್ಥೆ ಮತ್ತು ಸಮಾನ ಅವಕಾಶಗಳು ಬೇಕಾಗಿವೆ. ಪ್ರತಿಭಾವಂತರಿಗೆ ನ್ಯಾಯ ಸಿಗುವ ವ್ಯವಸ್ಥೆ ನಿರ್ಮಾಣವಾಗದಿದ್ದರೆ, ಅವರಲ್ಲಿ ನಿರಾಸೆ ಮತ್ತು ಅಸಮಾಧಾನ ಬೆಳೆಯುವುದು ಸಹಜ. ಅದು ಸಮಾಜದ ದೀರ್ಘಕಾಲೀನ ಅಭಿವೃದ್ಧಿಗೂ ಹಾನಿಕಾರಕ.

ಆದ್ದರಿಂದ ಸರಕಾರವು ವಿದ್ಯಾರ್ಥಿಗಳ ಅಸಮಾಧಾನವನ್ನು ರಾಜಕೀಯ ಕನ್ನಡಕದಿಂದ ನೋಡುವ ಬದಲು, ಆಡಳಿತಾತ್ಮಕ ಜವಾಬ್ದಾರಿಯ ದೃಷ್ಟಿಯಿಂದ ಪರಿಶೀಲಿಸಬೇಕು. ಸಮಸ್ಯೆಗಳಿದ್ದರೆ ಅವುಗಳನ್ನು ಒಪ್ಪಿಕೊಳ್ಳಬೇಕು. ತನಿಖೆ ಅಗತ್ಯವಿದ್ದರೆ ತ್ವರಿತವಾಗಿ ನಡೆಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನಿನ ಮುಂದೆ ಉತ್ತರಿಸಬೇಕು. "ಪಾರದರ್ಶಕತೆ ಮತ್ತು ಉತ್ತರದಾಯಿತ್ವವೇ ಪ್ರಜಾಪ್ರಭುತ್ವದ ನಿಜವಾದ ಬಲ."

ಇಂದು ಭಾರತ ಮುಂದೆ ಬರುವ ದಾರಿ ಕೇವಲ ದೊಡ್ಡ ಕಟ್ಟಡಗಳು, ವೇಗದ ಹೆದ್ದಾರಿಗಳು ಅಥವಾ ಆರ್ಥಿಕ ಬೆಳವಣಿಗೆಯಿಂದ ಮಾತ್ರ ಸಾಧ್ಯವಿಲ್ಲ. ಯುವಜನರ ವಿಶ್ವಾಸವನ್ನು ಗಳಿಸುವುದು, ಅವರ ಪ್ರತಿಭೆಗೆ ನ್ಯಾಯ ಒದಗಿಸುವುದು ಮತ್ತು ಅವರ ಕನಸುಗಳನ್ನು ರಕ್ಷಿಸುವುದೂ ಅಷ್ಟೇ ಮುಖ್ಯ. "ವಿದ್ಯಾರ್ಥಿಗಳ ವಿಶ್ವಾಸ ಕಳೆದುಕೊಂಡ ರಾಷ್ಟ್ರ ಯಾವುದೇ ಕ್ಷೇತ್ರದಲ್ಲೂ ಶಾಶ್ವತ ನಾಯಕತ್ವ ಸಾಧಿಸಲು ಸಾಧ್ಯವಿಲ್ಲ."

ಇಂದು ದೇಶದ ಬಹುತೇಕ ಕುಟುಂಬಗಳಲ್ಲಿ ಶಿಕ್ಷಣ, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಯ ಪ್ರಮುಖ ಸಾಧನವಾಗಿದೆ. ರೈತನ ಮಗ, ಕೂಲಿ ಕಾರ್ಮಿಕನ ಮಗಳು, ಮಧ್ಯಮ ವರ್ಗದ ಯುವಕರು, ಎಲ್ಲರೂ ತಮ್ಮ ಜೀವನವನ್ನು ಶಿಕ್ಷಣದ ಮೂಲಕ ಬದಲಾಯಿಸಬೇಕೆಂದು ಕನಸು ಕಾಣುತ್ತಾರೆ. ಆ ಕನಸುಗಳಿಗೆ ಧಕ್ಕೆಯಾದರೆ ಅದರ ಪರಿಣಾಮ ಕೇವಲ ಒಬ್ಬ ವಿದ್ಯಾರ್ಥಿಯ ಮೇಲೆ ಮಾತ್ರವಲ್ಲ, ಇಡೀ ಸಮಾಜದ ಮೇಲೆ ಬೀಳುತ್ತದೆ. ವಿಷಯ ವ್ಯಕ್ತಿಗಳದ್ದಲ್ಲ, ವಿಷಯ ದೇಶದ ಭವಿಷ್ಯದ್ದು. "ವ್ಯಕ್ತಿಗಳು ಬದಲಾಗುತ್ತಾರೆ, ಆದರೆ ವ್ಯವಸ್ಥೆ ಬಲವಾಗಿರಬೇಕು."

ವಿದ್ಯಾರ್ಥಿಗಳ ಧ್ವನಿಯನ್ನು ಕೇಳುವುದು ಎಂದರೆ ಕೇವಲ ಒಂದು ಪ್ರತಿಭಟನೆಗೆ ಪ್ರತಿಕ್ರಿಯಿಸುವುದಲ್ಲ, ಅದು ಭಾರತದ ಭವಿಷ್ಯವನ್ನು ಆಲಿಸುವುದಾಗಿದೆ. ಸಂವಾದ, ಪಾರದರ್ಶಕತೆ ಮತ್ತು ನ್ಯಾಯಯುತ ಆಡಳಿತದ ಮೂಲಕವೇ ಯುವಜನರಲ್ಲಿ ವಿಶ್ವಾಸವನ್ನು ಬೆಳೆಸಬಹುದು. ರಾಷ್ಟ್ರದ ಪ್ರಗತಿಯ ನಿಜವಾದ ಅಳತೆ ಯುವಕರ ಮುಖದಲ್ಲಿನ ಆಶಾಭಾವನೆ. ಆ ಆಸೆಯನ್ನು ಉಳಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ.

ನೆನಪಿರಲಿ... ಇಂದು ಅಗತ್ಯವಿರುವುದು "ಘರ್ಷಣೆಯಲ್ಲ, ಸಂವಾದ." "ಆರೋಪವಲ್ಲ, ಉತ್ತರದಾಯಿತ್ವ." "ರಾಜಕೀಯವಲ್ಲ, ಜನಹಿತ." ಏಕೆಂದರೆ ವಿದ್ಯಾರ್ಥಿಗಳ ಹೋರಾಟ ಕೇವಲ ಇಂದಿನ ದಿನಕ್ಕಾಗಿ ಅಲ್ಲ, ಅದು ನಾಳಿನ ಭಾರತದ ಭವಿಷ್ಯಕ್ಕಾಗಿ.

ಏನಂತೀರಿ...??

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)